ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 130
31–10–2025 ಶುಕ್ರವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 130

## ದಾವಣಗೆರೆ ಕನಿಪ ಚುನಾವಣೆಯ 25 ಸ್ಥಾನಕ್ಕೆ 55 ಅಭ್ಯರ್ಥಿ ಸ್ಪರ್ಧೆ

**ದಾವಣಗೆರೆ:** ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಪದಾಧಿಕಾರಿಗಳ ಚುನಾವಣೆಗೆ ಅಧ್ಯಕ್ಷ, ಉಪಾಧ್ಯಕ್ಷ, ಪ್ರಧಾನ ಕಾರ್ಯದರ್ಶಿ, ಸದಸ್ಯ ಸೇರಿದಂತೆ ಒಟ್ಟು 25 ಸ್ಥಾನಗಳಿದ್ದು, 55 ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದಾರೆ.

ಚುನಾವಣೆ ಪ್ರಕ್ರಿಯೆ ನ.13ರಿಂದ ಪ್ರಾರಂಭವಾಗಿದ್ದು, ನ.30 ನಾಮಪತ್ರ ಹಿಂಪಡೆದಯಲು ಕೊನೆ ದಿನವಾಗಿರುತ್ತು. ಒಟ್ಟು 67 ನಾಮಪತ್ರ ಸಲ್ಲಿಕೆಯಾಗಿದ್ದು, 11 ಅಭ್ಯರ್ಥಿಗಳು ಗುರುವಾರ ನಾಮಪತ್ರ ಹಿಂಪಡೆದಿದ್ದಾರೆ. ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ್ದ ಮಂಜುನಾಥ ಇ.ಎಂ. ಅವರು ಎರಡು ನಾಮಪತ್ರ ಸಲ್ಲಿಸಿದ್ದು, ಒಂದನ್ನು ವಾಪಸು ಪಡೆದು ಕಣದಲ್ಲಿ ಮುಂದುವರೆದಿದ್ದಾರೆ.

ಅಧ್ಯಕ್ಷ ಒಂದು ಸ್ಥಾನಕ್ಕೆ ಜನತಾವಾಣಿಯ ಮಂಜುನಾಥ ಇ.ಎಂ., ದಾವಣಗೆರೆ ಕನ್ನಡಿಗ ಪತ್ರಿಕೆಯ ಸಂಪಾದಕ ರವಿ ಆರ್. ಹಾಗೂ ದಾವಣಗೆರೆ ಭುವನೇಶ್ವರಿ ಪತ್ರಿಕೆ ಸಂಪಾದಕ ರವಿ ಎನ್.ಆರ್. ಕಣದಲ್ಲಿ ಉಳಿದು ಅದೃಷ್ಟ ಪರೀಕ್ಷೆಗೆ ಮುಂದಾಗಿದ್ದಾರೆ ಎಂದು ಚುನಾವಣಾಧಿಕಾರಿ ಮಲ್ಲಿಕಾರ್ಜುನ್ ಕಬ್ಬೂರು ತಿಳಿಸಿದ್ದಾರೆ.

ಉಪಾಧ್ಯಕ್ಷ ಸ್ಥಾನ ಆಕಾಂಕ್ಷಿಗಳಾಗಿ ಕುಮಾರ್ ಹೆಚ್.ಎಂ.ಪಿ., ನಿಂಗರಾಜ ಹೆಚ್., ಪ್ರಕಾಶ್ ಹೆಚ್. ಎನ್., ಷಣ್ಮುಖ ಸ್ವಾಮಿ ಪಿ., ಶ್ರೀನಿವಾಸ್ ಟಿ., ಸುಭಾನ್ ಸಾಬ್ ಟಿ. ಹಾಗೂ ತಿಪ್ಪೇಸ್ವಾಮಿ ಆರ್. ಎಸ್. ಸ್ಪರ್ಧಿಸಿದ್ದಾರೆ.

ಪ್ರಧಾನ ಕಾರ್ಯದರ್ಶಿ ಒಂದು ಸ್ಥಾನಕ್ಕೆ ಬದರಿನಾಥ ಎನ್.ವಿ., ಫಕೃದ್ದೀನ್ ಎ., ಮಾಗನೂರು ಮಂಜಪ್ಪ, ಕಾರ್ಯದರ್ಶಿ 3 ಸ್ಥಾನಕ್ಕೆ ಅನಿಲ್ ಕುಮಾರ್ ವಿ.ಬಿ., ಆಂಜನೇಯ ಎನ್.ಕೆ., ಚಂದ್ರಶೇಖರ್ ಎಚ್., ಕೃಷ್ಣೋಜಿರಾವ್ ಶಿಂಧೆ ಎನ್., ಮುದ್ದಯ್ಯ ಬಿ.ಎಸ್., ನಿಂಗೋಜಿರಾವ್ ಜಿ.ಆರ್., ವೇದಮೂರ್ತಿ ಸಿ., ಹಾಗೂ ಖಜಾಂಚಿ ಸ್ಥಾನಕ್ಕೆ ಚನ್ನವೀರಯ್ಯ ಬಿ., ವೀರೇಶ್ ಜೆ.ಎಸ್., ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಒಂದು ಸ್ಥಾನಕ್ಕೆ ಚಂದ್ರಣ್ಣ ಕೆ., ಉಮೇಶ ಕೆ., ಸ್ಪರ್ಧಿಸಿದ್ದಾರೆ.

ಜಿಲ್ಲಾ ಕಾರ್ಯಕಾರಿ ಸಮಿತಿಯ ಒಟ್ಟು 15 ಸ್ಥಾನಗಳಿಗೆ ಅಣ್ಣಪ್ಪ ಬಿ., ಭಾರತಿ, ಚನ್ನಬಸಪ್ಪ ಕೆ.ಎಸ್., ಚನ್ನಬಸವ ಎಂ.ಎಸ್. ಶಿಲವಂತ್, ಚಿದನಂದ ಜಿ.ಎಸ್., ಏಕಾಂತಪ್ಪ ಕೆ., ಗೋವಿಂದರಾಜ್ ಹೆಚ್., ಗುರುಮೂರ್ತಿ ಎಂ., ಜೈಮುನಿ ಕೆ., ಕಿರಣ್ ಎಸ್.ಜೆ., ಕೃಷ್ಣಮೂರ್ತಿ ಪಿ.ಹೆಚ್., ಮಂಜುನಾಥ ಪಿ. ಕಾಡಜ್ಜಿ, ಮಲ್ಲೇಶಪ್ಪ ಎನ್. ಕುಕ್ಕವಾಡ, ಮಂಜುನಾಥ ಜಿ.ಎಂ., ಮಂಜುನಾಥ ಕೆ.ಸಿ., ನಿಂಗಪ್ಪ ಎ.ಎನ್., ಪ್ರವೀಣ್ ಆರ್.ಬಿ., ರಾಘವೇಂದ್ರ ರಾವ್ ಎಲ್.ಸಿ., ರಘುಪ್ರಸಾದ್ ಕೆ.ಬಿ., ರಾಮಶೆಟ್ಟಿ ಎಂ.ಕೆ., ರಂಗನಾಥ ರಾವ್ ಡಿ., ರುದ್ರಪ್ಪ ಬಿ., ಸದಾನಂದ ಹೆಚ್.ಎಂ., ಸತೀಶ್ ಸಿ., ಸತೀಶ್ ಎಂ. ಪವಾರ್, ಸುರೇಶ್ ಆರ್. ಕುಣೆಬೆಳಕೆರೆ, ಶಿವಕುಮಾರ್ ಬಿ.ಎಂ., ಶಿವಯೋಗಿಶ್ವರ ಸ್ವಾಮಿ ಎಂ.ಹೆಚ್., ಸಿದ್ದಯ್ಯ ಒ.ಎನ್ ವಸಂತ ಕುಮಾರ್ ಜಿ.ಎಸ್., ವಿಷ್ಣುಕುಮಾರ್ ಗೇನೆರ್, ವಿಶ್ವನಾಥ ಮೈಲಾಳ್ ಸ್ಪರ್ಧಿಸಿದ್ದಾರೆ.

**ಕಣದಿಂದ ಹಿಂದೆ ಸರಿದವರು:**

ಉಪಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧಿಸಿದ ಕೃಷ್ಣೋಜಿರಾವ್ ಶಿಂಧೆ ಎಂ., ಮುದ್ದಯ್ಯ ಬಿ.ಎಸ್., ಇಂದುಶೇಖರ್ ಎನ್.ಎಂ., ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯತ್ವಕ್ಕೆ ಸ್ಪರ್ಧಿಸಿದ್ದ ತಿಪ್ಪೇಸ್ವಾಮಿ ಆರ್.ಎಸ್., ಒಡೆಯರ್ ಎಸ್.ಕೆ.,, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯತ್ವಕ್ಕೆ ಸ್ಪರ್ಧಿಸಿದ್ದ ಇಂದುಶೇಖರ್ ಎನ್.ಎಂ., ಸಾಯಿ ಪ್ರಸಾದ್ ಬಿ.ಎನ್, ಪ್ರಕಾಶ್ ಎ.ಕೆ., ರಾಮೇಗೌಡ ಎಂ.ಎಸ್. ಜಗದೀಶ್ ಜಿ. ಮಾಯಕೊಂಡ, ಸಿದ್ದಯ್ಯ ಒ.ಎನ್. ಇವರು ಉಮೇದುವಾರಿಕೆ ವಾಪಸು ಪಡೆದಿದ್ದಾರೆ.

2025 ನೇ ಸಾಲಿನ ರಾಜ್ಯೋತ್ಸವ ಪ್ರಶಸ್ತಿ ಪ್ರಕಟ

## ನಟ ಪ್ರಕಾಶ್ ರಾಜ್ ಸೇರಿ 70 ಮಂದಿ ಆಯ್ಕೆ



**ಬೆಂಗಳೂರು :** 2025ನೇ ಸಾಲಿನ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಯನ್ನು ಘೋಷಿಸಲಾಗಿದ್ದು, ಚಿತ್ರನಟ ಪ್ರಕಾಶ್ ರಾಜ್ ಸೇರಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ 70 ಮಂದಿಯನ್ನು ಆಯ್ಕೆ ಮಾಡಲಾಗಿದೆ.

ಇದೇ ಮೊದಲ ಬಾರಿಗೆ ಯಾವುದೇ ಅರ್ಜಿ ಆಹ್ವಾನಿಸದೆ ಈ ಆಯ್ಕೆ ನಡೆದಿದೆ. ಜಿಲ್ಲಾವಾರು, ಸಾಮಾಜಿಕ ಪರಿಪಾಲನೆ, ಹಾಗೂ ಆಯ್ಕೆ ಸಮಿತಿ ಶಿಫಾರಸ್ಸುಗಳ ಆಧಾರದ ಮೇಲೆ ಆಯ್ಕೆ ಪ್ರಕ್ರಿಯೆ ನಡೆದಿದೆ. ಈ ಬಾರಿ 12 ಮಹಿಳೆಯರು ಹಾಗೂ ಸಮಗಾರ ಹರಳಯ್ಯ ಸಮುದಾಯದ ಇಬ್ಬರು ಪ್ರತಿಭೆಗಳು ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಆಯ್ಕೆ ಸಲಹಾ ಸಮಿತಿ ಸದಸ್ಯರು ಶಿಫಾರಸ್ಸು ಮಾಡಿದ್ದವರನ್ನು ಬಹುತೇಕ ಆಯ್ಕೆ ಮಾಡಲಾಗಿದ್ದು, ನಾಲ್ಕೈದು ಬಾರಿ ಸಭೆ ನಡೆಸಿದ ಸದಸ್ಯರು ಅರ್ಹರನ್ನು ಆಯ್ಕೆ ಮಾಡಲು ಸಹಕರಿಸಿದ್ದಕ್ಕೆ ಧನ್ಯವಾದಗಳನ್ನು ಈ ಮೂಲಕ ತಿಳಿಸುತ್ತೇನೆ ಎಂದು ಸಚಿವ ಶಿವರಾಜ್ ತಂಗಡಗಿ ತಿಳಿಸಿದ್ದಾರೆ.

ಇತಿಹಾಸದಲ್ಲೇ ಮೊದಲ ಬಾರಿಗೆ ಸಮಗಾರ ಹರಳಯ್ಯ ಸಮುದಾಯಕ್ಕೆ ಸೇರಿದ ಇಬ್ಬರು ಪ್ರತಿಭೆಗಳನ್ನು ಗುರುತಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಈ ಬಾರಿ ಯಾವುದೇ ಸಂಘ–ಸಂಸ್ಥೆಗಳಿಗೆ ಪ್ರಶಸ್ತಿ ನೀಡಿಲ್ಲ. 12 ಮಂದಿ ಮಹಿಳೆಯರಿಗೆ ಈ ಬಾರಿ ಪ್ರಶಸ್ತಿ ಆಯ್ಕೆ ಮಾಡಲಾಗಿದೆ. ಈ ಪೈಕಿ ಕೆಲವರು ಸ್ವಯಂ ಮನವಿ ನೀಡಿದ್ದರು. ಅಂತಹವರು ಪ್ರಶಸ್ತಿಗೆ ಅರ್ಹರಿದ್ದ ಕಾರಣ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

## ಮದುವೆಯ ಮುನ್ನಾ ದಿನ ಹೃದಯಾಘಾತದಿಂದ ವಧು ಸಾವು



**ಚಿಕ್ಕಮಗಳೂರು:** ಮದುವೆ ತಯಾರಿಯಲ್ಲಿದ್ದ ಯುವತಿಯೊಬ್ಬಳು ಮೃತಪಟ್ಟ ಘಟನೆ ಅ.30ರ ಗುರುವಾರ ಅಜ್ಜಂಪುರ ತಾಲೂಕಿನ ಸೊಲ್ಲಾಪುರ ಗ್ರಾಮದಲ್ಲಿ ನಡೆದಿದೆ. ಶೃತಿ (24) ಮೃತ ದುರ್ದೈವಿ.

ಶೃತಿಗೆ ತರೀಕೆರೆಯ ದಿಲೀಪ್ ಎಂಬ ಹುಡುಗನೊಂದಿಗೆ ಮದುವೆ ನಿಶ್ಚಯವಾಗಿದ್ದು, ನಾಳೆ (31) ಮದುವೆ ನಿಗದಿಯಾಗಿತ್ತು. ಆದರೆ, ಯುವತಿಗೆ ಲೋ ಬಿಪಿ ಹಾಗೂ ಹೃದಯಾಘಾತ ಸಂಭವಿಸಿ ಮೃತಪಟ್ಟಿದ್ದಾರೆ.

ಜಿಲ್ಲೆಯ ಅಜ್ಜಂಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ನಾಳೆ ಹುಲಿಗೆಮ್ಮ ದೇವಿ ಸಮುದಾಯ ಭವನ ಉದ್ಘಾಟನಾ ಕಾರ್ಯಕ್ರಮ

**ದಾವಣಗೆರೆ.ಅ.30:** ಇಲ್ಲಿನ ಗಾಂಧಿನಗರದಲ್ಲಿರುವ ಶ್ರೀ ಹುಲಿಗೆಮ್ಮ ದೇವಿ ಸಮುದಾಯ ಭವನದ ಉದ್ಘಾಟನಾ ಸಮಾರಂಭ ನವೆಂಬರ್ 1ರಂದು ಮಧ್ಯಾಹ್ನ 1 ಗಂಟೆಗೆ ಜರುಗಲಿದೆ.

ಸುದ್ದಿಗೋಷ್ಠಿಯಲ್ಲಿ ಹುಲಿಗೆಮ್ಮ ದೇವಸ್ಥಾನ ಸಮಿತಿಯ ಬಿ.ಹೆಚ್.ವೀರಭದ್ರಪ್ಪ ಮಾತನಾಡಿ, ಮಹಾನಗರ ಪಾಲಿಕೆಯ ಅನುದಾನದಲ್ಲಿ ಸುಮಾರು 30 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿರುವ ಸಮುದಾಯ ಭವನವನ್ನು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಉದ್ಘಾಟಿಸುವರು. ಸಮಾರಂಭದ ಅಧ್ಯಕ್ಷತೆಯನ್ನು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಡಾ.ಶಾಮನೂರು ಶಿವಶಂಕರಪ್ಪ ವಹಿಸುವರು. ಮುಖ್ಯ ಅತಿಥಿಗಳಾಗಿ ದಾವಣಗೆರೆ ಲೋಕಸಭಾ ಸದಸ್ಯೆ ಡಾ.ಪ್ರಭಾ ಮಲ್ಲಿಕಾರ್ಜುನ್, ಧೂಡಾ ಅಧ್ಯಕ್ಷ ದಿನೇಶ ಕೆ.ಶೆಟ್ಟಿ, ಪಾಲಿಕೆ ಆಯುಕ್ತೆ ರೇಣುಕಾ ಮತ್ತಿತರರು ಭಾಗವಹಿಸುವರು ಎಂದರು.

ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಎಲ್ಲಾ ಸಮುದಾಯದವರಿಗೂ ಸ್ಪಂದಿಸುವ ಜನಾನುರಾಗಿಯಾಗಿದ್ದಾರೆ. ಜಿಲ್ಲೆಯ ಅಭಿವೃದ್ಧಿಗೆ ಸಾಕಷ್ಟು ಶ್ರಮ ವಹಿಸಿದ್ದಾರೆ. ಮಧ್ಯ ಕರ್ನಾಟಕದ ಅಭಿವೃದ್ಧಿ ಹಿತದೃಷ್ಟಿಯಿಂದ ಮಲ್ಲಿಕಾರ್ಜುನ್ ಅವರನ್ನು ಲಿಂಗಾಯತರ ಕೋಟಾದಲ್ಲಿ ಉಪಮುಖ್ಯಮಂತ್ರಿ ಮಾಡಬೇಕು ಎಂದರು.

## ‘ಹೇಡಿ’ ಮೋದಿಗಿಂತ ಇಂದಿರಾ ಗಾಂಧಿಗೆ ಹೆಚ್ಚಿನ ಧೈರ್ಯವಿತ್ತು : ರಾಹುಲ್ ಗಾಂಧಿ ವಾಗ್ದಾಳಿ



**ನಳಂದಾ:** 1971ರ ಬಾಂಗ್ಲಾದೇಶ ವಿಮೋಚನಾ ಯುದ್ಧವನ್ನು ಉಲ್ಲೇಖಿಸಿ ಮಾಜಿ ಪ್ರಧಾನಿ ಇಂದಿರಾಗಾಂಧಿ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಹೋಲಿಸುವ ಮೂಲಕ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಬಿಹಾರದ ನಳಂದಾದಲ್ಲಿ ಜನತೆಯನ್ನುದ್ದೇಶಿಸಿ ಮಾತನಾಡಿದ ರಾಹುಲ್ ಗಾಂಧಿ, 1971ರ ಯುದ್ಧದ ಸಂದರ್ಭದಲ್ಲಿ ಇಂದಿರಾ ಗಾಂಧಿ ಅಮೆರಿಕದ ಮುಂದೆ ಹೆದರಿರಲಿಲ್ಲ ಅಥವಾ ತಲೆಬಾಗಿರಲಿಲ್ಲ. ಆದರೆ ಪ್ರಧಾನಿ ಮೋದಿ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎದುರು ನಿಲ್ಲುವ ಸಾಮರ್ಥ್ಯ ಇಲ್ಲ ಎಂದು ಟೀಕಾ ಪ್ರಹಾರ ನಡೆಸಿದ್ದಾರೆ.

1971ರ ಬಾಂಗ್ಲಾದೇಶದ ಯುದ್ಧದ ಸಂದರ್ಭದಲ್ಲಿ ಭಾರತವನ್ನು ಹೆದರಿಸಲು ಮತ್ತು ಬೆದರಿಕೆ ಹಾಕಲು ಅಮೆರಿಕ ತನ್ನ ವಿಮಾನ ಮತ್ತು ನೌಕಾಪಡೆಯನ್ನು ಕಳುಹಿಸಿತ್ತು. ಪ್ರಧಾನಿಯಾಗಿದ್ದ ಇಂದಿರಾಗಾಂಧಿ ನಿಮ್ಮ ನೌಕಾಪಡೆಗೆ ನಾವು ಹೆದರುವುದಿಲ್ಲ, ನೀವು ಏನು ಮಾಡುತ್ತಿರೋ ಅಥವಾ ನಾವು ಮಾಡಲಿದ್ದೇವೆ ಎಂದು ಹೇಳಿದ್ದರು ಎಂದರು.

ಅಮೆರಿಕದ ಅಧ್ಯಕ್ಷರನ್ನು ಎದುರಿಸುವ ತಾಕತ್ತು ಇಲ್ಲ: ಇಂದಿರಾ ಗಾಂಧಿ ಮಹಿಳೆಯಾಗಿದ್ದರು. ಆದರೆ ಈ ವ್ಯಕ್ತಿಗಿಂತ ಅವರಿಗೆ ಹೆಚ್ಚಿನ ಧೈರ್ಯವಿತ್ತು. ನರೇಂದ್ರ ಮೋದಿ ಹೇಡಿ, ಅವರಿಗೆ ಅಮೆರಿಕದ ಅಧ್ಯಕ್ಷರನ್ನು ಎದುರಿಸುವ ತಾಕತ್ತು ಇಲ್ಲ. ನರೇಂದ್ರ ಮೋದಿ ಅವರಿಗೆ ಧೈರ್ಯ ಇದ್ದರೆ ಬಿಹಾರದ ಯಾವುದಾದರೂ ಸಭೆಯಲ್ಲಿ ಟ್ರಂಪ್ ಹೇಳುತ್ತಿರುವುದು ಸುಳ್ಳು, ಆಪರೇಷನ್ ಸಿಂಧೂರ್ ನಿಲ್ಲಿಸಲು ಹೇಳಲಿಲ್ಲ. ಅವರು ಅದನ್ನು ಮಾಡಲಿಲ್ಲ ಎಂದು ಹೇಳಲಿ ಎಂದು ಸವಾಲು ಹಾಕಿದರು.

ದಕ್ಷಿಣ ಕೊರಿಯಾದ ಏಷ್ಯಾ ಫೆಸಿಫಿಕ್ ಆರ್ಥಿಕ ಸಹಕಾರ (ಎಪಿಇಸಿ) ಶೃಂಗಸಭೆಯಲ್ಲಿ ಭಾರತ ಮತ್ತು ಪಾಕಿಸ್ತಾನ ನಡುವಣ ಯುದ್ಧವನ್ನು ನಿಲ್ಲಿಸಲು ತಾನು ಮಧ್ಯಸ್ಥಿಕೆ ವಹಿಸಿದೆ ಎಂದು ಡೊನಾಲ್ಡ್ ಟ್ರಂಪ್ ಹೇಳಿದ ನಂತರ ರಾಹುಲ್ ಗಾಂಧಿ ಈ ರೀತಿಯ ವಾಗ್ದಾಳಿ ನಡೆಸಿದ್ದಾರೆ.

50 ಬಾರಿ ನರೇಂದ್ರ ಮೋದಿಗೆ ಅಪಮಾನ: ಡೊನಾಲ್ಡ್ ಟ್ರಂಪ್ 50 ಬಾರಿ ನರೇಂದ್ರ ಮೋದಿ ಅವರನ್ನು ಅವಮಾನಿಸಿದ್ದಾರೆ. ಆಪರೇಷನ್ ಸಿಂಧೂರ್ ನಿಲ್ಲಿಸುವಂತೆ ಫೋನ್ ನಲ್ಲಿ ನರೇಂದ್ರ ಮೋದಿ ಅವರಿಗೆ ಹೇಳಿದ ಎರಡು ದಿನಗಳೊಳಗೆ ಯುದ್ಧವನ್ನು ನಿಲ್ಲಿಸಲಾಗಿದೆ ಎಂದು ಟ್ರಂಪ್ ಹೇಳುತ್ತಾರೆ.

## ಪುನಿತ್ ರಾಜ್‌ರವರ ಸಮಾಜ ಸೇವೆ ಅಪಾರ : ಪರಮೇಶ್ವರಪ್ಪ



**ಚನ್ನಗಿರಿ :** ಮನುಷ್ಯನಾಗಿ ಹುಟ್ಟಿದ ಮೇಲೆ ತಾನು ಶ್ರಮದಿಂದ ಗಳಿಸಿದ ಹಣದಲ್ಲಿ ದಾನ ಧರ್ಮ ಮತ್ತು ಬಡವರ ಸೇವೆಗಳನ್ನು ಮಾಡಬೇಕು ಎಂದು ಪ್ರಥಮ ದರ್ಜೆ ಗುತ್ತಿಗೆದಾರ ಆರ್.ಪರಮೇಶ್ವರಪ್ಪ ಹೇಳಿದರು.

ಗುರುವಾರ ಚನ್ನಗಿರಿ ತಾಲೂಕಿನ ನಲ್ಲೂರು ಗ್ರಾಮದಲ್ಲಿ ಅಪ್ಪು ಪುನೀತ್ ರಾಜ್‌ಕುಮಾರ್ ಅಭಿಮಾನಿಗಳ ಸಂಘದ ವತಿಯಿಂದ ಹಮ್ಮಿಕೊಳ್ಳಲಾಗಿದ್ದು ಅಪ್ಪು ಸವಿ ನೆನಪಿನ 4ನೇ ವರ್ಷದ ಕಾರ್ಯಕ್ರಮದಲ್ಲಿ ನಲ್ಲೂರಿನ ದುರ್ಗಾಂಬಿಕ ದೇಗುಲದ ಎದುರು ಪ್ರತಿಷ್ಠಾಪನೆ ಮಾಡಲಾಗಿರುವ ಅಪ್ಪು ಪುತ್ತಳಿಗೆ ಹೂವಿನ ಹಾರವನ್ನು ಹಾಕುವ ಮೂಲಕ ಮಾತನಾಡಿ ಪುನಿತ್ ರಾಜ್‌ಕುಮಾರ್‌ರವರು ಇಂದು ನಮ್ಮೊಂದಿಗೆ ಇಲ್ಲವಾದರು ಅವರು ದಾನ ಧರ್ಮ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದರು. ಪ್ರತಿವರ್ಷವೂ ಅವರ ಭಾವನಾತ್ಮಕ ವಿದಾಯದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದ್ದು ಅವರು ನಮ್ಮೊಂದಿಗೆ ಜೀವಂತವಾಗಿ ಇಲ್ಲವಾದರೂ ಮಾನಸಿಕವಾಗಿ ನಮ್ಮೊಂದಿಗೆ ಇದ್ದಾರೆ ಎಂದರು.

ಅವರ ಸವಿನೆನಪಿನ ಅಂಗವಾಗಿ ನಲ್ಲೂರು ಅಪ್ಪು ಅಭಿಮಾನಿ ಬಳಗದ ವತಿಯಿಂದ ನಲ್ಲೂರು ಸರಕಾರಿ ಪ್ರಾಥಮಿಕ ಶಾಲೆಯ ಸುಮಾರು 351 ಜನ ವಿದ್ಯಾರ್ಥಿಗಳಿಗೆ ಉಚಿತವಾದ ತಟ್ಟೆ ಲೋಟಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ಶಿಕ್ಷಕ ಕಾಂತ್‌ರಾಜ್, ಕನ್ನಡ ಜಾಗೃತಿ ಸಮಿತಿ ಅಧ್ಯಕ್ಷ ಬಿ.ಆರ್. ರುದ್ರೇಶ್ ಹೊಸಮನಿ. ಹಾಲೇಶ್ ಸೇರಿದಂತೆ ಇತರರು ಹಾಜರಿದ್ದರು.

ರಾಜ್ಯಪಾಲ ಗೆಹ್ಲೋಟ್ ಆಸ್ಪತ್ರೆಗೆ ದಾಖಲು;

## ಆರೋಗ್ಯ ವಿಚಾರಿಸಿದ ಸಿಎಂ ಸಿದ್ದರಾಮಯ್ಯ



**ಬೆಂಗಳೂರು:** ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ತೀವ್ರ ಜ್ವರ ಮತ್ತು ಬೆನ್ನು ನೋವಿನಿಂದ ಆಸ್ಪತ್ರೆಗೆ ದಾಖಲಾಗಿದ್ದಾರೆ ಎಂದು ರಾಜಭವನದ ಮೂಲಗಳು ಗುರುವಾರ ತಿಳಿಸಿವೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಮಣಿಪಾಲ್ ಆಸ್ಪತ್ರೆಗೆ ಭೇಟಿ ನೀಡಿ, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರ ಆರೋಗ್ಯ ವಿಚಾರಿಸಿದರು ಮತ್ತು ಅವರು ಶೀಘ್ರ ಗುಣಮುಖರಾಗಲಿ ಎಂದು ಹಾರೈಸಿದ್ದಾರೆ.

ಗೆಹ್ಲೋಟ್ ಅವರನ್ನು ಸೋಮವಾರ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ರಾಜಭವನದ ಮೂಲಗಳು ಕನ್ನಡಪ್ರಭ.ಕಾಮ್ ತಿಳಿಸಿವೆ. “ಶುಕ್ರವಾರದೊಳಗೆ ರಾಜ್ಯಪಾಲರನ್ನು ಡಿಸ್ಚಾರ್ಜ್ ಮಾಡಲಾಗುತ್ತದೆ ಎಂದು ನಮಗೆ ತಿಳಿಸಿರುವುದಾಗಿ” ಎಂದು ರಾಜಭವನದ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಗೆಹ್ಲೋಟ್ ಇತ್ತೀಚಿಗೆ ತಮ್ಮ ತವರು ರಾಜ್ಯವಾದ ಮಧ್ಯಪ್ರದೇಶಕ್ಕೆ ತೆರಳಿದ್ದರು. ಅಲ್ಲಿ ಅವರು ಸರಣಿ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದರು. ಆಯಾಸದಿಂದಾಗಿ ಅವರಿಗೆ ಜ್ವರದ ಜೊತೆಗೆ ಬೆನ್ನು ನೋವು ಕಾಣಿಸಿಕೊಂಡಿರಬಹುದು” ಎಂದು ಅವರು ಹೇಳಿದ್ದಾರೆ.

## ಇಂದು ಆನ್‌ಲೈನ್ ಸೇವೆಗಳ ತಾಂತ್ರಿಕ ದೋಷ ಸರಿಪಡಿಸುವಂತೆ ಒತ್ತಾಯಿಸಿ ಆರ್‌ಟಿಓ ಕಚೇರಿ ಮುಂದೆ ಪ್ರತಿಭಟನೆ

**ದಾವಣಗೆರೆ.ಅ.30:** ವಾಹನ ಚಾಲನಾ ತರಬೇತಿ ಶಾಲೆ ಮಾಲೀಕರ ಸಂಘದ ವತಿಯಿಂದ ಅ.31ರ ಇಂದು ಸಾರಿಗೆ ಇಲಾಖೆಯ ಆನ್‌ಲೈನ್ ಸೇವೆಗಳ ತಾಂತ್ರಿಕ ದೋಷ ಮತ್ತು ಕಲಿಕಾ ಪರವಾನಗಿ ಪರೀಕ್ಷೆ ದೋಷಗಳನ್ನು ಶೀಘ್ರದಲ್ಲೇ ಸರಿಪಡಿಸುವಂತೆ ಆಗ್ರಹಿಸಿ ಸಾರಿಗೆ ಕಚೇರಿ ಮುಂಭಾಗದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

ಸುದ್ದಿಗೋಷ್ಠಿಯಲ್ಲಿ ಸಂಘದ ಅಧ್ಯಕ್ಷ ಫಯಾಜ್ ಮಾತನಾಡಿ, ಸಾರಿಗೆ ಇಲಾಖೆಯಲ್ಲಿ ಸೆಪ್ಟೆಂಬರ್ 10ರಿಂದ ಕಲಿಕಾ ಪರವಾನಗಿ ಪರೀಕ್ಷೆ ನಿಂತು ಹೋಗಿದೆ. ಅಂತರ್ಜಾಲದಲ್ಲಿ ಸಾರಿಗೆ ಇಲಾಖೆಯ ಆನ್‌ಲೈನ್ ಸೇವೆಗಳನ್ನು ಸಕ್ರಿಯಗೊಳಿಸಿದ್ದು ಇದುವರೆಗೂ ಕೂಡ ಕಲಿಕಾ ಪರವಾನಗಿ ಪರೀಕ್ಷೆಯನ್ನು ಅಂತರ್ಜಾಲದಲ್ಲಿ ಸರಿಯಾದ ಕ್ರಮಬದ್ಧವಾಗಿ ಪರೀಕ್ಷೆ ನಡೆಸಲು ಸಾರ್ವಜನಿಕರಿಗೆ ಮತ್ತು ವಾಹನ ಚಾಲನೆ ತರಬೇತಿ ಶಾಲೆಗಳಿಗೆ ಸರಿಯಾದ ಮಾಹಿತಿ ಕೊಡದೆ ಇರುವುದು ಎಲ್ಲರಿಗೂ ತೊಂದರೆ ಆಗುತ್ತಿದೆ ಎಂದು ಹೇಳಿದರು.

ಚಾಲನಾ ಪರವಾನಗಿ ಪರೀಕ್ಷೆಗೆ ಬೇಕಾಗುವ ಡಿಎಲ್ ಟೆಸ್ಟ್, ಸ್ಲಾಟ್ ಮುಂಗಡ ಬುಕ್ಕಿಂಗ್ ಸೇವೆಯು ಕೂಡ ಒಂದು ತಿಂಗಳ ನಂತರ ಸಿಗುವುದರಿಂದ ಸಾರ್ವಜನಿಕರಿಗೂ ಕೂಡ ತೊಂದರೆ ಉಂಟಾಗಿದೆ. ಅಂತರ್ಜಾಲದಲ್ಲಿ ಸಾರಿಗೆ ಇಲಾಖೆಯ ಸೇವೆಗಳು ಕರ್ನಾಟಕದಲ್ಲಿ ಮಾತ್ರ ಸಮರ್ಪಕವಾಗಿ ಸೇವೆಯನ್ನು ಒದಗಿಸಲು ಸಾರಿಗೆ ಇಲಾಖೆಯ ಬಳಿ ಉತ್ತಮ ಗುಣಮಟ್ಟದ ತಂತ್ರಜ್ಞಾನ ಮತ್ತು ಪರಿಣಿತರ ಕೊರತೆಯಿಂದಾಗಿ ಜನತೆಗೆ ತೊಂದರೆಯನ್ನು ಉಂಟು ಮಾಡುತ್ತಿದೆ ಎಂದು ತಿಳಿಸಿದರು.

ಇದನ್ನು ಶೀಘ್ರ ಪರಿಹರಿಸಬೇಕೆಂದು ಅಕ್ಟೋಬರ್ 31ರಂದು ಸಾರಿಗೆ ಕಚೇರಿ ದಾವಣಗೆರೆ ಮುಂದೆ ಪ್ರತಿಭಟನೆಗೆ ದಾವಣಗೆರೆ ಜಿಲ್ಲಾ ವಾಹನ ಚಾಲನಾ ತರಬೇತಿ ಮಾಲೀಕರ ಸಂಘ ಜಿಲ್ಲಾ ಲಾರಿ ಮಾಲೀಕರ ಸಂಘ ಸಾರಿಗೆ ಇಲಾಖೆಯ ಸಲಹೆಗಾರರ ಸಂಘ ಹಾಗೂ ಸಾರಿಗೆ ಇಲಾಖೆ ಕಚೇರಿ ಹತ್ತಿರವಿರುವ ಅಂತರ್ಜಾಲ ಅಂಗಡಿಗಳ ವ್ಯವಸ್ಥಾಪಕರ ಸಹಕಾರದೊಂದಿಗೆ ಮುಂದಾಗಿದ್ದೇವೆ ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಕರಿಬಸವರಾಜು, ಬಸವರಾಜ, ಮಹಮ್ಮದ ಗೌಸ್ ಇತರರು ಇದ್ದರು.

## ಜಿಲ್ಲಾ ಪೊಲೀಸ್ ಇಲಾಖೆಯ ನಿರ್ಲಕ್ಷ್ಯ ಖಂಡಿಸಿ ಇಂದು ಪ್ರತಿಭಟನೆ

ದಾವಣಗೆರೆ.ಅ.30: ವಂಚನೆ, ನಕಲಿ ದಾಖಲೆ ಸೃಷ್ಠಿ ಸೇರಿದಂತೆ ಗಂಭೀರ ಸ್ವರೂಪದ ಆರೋಪದ ಪ್ರಕರಣವನ್ನು ನ್ಯಾಯಾಲಯವು ಸಿಐಡಿ ತನಿಖೆಗೆ ಆದೇಶ ನೀಡಿದ್ದರೂ, ಸಿಐಡಿ ಇಲಾಖೆಗೆ ದಾಖಲೆಗಳನ್ನು ಸಲ್ಲಿಸದ ದಾವಣಗೆರೆ ಜಿಲ್ಲಾ ಪೊಲೀಸ್ ಇಲಾಖೆಯ ನಿರ್ಲಕ್ಷ್ಯ ಖಂಡಿಸಿ ನವೆಂಬರ್ 1ರಂದು ಜಿಲ್ಲಾ ರಕ್ಷಣಾಧಿಕಾರಿ ಕಚೇರಿಗಳ ಎದುರು ಕುಟುಂಬ ಸಮೇತ ಉಪವಾಸ ಸತ್ಯಾಗ್ರಹ ಮಾಡಲಾಗುವುದು ಎಂದು ಗಡಿಗುಡಾಳು ಜಿ.ಎಂ.ಶಿವಲಿಂಗಯ್ಯ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಂಚನೆ, ನಕಲಿ ದಾಖಲೆ ಸೃಷ್ಟಿ ಹಾಗೂ ಮೃತ ವ್ಯಕ್ತಿಯ ಮೇಲೆ ವಿಮೆ ಮಾಡಿಸಿದಂತಹ ಗಂಭೀರ ಸ್ವರೂಪದ 7 ಎಫ್‌ಐಆರ್ ಪ್ರಕರಣಗಳಲ್ಲಿ ಪೊಲೀಸರು ಆರೋಪಿಗಳ ವಿರುದ್ಧ ಸರಿಯಾದ ಕ್ರಮ ಕೈಗೊಳ್ಳದೆ ಬಿ ವರದಿ ಸಲ್ಲಿಸಲು ಮುಂದಾಗಿದ್ದಾರೆ. ಈ ಪ್ರಕರಣವನ್ನು ನ್ಯಾಯಾಲಯವು ಸಿಐಡಿ ತನಿಖೆಗೆ ನೀಡುವಂತೆ ಸೂಚಿಸಿದ್ದರೂ ದಾವಣಗೆರೆ ಪೊಲೀಸರು ಮೂರು ವರ್ಷಗಳಿಂದ ಪ್ರಕರಣದ ದಾಖಲೆಗಳನ್ನು ಸಿಐಡಿಗೆ ಕಳುಹಿಸಿಲ್ಲ ಎಂದು ಹೇಳಿದರು.

2021ರಲ್ಲಿ ದಾವಣಗೆರೆ ಮೊದಲ ಆರ್‌ಎಂಸಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ನಂತರದ 7ಪ್ರಕರಣಗಳಲ್ಲಿ ವಂಚನೆಯ ಎಲ್ಲಾ ಮಾಹಿತಿ ಇದ್ದರೂ ಸರಿಯಾದ ತನಿಖೆ ನಡೆಯಲಿಲ್ಲ. 2022ರಲ್ಲಿ ದಾವಣಗೆರೆ ಕೆಟಿಜಿ ನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ 109 ಪ್ರಕರಣ ದಾಖಲಾದಾಗ ವಿಳಂಬವಾದ ಕಾರಣ, ನ್ಯಾಯಾಲಯವು ಬೆಂಗಳೂರಿನ ಸಿಐಡಿಗೆ ತನಿಖೆಗೆ ಆದೇಶ ನೀಡಿತ್ತು. 2023ರಲ್ಲಿ ನ್ಯಾಯಾಲಯ ಆದೇಶಿಸಿದ ಪ್ರತಿಯನ್ನು ಬೆಂಗಳೂರಿಗೆ ಕಳುಹಿಸಿದ್ದರೆ ನ್ಯಾಯ ಸಿಗುತ್ತಿತ್ತು. ಸಿಐಡಿ ಅಧಿಕಾರಿಗಳು

ಗದಗ: ಕಳ್ಳನೆಂದು ಭಾವಿಸಿ ಅಟ್ಟಾಡಿಸಿದ ಸ್ಥಳೀಯರು;

## 4 ಗಂಟೆಗಳ ಕಾಲ ಮರದ ಮೇಲೆ ಕುಳಿತ ಆಸಾಮಿ!



**ಗದಗ:** ಗದಗದಲ್ಲಿ ವಿಚಿತ್ರ ಘಟನೆ ನಡೆದಿದ್ದು, ಸ್ಥಳೀಯರು ಕಳ್ಳನೆಂದು ಭಾವಿಸಿದ್ದರಿಂದ ವ್ಯಕ್ತಿಯೊಬ್ಬ ತೆಂಗಿನ ಮರ ಹತ್ತಿ ಸುಮಾರು ನಾಲ್ಕು ಗಂಟೆಗಳ ಕಾಲ ಅಲ್ಲೇ ಕುಳಿತಿದ್ದ.

ಬೆಳಗಾವಿಯಿಂದ ಬಂದ ಬಸವರಾಜ ಸೊಲ್ಲಾಪುರ ವಿವೇಕಾನಂದ ನಗರಕ್ಕೆ ಬಂದು ಬಾಗಿಲು ತಮ್ಮ ಸ್ನೇಹಿತನ ಮನೆ ಎಂದು ಬಾಗಿಲು ತಟ್ಟಿದ್ದಾನೆ. ಆದರೆ ಅದು ಅವನು ಹುಡುಕುತ್ತಿದ್ದ ತನ್ನ ಸ್ನೇಹಿತನ ಮನೆ ಅಲ್ಲ ಎಂದು ತಿಳಿದ ನಂತರ ಅಲ್ಲಿಂದ ಹೊರಟಿದ್ದಾನೆ. ಇದರಿಂದ ಅನುಮಾನಗೊಂಡ ನಿವಾಸಿಗಳು ಪೊಲೀಸರಿಗೆ ಮಾಹಿತಿ ನೀಡಿದರು.

ಪೊಲೀಸರು ಬಂದಾಗ, ಬಸವರಾಜ್ ಸಿಕ್ಕಿಬೀಳುವ ಭಯದಿಂದ ಹತ್ತಿರದ ತೆಂಗಿನ ಮರ ಹತ್ತಿದ್ದಾನೆ. ಪೊಲೀಸರು ಮತ್ತು ನಿವಾಸಿಗಳು ಹಲವಾರು ಗಂಟೆಗಳ ಕಾಲ ಆ ಪ್ರದೇಶದಲ್ಲಿ ಆತನಿಗಾಗಿ ಹುಡುಕಾಡಿದರೂ ಸಿಗಲಿಲ್ಲ. ಆದರೆ ಯಾರೋ ಮರದ ಮೇಲೆ ಕುಳಿತಿದ್ದನ್ನು ನೋಡಿದರು. ಪೊಲೀಸರು ಮತ್ತು ಸ್ಥಳೀಯರು ಪದೇ ಪದೇ ಮನವಿ ಮಾಡಿದರೂ, ಬಸವರಾಜ್ ಕೆಳಗೆ ಬರಲು ನಿರಾಕರಿಸಿದ.

ಆಗ 50 ರಿಂದ 60 ಜನರ ಗುಂಪು ಸ್ಥಳದಲ್ಲಿ ಜಮಾಯಿಸಿ, ಅವನನ್ನು ಕಳ್ಳನೆಂದು ಭಾವಿಸಿದರು. ಅಗ್ನಿಶಾಮಕ ದಳದವರು ಏಣಿಯೊಂದಿಗೆ ಬಂದು ಅವರಿಗೆ ಯಾವುದೇ ರೀತಿ ತೊಂದರೆ ನೀಡುವುದಿಲ್ಲ ಎಂದು ಮನವರಿಕೆ ಮಾಡಿಕೊಟ್ಟ ನಂತರ ಆತನನ್ನು ಸುರಕ್ಷಿತವಾಗಿ ಕೆಳಗೆ ಇಳಿಸಲಾಯಿತು.

## ಸಂಶೋಧನಾ ಪ್ರಬಂಧ ಪ್ರಕಟಣೆಗೆ ಆದ್ಯತೆ

### ದಾವಣಗೆರೆ ವಿ.ವಿ.ಪ್ರಸಾರಾಂಗ ಕಚೇರಿ ಉದ್ಘಾಟನೆಯಲ್ಲಿ ಕುಲಪತಿ ಪ್ರೊ.ಬಿ.ಡಿ.ಕುಂಬಾರ



**ದಾವಣಗೆರೆ :** ದಾವಣಗೆರೆ ವಿಶ್ವವಿದ್ಯಾನಿಲಯದ ಪ್ರಸಾರಾಂಗದ ವತಿಯಿಂದ ಸಂಶೋಧನಾ ಪ್ರಬಂಧಗಳನ್ನು ಪ್ರಕಟಿಸಲು ಮತ್ತು ಜಾಗತಿಕ ಮಟ್ಟದಲ್ಲಿ ಅವುಗಳ ಮೂಲಕ ಸಂಶೋಧನಾ ಕ್ಷೇತ್ರದಲ್ಲಿ ಗುರುತಿಸಿಕೊಳ್ಳಲು ಆದ್ಯತೆ ನೀಡಲಾಗುವುದು ಎಂದು ಕುಲಪತಿ ಪ್ರೊ.ಬಿ.ಡಿ.ಕುಂಬಾರ ತಿಳಿಸಿದರು.

ದಾವಣಗೆರೆ ವಿಶ್ವವಿದ್ಯಾನಿಲಯದ ಆವರಣದಲ್ಲಿ ಪ್ರಸಾರಾಂಗ ಕಚೇರಿ ಉದ್ಘಾಟಿಸಿ ಅವರು ಮಾತನಾಡಿದರು.

ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರು ನಡೆಸುವ ಸಂಶೋಧನೆಗಳನ್ನು ಜಾಗತಿಕ ಮಟ್ಟದಲ್ಲಿ ಗುರುತಿಸುವಂತೆ ಮಾಡುವ ಉದ್ದೇಶದಿಂದ ಸಂಶೋಧನಾ ಜರ್ನಲ್ ಆರಂಭಿಸಿ ಪ್ರಕಟಿಸಲು ಆದ್ಯತೆ ನೀಡಲಾಗುವುದು. ಇದಕ್ಕೆ ಪೂರಕ ಸಿದ್ಧತೆಗಳು ನಡೆಯುತ್ತಿವೆ ಎಂದು ಹೇಳಿದರು.

ವಿಜ್ಞಾನ, ವಾಣಿಜ್ಯ ಮತ್ತು ವ್ಯವಹಾರ ನಿರ್ವಹಣೆ, ಭಾಷೆ ಮತ್ತು ಸಮಾಜ ವಿಜ್ಞಾನ ಕ್ಷೇತ್ರಗಳ ಆಧ್ಯಯನ ಮತ್ತು ಮೌಲ್ಯಯುತ ಸಂಶೋಧನೆಗಳನ್ನು ಗುರುತಿಸಲು ಜರ್ನಲ್‌ಗಳು ಸಹಕಾರಿ ಆಗಲಿವೆ. ವಿದ್ವತ್‌ಪೂರ್ಣ ಸಂಶೋಧನೆಗಳಿಗೆ ಆದ್ಯತೆ ನೀಡುವ ಜೊತೆಗೆ ಅಧ್ಯಯನಕ್ಕೆ ಪ್ರೋತ್ಸಾಹ ನೀಡಿದಂತಾಗುತ್ತದೆ. ಅಲ್ಲದೆ ಇತಿಹಾಸ, ರಾಜಕೀಯ, ಅರ್ಥಶಾಸ್ತ್ರ ಮಾಧ್ಯಮ, ವಾಣಿಜ್ಯ ನಿರ್ವಹಣೆಯ ವಿಷಯಗಳ ಪುಸ್ತಕ ಪ್ರಕಟಣೆಗೂ ಗಮನ ನೀಡಲಾಗುವುದು ಎಂದರು.

ದಾವಣಗೆರೆ ವಿವಿ ಸಂಶೋಧನಾ ಕ್ಷೇತ್ರದಲ್ಲಿ ಸಾಧನೆಯ ಹಾದಿಯಲ್ಲಿ ಸಾಗುತ್ತಿದೆ. ಸಂಶೋಧನೆಗೆ ಅಗತ್ಯವಿರುವ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ವಿಶ್ವವಿದ್ಯಾನಿಲಯ ಪ್ರಾಧ್ಯಾಪಕರು ವಿದೇಶಿ ವಿಶ್ವವಿದ್ಯಾನಿಲಯಗಳ ಜೊತೆಗೂಡಿ ಸಂಶೋಧನೆ ಕೈಗೊಳ್ಳುತ್ತಿದ್ದಾರೆ. ಅತ್ಯಂತ ಕಡಿಮೆ ಅವಧಿಯಲ್ಲಿ ವಿಶ್ವವಿದ್ಯಾನಿಲಯದ ಬೆಳವಣಿಗೆ ಗಮನಾರ್ಹ ಸಾಧನೆಯಾಗಿದೆ ಎಂದು ನುಡಿದರು.

ಸಿಂಡಿಕೇಟ್ ಸದಸ್ಯೆ ಮತ್ತು ಪ್ರಸಾರಾಂಗ ಸಲಹಾ ಸಮಿತಿ ಸದಸ್ಯರಾದ ಡಾ.ಜಿ.ಕೆ.ಪ್ರೇಮಾ ಮಾತನಾಡಿ, ವಿಶ್ವವಿದ್ಯಾನಿಲಯದಲ್ಲಿ ಪ್ರಕಟಿಸುವ ಸಂಶೋಧನಾ ಪ್ರಬಂಧಗಳು ಇತರರಿಗೆ ಮಾದರಿಯಾಗಿ, ಆಕರವಾಗಬೇಕು. ಸಂಶೋಧನಾ ಪ್ರಬಂಧಗಳನ್ನು ಒಟ್ಟುಗೂಡಿಸಿ ಪುಸ್ತಕ ರೂಪದಲ್ಲಿ ಹೊರ ತರುವುದೂ ಮುಖ್ಯವಾಗಿದೆ. ಆಧುನಿಕ ತಂತ್ರಜ್ಞಾನಗಳನ್ನು ಬಳಸಿಕೊಂಡು ಸಂಶೋಧಕರು, ಸಂಶೋಧನಾರ್ಥಿಗಳಿಗೆ ಸುಲಭವಾಗಿ ಲಭ್ಯವಾಗುವಂತೆ ಯೋಜನೆ ರೂಪಿಸುವುದು ಅಗತ್ಯ ಎಂದು ಸಲಹೆ ನೀಡಿದರು.

ಕುಲಸಚಿವ ಎಸ್.ಬಿ.ಗಂಟಿ, ಪರೀಕ್ಷಾಂಗ ಕುಲಸಚಿವ ಪ್ರೊ.ಸಿ.ಕೆ.ರಮೇಶ್, ಸಿಂಡಿಕೇಟ್ ಸದಸ್ಯರಾದ ಶಾರದಾ ಪಾಟೀಲ, ಡಾ.ಬಿ.ಎನ್. ಉಮೇಶ್, ದ್ಯಾಮಪ್ಪ, ಶಬ್ಬೀರ್ ಅಲಿಖಾನ್, ಡಾ.ಎನ್.ಸಿ.ಪ್ರಶಾಂತ್, ಎಚ್.ತಿಪ್ಪೇಸ್ವಾಮಿ, ಎಸ್. ಆರ್.ಉಷಾ, ಡಾ.ಕೆ.ಟಿ.ನಾಗರಾಜ ನಾಯ್ಕ್, ಡಾ. ಟಿ. ಗಿರೀಶ, ಓ.ಬಾಬುಕುಮಾರ್, ಪ್ರೊ. ರವಿಕುಮಾರ ಪಾಟೀಲ, ಪ್ರೊ.ಲೋಕೇಶ್ ಎಂ.ಯು., ಡೀನ್‌ಗಳಾದ ಪ್ರೊ.ಕೆ.ವೆಂಕಟೇಶ್, ಪ್ರೊ. ಎಂ.ಗೋವಿಂದಪ್ಪ, ಪ್ರೊ.ಕೆ.ಟಿ.ಶ್ರೀನಿವಾಸ್ ಉಪಸ್ಥಿತರಿದ್ದರು. ಪ್ರಸಾರಾಂಗ ನಿರ್ದೇಶಕ ಶಿವಕುಮಾರ ಕಣಸೋಗಿ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

## ರಾಶಿ ಭವಿಷ್ಯ

### ಮೇಷ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀ ಕುಟುಂಬಕ್ಕೆ ಸಂತೋಷದ ಸುದ್ದಿ ತರುತ್ತದೆ. ನಿಮ್ಮ ಸಂಬಂಧದ ಆ ಎಲ್ಲಾ ದೂರುಗಳು ಮತ್ತು ದ್ವೇಷಗಳು ಈ ಅದ್ಭುತವಾದ ದಿನದಂದು ಕಣ್ಮರೆಯಾಗುತ್ತವೆ.

### ವೃಷಭ ರಾಶಿ

ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಹಣಕಾಸಿನಲ್ಲಿ ಸುಧಾರಣೆ ದೀರ್ಘಕಾಲದಿಂದ ಬಾಕಿಯಿರುವ ನಿಮ್ಮ ಬಾಕಿಗಳು ಮತ್ತು ಬಿಲ್ಲುಗಳನ್ನು ಪಾವತಿಸುವುದನ್ನು ಅನುಕೂಲಕರವಾಗಿಸುತ್ತದೆ. ನೀವು ಮಕ್ಕಳು ಅಥವಾ ನಿಮಗಿಂತ ಕಡಿಮೆ ಅನುಭವಿಯಾಗಿರುವವರ ಜೊತೆ ತಾಳ್ಮೆಯಿಂದಿರಬೇಕು. ಡೇಟ್ ಕಾರ್ಯಕ್ರಮ ವಿಫಲವಾಗಬಹುದಾದ್ದರಿಂದ ನಿರಾಶೆಯಾಗಬಹುದು.

### ಮಿಥುನ ರಾಶಿ

ನಿಮ್ಮ ದೈಹಿಕ ಆರೋಗ್ಯವನ್ನು ಸುಧಾರಿಸಲು ಸಮತೋಲಿತ ಆಹಾರ ತೆಗೆದುಕೊಳ್ಳಿ ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ಇಂದು ನೀವು ಸಾಲ ಪಡೆಯಬಹುದು. ಮನೆಯ ಸಮಸ್ಯೆಗಳಿಗೆ ತಕ್ಷಣ ಗಮನ ನೀಡುವ ಅಗತ್ಯವಿರುತ್ತದೆ. ಡೇಟ್ ಕಾರ್ಯಕ್ರಮ ವಿಫಲವಾಗಬಹುದಾದ್ದರಿಂದ ನಿರಾಶೆಯಾಗಬಹುದು.

### ಕರ್ಕ ರಾಶಿ

ಕೆಲಸದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ಸ್ವಲ್ಪ ಉದ್ವೇಗ ತರಬಹುದು. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ. ನೀವು ಮಕ್ಕಳು ಅಥವಾ ನಿಮಗಿಂತ ಕಡಿಮೆ ಅನುಭವಿಯಾಗಿರುವವರ ಜೊತೆ ತಾಳ್ಮೆಯಿಂದಿರಬೇಕು. ಪ್ರಣಯದ ಸಂಬಂಧ ಅತ್ಯಾಕರ್ಷಕವಾಗಿದ್ದರೂ ಅದು ಬಹು ಕಾಲ ಬಾಳುವುದಿಲ್ಲ.

### ಸಿಂಹ ರಾಶಿ

ಅನಂತ ಚೇತನ್ಯ ಮತ್ತು ಉತ್ಸಾಹ ನಿಮ್ಮನ್ನು ಆವರಿಸುತ್ತದೆ ಮತ್ತು ನೀವು ಯಾವುದೇ ಅವಕಾಶವನ್ನು ನಿಮ್ಮ ಅನುಕೂಲಕ್ಕೆ ಬಳಸಿಕೊಳ್ಳುತ್ತೀರಿ. ವ್ಯಾಪಾರವನ್ನು ಬಲಪಡಿಸಲು ಇಂದು ನೀವು ಯಾವುದೇ ಪ್ರಮುಖ ಕ್ರಮಗಳನ್ನು ತೆಗೆದುಕೊಳ್ಳಬಹುದು. ಇದಕ್ಕಾಗಿ ನಿಮ್ಮ ಆಪ್ತ ನಿಮಗೆ ಆರ್ಥಿಕವಾಗಿ ಸಹಾಯ ಮಾಡಬಹುದು. ಯಾವುದಾದರೂ ಐತಿಹಾಸಿಕ ಸ್ಮಾರಕಕ್ಕೆ ಒಂದು ಸಣ್ಣ ಪ್ರಯಾಣವನ್ನು ಯೋಜಿಸಿ.

### ಕನ್ಯಾ ರಾಶಿ

ಬೆಂಬಲ ನೀಡುವಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸುತ್ತಾರೆ. ಈ ರಾಶಿಚಕ್ರದ ಉದ್ಯಮಿಗಳು, ಇಂದು ನಿಮ್ಮ ಬಳಿ ಹಣವನ್ನು ಕೇಳುತ್ತಾರೆ ಮತ್ತು ನಂತರ ಮರುಪಾವತಿ ಮಾಡದೇ ಇರುವಂತಹ ನಿಮ್ಮ ಮನೆಯ ಸದಸ್ಯರಿಂದ ದೂರವಿರಬೇಕು ಕುಟುಂಬದ ಸದಸ್ಯರ ಖುಷಿಯ ಸ್ವಭಾವ ಮನೆಯಲ್ಲಿನ ವಾತಾವರಣವನ್ನು ಹಗುರಗೊಳಿಸುತ್ತದೆ.

### ತುಲಾ ರಾಶಿ

ಉತ್ತಮ ಜೀವನಕ್ಕಾಗಿ ನಿಮ್ಮ ಆರೋಗ್ಯ ಮತ್ತು ಒಟ್ಟಾರೆ ವ್ಯಕ್ತಿತ್ವವನ್ನು ಸುಧಾರಿಸಲು ಪ್ರಯತ್ನಿಸಿ. ನೀವು ಸಾಲ ತೆಗೆದುಕೊಳ್ಳಲು ಹೊರಟಿದ್ದರೆ ಮತ್ತು ಈ ಕೆಲಸದಲ್ಲಿ ದೀರ್ಘಕಾಲ ತೊಡಗಿಸಿಕೊಂಡಿದ್ದರೆ, ಇಂದು ನೀವು ಸಾಲ ಪಡೆಯಬಹುದು. ನೀವು ಅತೀ ಉದಾರಿಯಾಗಿದ್ದಲ್ಲಿ – ನಿಮ್ಮ ನಿಕಟ ಜನರು ನಿಮ್ಮ ಅನುಚಿತ ಲಾಭ ತೆಗೆದುಕೊಳ್ಳಬಹುದು. ಪ್ರಣಯದ ಸಂಬಂಧ ಅತ್ಯಾಕರ್ಷಕವಾಗಿದ್ದರೂ ಅದು ಬಹು ಕಾಲ ಬಾಳುವುದಿಲ್ಲ.

### ವೃಶ್ಚಿಕ ರಾಶಿ

ನೀವು ಅಭಿಪ್ರಾಯ ನೀಡುವಾಗ ಇತರರ ಭಾವನೆಗಳನ್ನು ವಿಶೇಷವಾಗಿ ಪರಿಗಣಿಸಿ. ನೀವು ಮಾಡಿದ ಯಾವುದೇ ತಪ್ಪು ನಿರ್ಧಾರ ಅವರಿಗೆ ಮಾತ್ರ ವ್ಯತಿರಿಕ್ತ ಪರಿಣಾಮ ಉಂಟುಮಾಡದೇ ನಿಮಗೂ ಮಾನಸಿಕ ಒತ್ತಡ ನೀಡುತ್ತದೆ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು ಮತ್ತು ಆ ಸಲಹೆಗೆ ಜೀವನದಲ್ಲಿ ಸ್ಥಾನವನ್ನು ಸಹ ನೀಡಬಹುದು.

### ಧನು ರಾಶಿ

ಮನೋಬಲದ ನಿಮ್ಮ ಕೊರತೆ ನಿಮ್ಮನ್ನು ಭಾವನಾತ್ಮಕ ಮತ್ತು ಮಾನಸಿಕ ವರ್ತನೆಯ ಬಲಿಪಶುವಾಗಿ ಮಾಡಬಹುದು. ಇಂದು ನಿಮಗೆ ಹಣದ ಲಾಭವಾಗುವ ಪೂರ್ತಿ ಸಾಧ್ಯತೆ ಇದೆ, ಆದರೆ ಇದರೊಂದಿಗೆ ನೀವು ದಾನವನ್ನು ಸಹ ಮಾಡಬೇಕು ಏಕೆಂದರೆ ಇದರಿಂದ ನಿಮಗೆ ಮಾನಸಿಕ ಶಾಂತಿ ಸಿಗುತ್ತದೆ. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ. ಪ್ರೀತಿ ಕೇವಲ ವಸಂತ; ಹೂಗಳು, ಗಾಳಿ, ಬಿಸಿಲು, ಚಿಟ್ಟೆಗಳು. ನೀವು ಇಂದು ಪ್ರಣಯದ ಕಚಗುಳಿಯನ್ನು ಅನುಭವಿಸುತ್ತೀರಿ

### ಮಕರ ರಾಶಿ

ನಿಮ್ಮ ಸಂಗಾತಿಯ ನಿಷ್ಠಾವಂತ ಹೃದಯ ಮತ್ತು ಅದ್ಭುತ ಚೈತನ್ಯ ನಿಮಗೆ ಸಂತೋಷ ನೀಡಬಹುದು. ಹಿಂದಿನ ಬಂಡವಾಳದಿಂದ ಆದಾಯವನ್ನು ನಿರೀಕ್ಷಿಸಿದ್ದಲ್ಲಿ. ಸೋದರಿಯ ಪ್ರೀತಿ ನಿಮ್ಮನ್ನು ಉತ್ತೇಜಿಸುತ್ತದೆ. ಅದರೆ ನೀವು ಚಿಕ್ಕ ವಿಷಯಳಿಗೆ ತಾಳ್ಮೆ ಕಳೆದುಕೊಳ್ಳಬಾರದು ಏಕೆಂದರೆ ಅದು ನಿಮ್ಮ ಆಸಕ್ತಿಗಳನ್ನು ಹಾಳು ಮಾಡುತ್ತದೆ.

### ಕುಂಭ ರಾಶಿ

ಕೆಲವು ಬಿಕ್ಕಟ್ಟುಗಳು ಮತ್ತು ಭಿನ್ನಾಭಿಪ್ರಾಯಗಳು ನಿಮಗೆ ಕಿರಿಕಿರಿ ಹಾಗೂ ಆತಂಕವನ್ನು ತರಬಹುದು. ಇಂದು ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ನೀವು ನಿಮ್ಮ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು. ನಿಮ್ಮ ಸಾಮಾಜಿಕ ಜೀವನವನ್ನು ನಿರ್ಲಕ್ಷಿಸಬೇಡಿ. ನಿಮ್ಮ ಬಿಡುವಿರದ ಕೆಲಸದಿಂದ ಸ್ವಲ್ಪ ಸಮಯ ತೆಗೆದುಕೊಳ್ಳಿ ಹಾಗೂ ನಿಮ್ಮ ಕುಟುಂಬದೊಂದಿಗೆ ಯಾವುದಾದರೂ ಪಾರ್ಟಿಗೆ ಹೋಗಿ.

### ಮೀನ ರಾಶಿ

ಧ್ಯಾನ ಪರಿಹಾರ ತರುತ್ತದೆ. ತೀರಾ ಖರ್ಚು ಮಾಡುವ ಮತ್ತು ಮನರಂಜನೆಗೆ ತುಂಬಾ ಖರ್ಚ ಮಾಡುವ ನಿಮ್ಮ ಪ್ರವೃತ್ತಿಗೆ ಕಡಿವಾಣ ಹಾಕಿ. ಕುಟುಂಬದ ಪರಿಸ್ಥಿತಿ ಇಂದು ನೀವು ಯೋಚಿಸುವ ಹಾಗೆ ಇರುವುದಿಲ್ಲ. ಇಂದು ಮನೆಯಲ್ಲಿ ಯಾವುದೇ ವಿಷಯದ ಬಗ್ಗೆ ಅಪಶ್ರುತಿ ಉಂಟಾಗುವ ಸಾಧ್ಯತೆ ಇದೆ. ಅಂತಹ ಪರಿಸ್ಥಿತಿಯಲ್ಲಿ ನಿಮ್ಮನ್ನು ನಿಯಂತ್ರಿಸಿ.ನೀವು ಇಂದು ಪ್ರೀತಿ ಮಾಲಿನ್ಯವನ್ನು ಹರಡುತ್ತೀರಿ.

# ಭಾರತದಲ್ಲಿ ರೂ. 100 ಕೋಟಿ ಹೂಡಿಕೆಗೆ ಆಮ್ವೇ ನಿರ್ಧಾರ



**ಬಳ್ಳಾರಿ:** ಮುಂದಿನ ಮೂರರಿಂದ ಐದು ವರ್ಷಗಳಲ್ಲಿ ಭಾರತದಲ್ಲಿ 100 ಕೋಟಿ ರೂಪಾಯಿ ಹೂಡಿಕೆ ಮಾಡಲು ಆಮ್ವೇ ನಿರ್ಧರಿಸಿದೆ ಎಂದು ಆಮ್ವೇ ಅಧ್ಯಕ್ಷ ಮತ್ತು ಸಿಇಒ ಮೈಕಲ್ ನೆಲ್ಸನ್ ಪ್ರಕಟಿಸಿದ್ದಾರೆ.

ಭಾರತದಲ್ಲಿ ಉತ್ಪಾದನೆ ಆರಂಭಿಸಿ ಹತ್ತು ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ಭಾರತಕ್ಕೆ ಭೇಟಿ ನೀಡಿದ ಅವರು, ಆಮ್ವೇ ಬ್ಯುಸಿನೆಸ್ ಮಾಲೀಕರು/ ವಿತರಕ ಸಾಮರ್ಥ್ಯಗಳನ್ನು ಮತ್ತಷ್ಟು ಹೆಚ್ಚಿಸುವುದು, ತನ್ನ ಭೌತಿಕ ಉಪಸ್ಥಿತಿಯನ್ನು ಬಲಪಡಿಸುವುದು ಮತ್ತು ವಿಸ್ತರಿಸುವುದು ಹಾಗೂ ಗ್ರಾಹಕ ಅನುಭವವನ್ನು ಮತ್ತಷ್ಟು ಹೆಚ್ಚಿಸುವ ಉದ್ದೇಶ ಹೊಂದಿದೆ ಎಂದು ಹೇಳಿದ್ದಾರೆ.


ಸಂಸ್ಥೆಯ ಭೌತಿಕ ಉಪಸ್ಥಿತಿಯನ್ನು ವಿಸ್ತರಿಸಲು ಮತ್ತು ಚೌಕಟ್ಟು ಮರುವಿನ್ಯಾಸ, ವಿಶೇಷ ತರಬೇತಿ ವಲಯಗಳು ಮತ್ತು ಸುಧಾರಿಸಿದ ಸೇವಾ ಅಭುಭವಗಳ ಜೊತೆಯಲ್ಲಿ ಪ್ರಸ್ತುತ ಮಳಿಗೆಗಳನ್ನು ಸಮಯ ಕಳೆಯುವ ಡೈನಾಮಿಕ್ ಹಬ್ ಗಳಾಗಿ ಬದಲಾಯಿಸುವ ಮೂಲಕ ವಿತರಕ ಮತ್ತು ಗ್ರಾಹಕ ಅನುಭವವನ್ನು ಉತ್ತಮಗೊಳಿಸುವ ನಿಟ್ಟಿನಲ್ಲಿ ಹೂಡಿಕೆ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಮೇಕ್ ಇನ್ ಇಂಡಿಯಾ ದೃಷ್ಟಿಕೋನದಡಿ ಭಾರತ ವಿಕಸಿತ ಭಾರತದೆಡೆಗೆ ದಾಪುಗಾಲು ಹಾಕುತ್ತಿರುವ ಹಿನ್ನೆಲೆಯಲ್ಲಿ ಸ್ಥಳೀಯ ಉಪಸ್ಥಿತಿಯನ್ನು ಬಲಪಡಿಸುವ ಮೂಲಕ ಮತ್ತು ಜನರು ಹಾಗೂ ನಾವಿನ್ಯತೆಯಲ್ಲಿ ಹೂಡಿಕೆ ಮಾಡುವ ಮೂಲಕ ಈ ಪರಿವರ್ತನಾ ಪ್ರಯಾಣದಲ್ಲಿ ಕೊಡುಗೆ ನೀಡಲು ಬಹಳ ಹೆಮ್ಮೆ ಪಡುತ್ತೇವೆ ಎಂದು ಆಮ್ವೇ ಇಂಡಿಯಾದ ವ್ಯವಸ್ಥಾಪಕ ನಿರ್ದೇಶಕರಾಗಿರುವ ರಜನೀಶ್ ಚೋಪ್ರಾ ವಿವರಿಸಿದ್ದಾರೆ.

## ಡಾ.ಹಂಪನಹಳ್ಳಿ ತಿಮ್ಮೇಗೌಡ ಪ್ರಶಸ್ತಿ

**ಹಾಸನ :** ಹಾಸನದ ಮಾಣಿಕ್ಯ ಪ್ರಕಾಶನ ನೀಡುವ ರಾಜ್ಯ ಮಟ್ಟದ ನಿಂಗಪ್ಪ ಮಲ್ಲಪ್ಪ ಮೇಟಿ ಸ್ಮಾರಕ ದತ್ತಿ- ಸಂಶೋಧನಾ ಮಾಣಿಕ್ಯ ಪ್ರಶಸ್ತಿಯನ್ನು ನಿವೃತ್ತ ಪ್ರಾಧ್ಯಾಪಕ, ಜಾನಪದ ವಿದ್ವಾಂಸ, ಶಿಕ್ಷಣ ತಜ್ಞ, ಸಾಹಿತಿಯು ಆಗಿರುವ ಡಾ.ಹಂಪನಹಳ್ಳಿ ತಿಮ್ಮೇಗೌಡ ಅವರ ದಾಸೊಕ್ಕಲಿಗರುಕೃತಿಗೆ ನೀಡಿರುವುದಾಗಿ ಪ್ರಕಾಶಕಿ ದೀಪಾ ಉಪ್ಪಾರ್ ತಿಳಿಸಿದ್ದಾರೆ. ಡಾ.ಹಂಪನಹಳ್ಳಿ ತಿಮ್ಮೇಗೌಡ ಅವರು ಇದುವರೆಗೆ ಸ್ವರಚಿತ ಮತ್ತು ಸಂಪಾದನೆಯ ನಲವತ್ತು ಕೃತಿಗಳನ್ನು ಪ್ರಕಟಿಸಿದ್ದಾರೆ.

# ಮೂಗ್ತಿಹಳ್ಳಿ ಶಾಲಾಮಕ್ಕಳಿಗೆ ಟ್ರ್ಯಾಕ್‌ಸೂಟ್



**ಚಿಕ್ಕಮಗಳೂರು:** ಮಹಿಳಾ ಜಾಗೃತಿ ಸಂಘದ ವತಿಯಿಂದ ಮೂಗ್ತಿಹಳ್ಳಿ ಸರ್ಕಾರಿ ಮಾದರಿ ಹಿರಿಯಪ್ರಾಥಮಿಕ ಶಾಲಾ ಮಕ್ಕಳಿಗಿಂದು ಟ್ರ್ಯಾಕ್ ಸೂಟ್ ವಿತರಿಸಲಾಯಿತು.

ಮಹಿಳಾ ಜಾಗೃತಿ ಸಂಘದ ಸಹಕಾರ್ಯದರ್ಶಿ ಗೀತಾ ಸುಂದರೇಶ್ ಈ ಸಂದರ್ಭದಲ್ಲಿ ಮಾತನಾಡಿ ಸಮವಸ್ತ್ರ ಮತ್ತು ಟ್ರ್ಯಾಕ್‌ಸೂಟ್‌ಗಳು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಶಿಸ್ತು ಮತ್ತು ಸಮಾನತೆಯನ್ನು ತರಲು ಸಹಕಾರಿ. ಟ್ರ್ಯಾಕ್‌ಸೂಟ್ ಮಕ್ಕಳು ಕವಾಯಿತ್ ಮಾಡಲು ಕ್ರೀಡಾ ಚಟುವಟಿಗಳಲ್ಲಿ ತೊಡಗಿಸಿಕೊಳ್ಳಲು ಅನುಕೂಲಕರ ಎಂದರು.

ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆಗಳ ಅಗತ್ಯತೆಗೆ ಸ್ಪಂದಿಸುವ ಆಶಯ ಸಂಘದ್ದಾಗಿದೆ. ಮೂಗ್ತಿಹಳ್ಳಿ ಶಾಲೆಯಿಂದ ಟ್ರ್ಯಾಕ್ ಸೂಟ್ ಬೇಡಿಕೆ ಬಂದಿದ್ದು ಶಾಲೆಯ 22ಮಕ್ಕಳಿಗೆ 11,000ರೂ. ವೆಚ್ಚದಲ್ಲಿ ಪೂರೈಸಲಾಗಿದೆ. ತಮ್ಮೊಂದಿಗೆ ಕಾರ್ಯದರ್ಶಿ ಕಾತ್ಯಾಯಿನಿಚಂದ್ರಶೇಖರ್ ನೇತೃತ್ವದಲ್ಲಿ ರೇಣುಕಾಕುಮಾರ್, ಗೀತಾಮೂರ್ತಿ, ಭಾರತಿಶಿವರುದ್ರಪ್ಪ ಮತ್ತು ರೇಣುಕಾಪ್ರಸನ್ನ ಕೈಜೋಡಿಸಿದ್ದಾರೆಂದರು.

ನಿರ್ದೇಶಕಿ ಗೀತಾಮೂರ್ತಿ ಮಾತನಾಡಿ 1983ರಲ್ಲಿ ಗೌರಮ್ಮಬಸವೇಗೌಡರ ನೇತೃತ್ವದಲ್ಲಿ ಆರಂಭಗೊಂಡ ಸಂಘ ನಿರಂತರವಾಗಿ ಕಾರ್ಯ ಚಟುವಟಿಕಗಳನ್ನು ನಡೆಸಿಕೊಂಡು ಬಂದಿದೆ. ಮಹಿಳೆಯರಲ್ಲಿರುವ

ಸುಪ್ತ ಪ್ರತಿಭೆಗೆ ವೇದಿಕೆ ನಿರ್ಮಿಸುತ್ತಿದೆ. ಇದರ ಜೊತೆಗೆ ಒಂದಷ್ಟು ಸೇವಾಕಾರ್ಯವನ್ನು ಮಾಡಬೇಕೆಂಬುದು ಹಿರಿಯರ ಅಪೇಕ್ಷೆ. ಪ್ರತಿವರ್ಷ ಕನಿಷ್ಟು ನಾಲ್ಕು ಸೇವಾ ಯೋಜನೆಗಳನ್ನು ಹಮ್ಮಿಕೊಂಡು ಸಮಾಜಕ್ಕೆ ಅಲ್ಪ ಕಾಣಿಕೆಯನ್ನು ಸಲ್ಲಿಸಲಾಗುತ್ತಿದೆ ಎಂದರು.

ಕೊಡುಗೆ ಸ್ವೀಕರಿಸಿ ಕೃತಜ್ಞತೆಸಲ್ಲಿಸಿದ ಶಾಲಾಮುಖ್ಯಶಿಕ್ಷಕಿ ಶುಭಮಣಿ ಗ್ರಾಮೀಣ ರೈತಾಪಿವರ್ಗದ ಮಕ್ಕಳು ಕಲಿಯುತ್ತಿರುವ ಸರ್ಕಾರಿ ಶಾಲೆಯನ್ನು ಆಯ್ಕೆಮಾಡಿಕೊಂಡು ಅವಶ್ಯಕತೆ ಅರಿತು ನೆರವು ನೀಡುವ ಮಹಿಳಾಜಾಗೃತಿ ಸಂಘದ ಕಾರ್ಯ ಸಮಾಜಕ್ಕೆ ಮಾದರಿ ಎಂದರು. ಶಿಕ್ಷಕರಾದ ನಾಗಮಣಿ ಮತ್ತು ಆನಂದ, ಸಂಘದ ಸದಸ್ಯೆ ರೇಣುಕಾಕುಮಾರ್ ಮತ್ತಿತರರು ಉಪಸ್ಥಿತರಿದ್ದರು

# ಲಕ್ಕಲಕಟ್ಟಿ ತಾಂಡಾ ಭೇಟಿ ವೇಳೆ ಗ್ರಾಪಂ ಸಿಬ್ಬಂದಿಗೆ ತಾಕೀತು ಮಾಡಿದ ತಾಪಂ ಇಒ ಚಂದ್ರಶೇಖರ ಕಂದಕೂರ




**ಗಜೇಂದ್ರಗಡ:** ತಾಲೂಕಿನ ತಾಂಡಾ ನಿವಾಸಿಗಳಿಗೆ ಮೂಲಭೂತ ಸೌಲಭ್ಯಗಳ ಪೂರೈಕೆಯಲ್ಲಿ ಯಾವುದೇ ಲೋಪದೋಷಗಳಾಗದಂತೆ ನೋಡಿಕೊಳ್ಳಿ ಅಂತ ಗ್ರಾಮ ಪಂಚಾಯತ ಸಿಬ್ಬಂದಿಗಳಿಗೆ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಬಿ, ಕಂದಕೂರ ತಾಕೀತು ಮಾಡಿದರು.

ತಾಂಡಾ ನಿವಾಸಿಗಳು ದೂರವಾಣಿ ಕರೆ ಮಾಡಿ ಮನವಿ ಮಾಡಿಕೊಂಡ ಹಿನ್ನೆಲೆಯಲ್ಲಿ ಗಜೇಂದ್ರಗಡ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಇಂದು ಲಕ್ಕಲಕಟ್ಟಿ ತಾಂಡಾಕ್ಕೆ ಭೇಟಿ ನೀಡಿ ತಾಂಡಾ ಗ್ರಾಮಸ್ಥರ ಜೊತೆ ಸಮಾಲೋಚನೆ ನಡೆಸಿ ಸಮಸ್ಯೆ ಆಲಿಸಿದರು.

ಭೇಟಿ ವೇಳೆ ಲಕ್ಕಲಕಟ್ಟಿ ತಾಂಡಾದಲ್ಲಿ 50 ಕ್ಕೂ ಅಧಿಕ ಕುಟುಂಬಗಳಿದ್ದು, ತಾಂಡಾದಲ್ಲಿ ನಿರಂತರ ವಿದ್ಯುತ್ ಸಂಪರ್ಕಕ್ಕೆ ಗ್ರಾಮಸ್ಥರು ಮನವಿ ಮಾಡಿದರು. ಮನವಿಗೆ ಸ್ಪಂದಿಸಿದ ಇಒ ಅವರು, ಸ್ಥಳದಲ್ಲೇ ಸಂಬಂಧಿಸಿದ ಅಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ ನಿರಂತರ ವಿದ್ಯುತ್ ಸಂಪರ್ಕ ಇಲ್ಲದೇ ತಾಂಡಾ ನಿವಾಸಿಗಳು ಸಂಕಷ್ಟ ಎದುರಿಸುತ್ತಿದ್ದು, ನಿರಂತರ ವಿದ್ಯುತ್ ಸಂಪರ್ಕ ನೀಡಿ ಸಮಸ್ಯೆ ಬಗೆಹರಿಸುವಂತೆ ಸೂಚಿಸಿದರು.

ತಾಂಡಾಕ್ಕೆ ಸಮರ್ಪಕ ಕುಡಿಯುವ ನೀರು ಹಾಗೂ ತಾಂಡಾದಲ್ಲಿ ಸ್ವಚ್ಛತೆ ಕಾರ್ಯ ನಿರಂತರವಾಗಿ ಕೈಗೊಂಡು ತಾಂಡಾದ ವಾತಾವರಣ ಸ್ವಚ್ಛಂದವಾಗಿಟ್ಟುಕೊಳ್ಳುವಂತೆ ಶ್ರಮಿಸಬೇಕೆಂದು ಸ್ಥಳದಲ್ಲಿದ್ದ ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ತಾಕೀತು ಮಾಡಿದರು.ತಾಂಡಾ ನಿವಾಸಿಗಳು ಇ-ಕೆವೈಸಿ ಮಾಡಿಸಿಕೊಂಡು ನರೇಗಾ ಯೋಜನೆ ಸದುಪಯೋಗ ಪಡೆಯಿರಿ

ನರೇಗಾ ಕಾಮಗಾರಿಗಳಲ್ಲಿ ಕೆಲಸ ಮಾಡಲು ಕೂಲಿಕಾರರಿಗೆ ಕೇಂದ್ರ ಸರ್ಕಾರ ಇ-ಕೆವೈಸಿ ಮಾಡಿಸುವುದು ಕಡ್ಡಾಯಗೊಳಿಸಿದೆ. ಅಕ್ಟೋಬರ್ -31 ರೊಳಗಾಗಿ ತಾಂಡಾದ ನರೇಗಾ ಕೂಲಿಕಾರರೆಲ್ಲರೂ ಇ-ಕೆವೈಸಿ ಮಾಡಿಸಿಕೊಳ್ಳಬೇಕು. ಇಲ್ಲವೇ ನರೇಗಾ ಉದ್ಯೋಗ ಚೀಟಿ ರದ್ದಾಗುವ ಸಾಧ್ಯತೆ ಹೆಚ್ಚು ಅಂತ ತಾಂಡಾ ನಿವಾಸಿಗಳಿಗೆ ತಿಳುವಳಿಕೆ ಮೂಡಿಸಿದರು. ಖುದ್ದು ಇಒ ಚಂದ್ರಶೇಖರ ಕಂದಕೂರ ಅವರೇ ತಾಂಡಾ ನಿವಾಸಿಗಳ ಇ-ಕೆವೈಸಿ ಮಾಡುವ ಮೂಲಕ ಕೂಲಿಕಾರರಲ್ಲಿ ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಲಕ್ಕಲಕಟ್ಟಿ ಗ್ರಾಪಂ ಪಿಡಿಒ ಶಿವಯೋಗಿ ರಿತ್ತಿ, ಕಾರ್ಯದರ್ಶಿ ಶರಣಪ್ಪ ಮೇಟಿ, ತಾಂಡಾ ರೋಜಗಾರ ಮಿತ್ರ ಸಕ್ಕುಬಾಯಿ ರಾಥೋಡ, ಗ್ರಾಮ ಕಾಯಕ ಮಿತ್ರ ಸುಜಾತ ಮ್ಯಾಗೇರಿ ಹಾಗೂ ಗ್ರಾಪಂ ಸಿಬ್ಬಂದಿ ವರ್ಗ ಹಾಜರಿದ್ದರು.

ಇದೇ ವೇಳೆ ತಾಂಡಾ ದಲ್ಲಿ ಬಾಕಿಯಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಇಂದು ಸಾಯಂಕಾಲದೊಳಗಾಗಿ ಪೂರ್ಣಗೊಳಿಸಬೇಕೆಂದು ಸಿಬ್ಬಂದಿಗೆ ಇಒ ಚಂದ್ರಶೇಖರ ಕಂದಕೂರ ಅವರು ಸೂಚಿಸಿದರು.

# ನ.4 ರಂದು ಜಿಲ್ಲಾ ಯುವಜನೋತ್ಸವ ಸ್ಪರ್ಧೆ

**ಚಿಕ್ಕಮಗಳೂರು:** ಯುವಜನರಲ್ಲಿ ಶಾಸ್ತ್ರೀಯ ಕಲೆ, ಜಾನಪದ ಕಲೆ, ಸಂಗೀತ ಮತ್ತು ಸಂಸ್ಕೃತಿಯ ಬಗೆಗಿನ ಕಾಳಜಿ ಹೆಚ್ಚಿಸಲು, ಉತ್ತೇಜನ ನೀಡಲು ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರಗಳ ವತಿಯಿಂದ ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆ ಅಂಗವಾಗಿ ಪ್ರತೀ ವರ್ಷ ಜನವರಿ 12 ರಂದು ರಾಷ್ಟ್ರೀಯ ಯುವ ದಿನಾಚರಣೆಯನ್ನು ಸಂಘಟಿಸಲಾಗುತ್ತಿದೆ. ಈ ಪ್ರಯುಕ್ತ ರಾಷ್ಟ್ರ, ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಯುವಜನೋತ್ಸವ ಸಾಂಸ್ಕೃತಿಕ ಸ್ಪರ್ಧಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ.

ನವೆಂಬರ್ 4 ರಂದು ನಗರದ ಕುವೆಂಪು ಕಲಾಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ನೆಹರು ಯುವ ಕೇಂದ್ರ ಮತ್ತು ಜಿಲ್ಲಾ ಎನ್‌ಎಸ್‌ಎಸ್ ಘಟಕದ ಆಶ್ರಯದಲ್ಲಿ ವಿವಿಧ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, 15 ರಿಂದ 29 ವಯೋಮಿತಿಯ ಈ ಜಿಲ್ಲೆಯ ಸ್ಪರ್ಧಾಕಾಂಕ್ಷಿ ಯುವಕ, ಯುವತಿಯರು, ಸಂಘ-ಸಂಸ್ಥೆಗಳ ಪ್ರತಿನಿಧಿಗಳು, ಶಾಲಾ ಕಾಲೇಜು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಅಂದು ಬೆಳಿಗ್ಗೆ 9.30 ಗಂಟೆಗೆ ಕಲಾಮಂದಿರದಲ್ಲಿ ವರದಿ ಮಾಡಿಕೊಳ್ಳುವಂತೆ ತಿಳಿಸಲಾಗಿದೆ. ಸ್ಪರ್ಧೆಗಳಲ್ಲಿ ಜನಪದ ಗೀತೆ (ಗುಂಪು), ಜಾನಪದ ನೃತ್ಯ(ಗುಂಪು), ಕಥೆ ಬರೆಯುವುದು (ವೈಯಕ್ತಿಕ), ಕವಿತೆ ಬರೆಯುವುದು (ವೈಯಕ್ತಿಕ), ಭಾಷಣ (ವೈಯಕ್ತಿಕ), ಚಿತ್ರಕಲೆ, ವಿಜ್ಞಾನ ಮೇಳ ನಡೆಯಲಿವೆ. ಹೆಚ್ಚಿನ ಮಾಹಿತಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಚೇರಿ(08262-295724)ಯನ್ನು ಸಂಪರ್ಕಿಸಬಹುದು.

# ಲಿಂಗತ್ವ ಅಲ್ಪಸಂಖ್ಯಾತರ ಸಮೀಕ್ಷೆಗೆ ಮಾಹಿತಿ ಒದಗಿಸಲು ಸೂಚನೆ

**ಚಿಕ್ಕಮಗಳೂರು:** ಲಿಂಗತ್ವ ಅಲ್ಪಸಂಖ್ಯಾತರ (ಟ್ರಾನ್ಸ್ ಜೆಂಡರ್) ಸಮೀಕ್ಷೆಗೆ ಈಗಾಗಲೇ ಚಾಲನೆ ನೀಡಲಾಗಿದ್ದು, ರಜಾ ದಿನಗಳನ್ನು ಹೊರತುಪಡಿಸಿ ನವೆಂಬರ್ 21ರವರೆಗೆ ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆಯವರೆಗೆ ಜಿಲ್ಲಾ ಆಸ್ಪತ್ರೆ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ನಡೆಸಲಾಗುತ್ತಿದೆ. ಲಿಂಗತ್ವ ಅಲ್ಪಸಂಖ್ಯಾತರ ಜನಸಂಖ್ಯೆ, ಶೈಕ್ಷಣಿಕ ಮಟ್ಟ, ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿಗಳ ಮಾಹಿತಿ ಅತೀ ಅಗತ್ಯವಾಗಿರುವುದರಿಂದ ಜಿಲ್ಲೆಯ ಲಿಂಗತ್ವ ಅಲ್ಪಸಂಖ್ಯಾತ ಸಮುದಾಯದವರು ಕಡ್ಡಾಯವಾಗಿ ತಮ್ಮ ಆಧಾರ್ ಕಾರ್ಡ್‌ನೊಂದಿಗೆ ಹಾಜರಾಗಿ ಮಾಹಿತಿ ಒದಗಿಸಬೇಕು. ಹೆಚ್ಚಿನ ವಿವರಕ್ಕೆ ನಗರದ ಸಂಮಿತ್ರ ಸಂಸ್ಥೆಯ ಕೆ.ಎಸ್. ಮೇಘರಾಜ್ ಮಲ್ನಾಡ್ (ಮೊ:9480892446), ಎಂ.ಫಾತಿಮತ್ ನಾಜಿಯ (ಮೊ:8123332218) ಮತ್ತು ಮಹಿಳಾ ಅಭಿವೃದ್ಧಿ ನಿರೀಕ್ಷಕರ(ಮೊ:9449425275) ಅವರನ್ನು ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭೂಸ್ವಾಧೀನ ಪರಿಹಾರ: ಅಗತ್ಯ ದಾಖಲೆ ಒದಗಿಸಲು ಸೂಚನೆ

**ಚಿಕ್ಕಮಗಳೂರು:** ರಾಷ್ಟ್ರೀಯ ಹೆದ್ದಾರಿ 173ರ ಕಿ.ಮೀ. 0.00 ಯಿಂದ 26.326 (ಮೂಡಿಗೆರೆಯಿಂದ ಮೂಗ್ತೀಹಳ್ಳಿ) ವರೆಗಿನ ರಸ್ತೆ ಅಗಲೀಕರಣ ಕಾಮಗಾರಿಯ ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ಭೂಸ್ವಾಧೀನಕ್ಕೆ ಒಳಪಡುವ ಭೂಮಾಲೀಕರುಗಳಿಗೆ ಪರಿಹಾರವನ್ನು ಪಾವತಿಸಲು ಈಗಾಗಲೇ ಅವಾರ್ಡ್ ನೋಟಿಸನ್ನು ನೀಡಲಾಗಿದೆ. ಅದರಂತೆ ಕೆಲವು ಭೂಮಾಲೀಕರಿಂದ ಮಾತ್ರ ಭೂಸ್ವಾಧೀನದ ಪರಿಹಾರ ಪಾವತಿಗೆ ಅವಶ್ಯ ದಾಖಲೆಗಳು ಭೂಸ್ವಾಧೀನ ಪ್ರಾಧಿಕಾರದಲ್ಲಿ ಸ್ವೀಕೃತವಾಗಿವೆ.

ಭೂಸ್ವಾಧೀನ ಪರಿಹಾರ ಮೊತ್ತವನ್ನು ಪಡೆಯಲು ಅಗತ್ಯ ದಾಖಲಾತಿಗಳನ್ನು ಇದುವರೆಗೂ ಸಲ್ಲಿಸದೆ ಇರುವ ಭೂಮಾಲೀಕರು ನವೆಂಬರ್ 10ರ ಒಳಗಾಗಿ ನಗರದ ಚಿಕ್ಕಮಗಳೂರು ಉಪವಿಭಾಗದ ಉಪವಿಭಾಗಾಧಿಕಾರಿ ಹಾಗೂ ಭೂಸ್ವಾಧೀನ ಪ್ರಕ್ರಿಯೆಗಳ ಸಕ್ಷಮ ಪ್ರಾಧಿಕಾರಿ (ಮೂಡಿಗೆರೆಯಿಂದ ಮೂಗ್ತೀಹಳ್ಳಿ ಸೆಕ್ಷನ್)ಯವರ ಕಚೇರಿಗೆ ಸಲ್ಲಿಸಬೇಕು. ತಪ್ಪಿದಲ್ಲಿ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಉಪವಿಭಾಗಾಧಿಕಾರಿ ಹಾಗೂ ಭೂಸ್ವಾಧೀನ ಪ್ರಕ್ರಿಯೆಗಳ ಸಕ್ಷಮ ಪ್ರಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾಸಿಸುವವನೇ ಮನೆಯೊಡೆಯ” ಯೋಜನೆಯ ಸದುಪಯೋಗಕ್ಕೆ ಶಾಸಕ ತಮ್ಮಯ್ಯ ಕರೆ



**ಚಿಕ್ಕಮಗಳೂರು:** ಬಡವರು ಹಾಗೂ ಶೋಷಿತ ವರ್ಗದ ಕುಟುಂಬಗಳು ಉತ್ತಮ ಶಿಕ್ಷಣ ಪಡೆಯುವ ಮೂಲಕ ಸಮಾಜದ ಮುನ್ನಲೆಗೆ ಬರಬೇಕು ಎಂದು ಶಾಸಕ ಹೆಚ್.ಡಿ. ತಮ್ಮಯ್ಯ ಕರೆನೀಡಿದರು.

ಅವರು ಇಂದು ಬಾಣೂರು ಗ್ರಾ.ಪಂ ವ್ಯಾಪ್ತಿಯಲ್ಲಿ ಏರ್ಪಡಿಸಲಾಗಿದ್ದ ರಾಜ್ಯಸರ್ಕಾರದ ವಿಶೇಷ ಯೋಜನೆ “ವಾಸಿಸುವವನೇ ಮನೆಯ ಒಡೆಯ” ಯೋಜನೆಯಡಿ ಫಲಾನುಭವಿಗಳಿಗೆ ಹಕ್ಕುಪತ್ರ ನೀಡಿ ಮಾತನಾಡಿದರು.

ಮಾಜಿ ಪ್ರಧಾನಿ ಶ್ರೀಮತಿ ಇಂದಿರಾ ಗಾಂಧಿ ಮತ್ತು ಮಾಜಿ ಮುಖ್ಯಮಂತ್ರಿ ಡಿ.ದೇವರಾಜು ಅರಸು ಅಧಿಕಾರವಧಿಯಲ್ಲಿ “ಉಳುವವನೇ ಭೂಮಿ ಒಡೆಯ” ಎಂಬ ಯೋಜನೆಯನ್ನು ಜಾರಿಗೆ ತಂದು ಹಕ್ಕುಪತ್ರ ನೀಡಿದ ಮಾದರಿಯಲ್ಲೇ ರಾಜ್ಯಸರ್ಕಾರ “ವಾಸಿಸುವವನೇ ಮನೆಯ ಒಡೆಯ” ಯೋಜನೆ ಜಾರಿಮಾಡಿ ಬಡವರಿಗೆ ಹಕ್ಕುಪತ್ರ ನೀಡಲು ಮುಂದಾಗಿದೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕಂದಾಯ ಸಚಿವ ಕೃಷ್ಣಭೈರೇಗೌಡ ಶಾಸಕರ ನೇತೃತ್ವದಲ್ಲಿ ಈ ಯೋಜನೆಯಡಿ ಗ್ರಾಮಗಳಲ್ಲಿ ಬಡವರು ವಾಸಿಸುವ ಫಲಾನುಭವಿಗಳನ್ನು ಗುರ್ತಿಸಿ ಹಕ್ಕುಪತ್ರಗಳನ್ನು ನೀಡುತ್ತಿರುವ ಜೊತೆಗೆ ಕಂದಾಯ ಗ್ರಾಮ ಮತ್ತು ಕಂದಾಯ ಉಪಗ್ರಾಮಗಳನ್ನು ಆಯ್ಕೆಮಾಡಲಾಗಿದೆ ಎಂದರು.

ಸರ್ಕಾರದ ಈ ಯೋಜನೆಯ ಸೌಲಭ್ಯವನ್ನು ಸದುಪಯೋಗಪಡಿಸಿಕೊಂಡು ನಿಮ್ಮ ಕುಟುಂಬದ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು ಎಂದು ಕಿವಿಮಾತು ಹೇಳಿದರು.

ಭದ್ರಾ ಉಪಕಣಿವೆ ಯೋಜನೆಯ ಮೂರನೇ ಹಂತದ ಕಾಮಗಾರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಧ್ಯದಲ್ಲೇ ಗುದ್ದಲಿ ಪೂಜೆ ನೆರವೇರಿಸಲಿದ್ದು, ನಂತರ ಈ ಭಾಗದ ಕೆರೆಗಳನ್ನು ತುಂಬಿಸುವ ಯೋಜನೆ ಜಾರಿಯಾಗಲಿದೆ ಎಂದು ಭರವಸೆ ನೀಡಿದರು.

ರೈತರ ತೆಂಗು, ಅಡಿಕೆ, ಶುಂಠಿ, ಟೊಮ್ಯಾಟೋ ಮುಂತಾದ ಉತ್ಪನ್ನಗಳಿಗೆ ಉತ್ತಮ ಬೆಲೆ ದೊರಕಿದಾಗ ರೈತರು ಹಾಗೂ ರೈತಕಾರ್ಮಿಕರು ಸಂತೋಷವಾಗಿರುತ್ತಾರೆಂದು ಹೇಳಿದರು.

ಪಂಚ ಗ್ಯಾರಂಟಿಗಳನ್ನು ಜಾರಿಗೆ ತಂದು ಅನುಷ್ಠಾನಗೊಳಿಸಿರುವ ರಾಜ್ಯಸರ್ಕಾರ ಬಡವರ, ಶೋಷಿತರ ಕುಟುಂಬಗಳಿಗೆ ಆರ್ಥಿಕ ನೆರವು ನೀಡಿ ಸದೃಢಗೊಳಿಸಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಬಾಣೂರು ಗ್ರಾ.ಪಂ ಅಧ್ಯಕ್ಷೆ ಸುನಂದಮ್ಮ, ಸದಸ್ಯೆ ಉಮಾಭಾರ್ಗವ್, ಅಜ್ಜಯ್ಯ, ನವೀನ್, ಮಂಜುಳ, ಮಮತ, ಯಶೋಧ, ಕಡೂರು ತಹಶೀಲ್ದಾರ್ ಪೂರ್ಣಿಮ, ಇಒ ಪ್ರವೀಣ್, ರಾಜಸ್ವ ನಿರೀಕ್ಷಕ ರವಿ, ತಾ.ಪಂ ಮಾಜಿ ಸದಸ್ಯ ಧನಂಜಯ್ ಉಪಸ್ಥಿತರಿದ್ದರು.

# ಜಿಲ್ಲಾ ಯುವಜನೋತ್ಸವದ ಬಹುಮಾನ ವಿತರಣಾ ಸಮಾರಂಭ

**ಚಿಕ್ಕಮಗಳೂರು:** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮೇರಾ ಯುವ ಭಾರತ್ ಜಿಲ್ಲಾ ಎನ್‌ಎಸ್‌ಎಸ್ ಘಟಕ, ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟ, ಕನ್ನಡ ಜಾನಪದ ಪರಿಷತ್ತಿನ ಜಿಲ್ಲಾ ಘಟಕ ಮತ್ತು ಮಹಿಳಾ ಘಟಕ, ಕರ್ನಾಟಕ ಜಾನಪದ ಪರಿಷತ್‌ನ ಜಿಲ್ಲಾ ಘಟಕ ಹಾಗೂ ಎಲ್ಲಾ ಯುವ ಸಂಘ ಸಂಸ್ಥೆಗಳ ಸಂಯುಕ್ತ ಆಶ್ರಯದಲ್ಲಿ ನವೆಂಬರ್ 4 ರಂದು ಸಂಜೆ 5 ಗಂಟೆಗೆ ನಗರದ ಕುವೆಂಪು ಕಲಾಮಂದಿರದಲ್ಲಿ ಜಿಲ್ಲಾ ಯುವಜನೋತ್ಸವ 2025-26ರ ಬಹುಮಾನ ವಿತರಣಾ ಸಮಾರಂಭ ನಡೆಯಲಿದೆ.

ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಅವರು ಕಾರ್ಯಕ್ರಮದಲ್ಲಿ ಸಮಾರೋಪ ನುಡಿಯಾಡಲಿದ್ದು, ಬಹುಮಾನ ವಿತರಣೆ ನೆರವೇರಿಸುವರು. ವಿಧಾನ ಪರಿಷತ್ ಮಾನ್ಯ ಉಪ ಸಭಾಪತಿಗಳಾದ ಶ್ರೀ ಎಂ.ಕೆ.ಪ್ರಾಣೇಶ್, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶೃಂಗೇರಿ ಶಾಸಕರಾದ ಟಿ.ಡಿ.ರಾಜೇಗೌಡ, ವಿಧಾನ ಪರಿಷತ್ ಸದಸ್ಯರು ಹಾಗೂ ಅನಿವಾಸಿ ಭಾರತೀಯ ಕೋಶದ ಉಪಾಧ್ಯಕ್ಷರಾದ ಡಾ.ಆರತಿ ಕೃಷ್ಣ, ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ಶ್ರೀನಿವಾಸ್ ಪಾಲ್ಗೊಳ್ಳುವರು.

ವಿಶೇಷ ಆಹ್ವಾನಿತರಾಗಿ ಕಂದಾಯ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಾಜೇಂದರ್ ಕುಮಾರ್ ಕಠಾರಿಯಾ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಹಮ್ಮದ್ ನಯಾಜ್ ಹಾಗೂ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ ಪಾಲ್ಗೊಳ್ಳುವರು.

# ಕನ್ನಡ ರಾಜೋತ್ಸವ

**ಶಿವಮೊಗ್ಗ:** ಜಿಲ್ಲಾ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ನ.01 ರಂದು ಬೆಳಿಗ್ಗೆ 9 ಗಂಟೆಗೆ ನಗರದ ನೆಹರು ಕ್ರೀಡಾಂಗಣದಲ್ಲಿ ಕನ್ನಡ ರಾಜೋತ್ಸವ ದಿನಾಚರಣೆ–2025 ರ ಕಾರ್ಯಕ್ರಮವನ್ನು ಏರ್ಪಡಿಲಾಗಿದೆ.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಮಧು ಬಂಗಾರಪ್ಪ ಧ್ವಜಾರೋಹಣ ನೆರವೇರಿಸುವರು. ಭದ್ರಾವತಿ ಶಾಸಕರು ಹಾಗೂ ಕರ್ನಾಟಕ ರಾಜ್ಯ ಗ್ರಾಮೀಣ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಿ.ಕೆ.ಸಂಗಮೇಶ್ವರ, ಸಾಗರ ಶಾಸಕರು ಹಾಗೂ ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ನಿಯಮಿತದ ಅಧ್ಯಕ್ಷ ಗೋಪಾಲಕೃಷ್ಣ ಬೇಳೂರು ಗೌರವಾನ್ವಿತ ಉಪಸ್ಥಿತಿ ವಹಿಸಲಿದ್ದು,

ಮುಖ್ಯ ಅತಿಥಿಗಳಾಗಿ ಸಂಸದರು, ವಿಧಾನ ಸಭೆ ಹಾಗೂ ವಿಧಾನ ಪರಿಷತ್ ಶಾಸಕರುಗಳು, ವಿವಿಧ ನಿಗಮ, ಮಂಡಳಿ, ಪ್ರಾಧಿಕಾರಿ ಅಧ್ಯಕ್ಷರುಗಳು, ಜಿಲ್ಲಾಧಿಕಾರಿಗಳು, ಜಿ.ಪಂ ಸಿಇಓ, ಪೊಲೀಸ್ ಅಧೀಕ್ಷಕರು, ಮಹಾನಗರ ಪಾಲಿಕೆಯ ಆಯುಕ್ತರು , ಜಿಲ್ಲೆಯ ಜನಪ್ರತಿನಿಧಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಕನ್ನಡ ಸಂಘಟನೆಗಳು ಪಾಲ್ಗೊಳ್ಳುವರು.

ಬೆಳಿಗ್ಗೆ 8 ಗಂಟೆಗೆ ಸೈನ್ಸ್ ಮೈದಾನದಿಂದ ನೆಹರು ಕ್ರೀಡಾಂಗಣದವರೆಗೆ ಶ್ರೀಭುವನೇಶ್ವರಿ ದೇವಿಯ ಮೆರವಣಿಗೆ ಹೊರಡಲಿದೆ. ಬೆಳಿಗ್ಗೆ 9 ಗಂಟೆಗೆ ನೆಹರು ಕ್ರೀಡಾಂಗಣದಲ್ಲಿ ರಾಷ್ಟ್ರ ಧ್ವಜಾರೋಹಣ, ರಾಷ್ಟ್ರಗೀತೆ, ನಾಡಗೀತೆ, ಕನ್ನಡ ರಾಜ್ಯೋತ್ಸವ ಸಂದೇಶ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಯುವಜನ ಹಾಗೂ ಕ್ರೀಡೆ ಇಲಾಖೆ ವತಿಯಿಂದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಸಂಜೆ 5 ಗಂಟೆಗೆ ನಗರದ ಕುವೆಂಪು ರಂಗಮಂದಿರದಲ್ಲಿ ಪೊಲೀಸ್ ಬ್ಯಾಂಡ್ ಹಾಗೂ ಶಿವಮೊಗ್ಗ ನಗರದ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

# ನ.7 ರಿಂದ 10 ರವೆರೆಗೆ ಕೃಷಿ–ತೋಟಗಾರಿಕೆ ಮೇಳ–2025

**ಶಿವಮೊಗ್ಗ:** ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಕೃಷಿ ಮತ್ತು ಕೃಷಿ ಸಂಬಂಧಿತ ಅಭಿವೃದ್ಧಿ ಇಲಾಖೆಗಳು, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಬಿ.ಸಿ. ಟ್ರಸ್ಟ್ ಇವರ ಸಹಯೋಗದೊಂದಿಗೆ ನ.7 ರಿಂದ 10 ರವರೆಗೆ ಕೃಷಿ ಮಹಾವಿದ್ಯಾಲಯ ನವಲೆ ಆವರಣದಲ್ಲಿ ಕೃಷಿ–ತೋಟಗಾರಿಕೆ ಮೇಳ–2025 ಕಾರ್ಯಕ್ರಮವನ್ನು "ಸಹಕಾರ ಕೃಷಿಯಿಂದ ಸುಸ್ಥಿರ ಕೃಷಿ" ಶೀರ್ಷಿಕೆ ಅಡಿಯಲ್ಲಿ ಆಯೋಜಿಸಲಾಗಿದೆ.

ಈ ಕಾರ್ಯಕ್ರಮದ ಉದ್ಘಾಟನೆಯನ್ನು ನ.8 ಬೆಳಿಗ್ಗೆ 11 ಗಂಟೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೆರವೇರಿಸುವರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಮಧು ಬಂಗಾರಪ್ಪ ಪುಸ್ತಕ/ತಾಂತ್ರಿಕ ಕೈಪಿಡಿಗಳನ್ನು ಬಿಡುಗಡೆ ಮಾಡುವರು. ಕೃಷಿ ಸಚಿವ ಹಾಗೂ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಸಹ ಕುಲಾಧಿಪತಿ ಎನ್.ಚೆಲುವರಾಯಸ್ವಾಮಿ ವಸ್ತು ಪ್ರದರ್ಶನವನ್ನು ಹಾಗೂ ಗಣಿ, ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವ ಎಸ್. ಎಸ್ ಮಲ್ಲಿಕಾರ್ಜುನ ತಂತ್ರಜ್ಞಾನ ಉದ್ಯಾನವನ್ನು ಉದ್ಘಾಟಿಸುವರು.

ಗ್ರಾಮಾಂತರ ಶಾಸಕರಾದ ಶಾರದಾ ಪರ್ಯಾನಾಯ್ಕ ಕಾರ್ಯಕ್ರಮ ಅಧ್ಯಕ್ಷತೆ ವಹಿಸಲಿದ್ದು, ಇಂಧನ ಸಚಿವ ಕೆ.ಜೆ.ಜಾರ್ಜ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್, ಯೋಜನೆ ಮತ್ತು ಸಾಂಖ್ಯಿಕ ಸಚಿವ ಡಿ.ಸುಧಾಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವೆ ಲಕ್ಷ್ಮೀ ಆರ್.ಹೆಬ್ಬಾಳ್ಕರ್, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಬೋಸ್‌ರಾಜು, ಭದ್ರಾವತಿ ಶಾಸಕರು ಹಾಗೂ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಿ.ಕೆ.ಸಂಗಮೇಶ್ವರ, ಸಾಗರದ ಶಾಸಕ ಹಾಗೂ ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ನಿಯಮಿತದ ಅಧ್ಯಕ್ಷ ಗೋಪಾಲಕೃಷ್ಣ ಬೇಳೂರು, ಸಂಸದ ಬಿ.ವೈ.ರಾಘವೇಂದ್ರ ಇವರುಗಳು ಗೌರವಾನ್ವಿತ ಅತಿಥಿಗಳಾಗಿ ಆಗಮಿಸುವರು.ಮುಖ್ಯ ಅತಿಥಿಗಳಾಗಿ ವಿಧಾನಸಭೆ ಮತ್ತು ವಿಧಾನ ಪರಿಷತ್ ಶಾಸಕರುಗಳು, ವಿವಿಧ ನಿಗಮ, ಮಂಡಳಿ, ಪ್ರಾಧಿಕಾರದ ಅಧ್ಯಕ್ಷರುಗಳು, ವಿವಿಧ ಜಿಲ್ಲೆಯ ಕೃಷಿ ವಿಶ್ವವಿದ್ಯಾಲಯಗಳ ಕುಲಪತಿಗಳು, ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ವ್ಯವಸ್ಥಾಪನಾ ಮಂಡಳಿ ಸದಸ್ಯರುಗಳು, ಜಿಲ್ಲಾಧಿಕಾರಿಗಳು, ಜಿ.ಪಂ ಸಿಇಓ, ಪೊಲೀಸ್ ಅಧೀಕ್ಷಕರು, ಮಹಾನಗರ ಪಾಲಿಕೆ ಆಯುಕ್ತರು, ವಿಶ್ವವಿದ್ಯಾಲಯದ ಅಧಿಕಾರಿ ವರ್ಗದವರು, ಬೋಧಕ, ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು ಹಾಗೂ ಕಾರ್ಮಿಕ ವರ್ಗದವರು ಪಾಲ್ಗೊಳ್ಳುವರು

# ಕಾರ್ಮಿಕ ಇಲಾಖೆಯಿಂದ ವಿವಿಧೆಡೆ ದಾಳಿ; ಮೂವರು ಬಾಲಕಾರ್ಮಿಕ ಮಕ್ಕಳ ರಕ್ಷಣೆ

**ಬಳ್ಳಾರಿ:** ಕಾರ್ಮಿಕ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಕಾರದೊಂದಿಗೆ ಬಳ್ಳಾರಿ ನಗರದ ತಾಳೂರು ರಸ್ತೆ, ರೇಣುಕ ನಗರ, ದುರ್ಗಮ್ಮ ಗುಡಿ ಹತ್ತಿರದ ವಿವಿಧ ಗ್ಯಾರೇಜ್, ಮೆಕ್ಯಾನಿಕ್ ಶಾಪ್, ಬೇಕರಿ ಇತ್ಯಾದಿ ಉದ್ದಿಮೆಗಳ ಮೇಲೆ ಟಾಸ್ಕ್ ಫೋರ್ಸ್ ಸಮಿತಿ ಮೂಲಕ ಅನಿರೀಕ್ಷಿತ ದಾಳಿ ನಡೆಸಿ ಕೆಲಸ ನಿರ್ವಹಿಸುತ್ತಿದ್ದ 03 ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಮಕ್ಕಳನ್ನು ರಕ್ಷಿಸಲಾಗಿದೆ.ಜಿಲ್ಲಾಧಿಕಾರಿಯವರ ನಿರ್ದೇಶನದ ಮೇರೆಗೆ ಹಾಗೂ ಪ್ಯಾನ್–ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಅಭಿಯಾನ ಅಂಗವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ ಅವರ ಅಧ್ಯಕ್ಷತೆಯಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಟಾಸ್ಕ್‌ಫೋರ್ಸ್ ಸಮಿತಿ ಸಭೆ ನಡೆಸಿ ಈ ದಾಳಿ ನಡೆಸಲಾಗಿದೆ.ವಶಕ್ಕೆ ಪಡೆದುಕೊಂಡ ಮಕ್ಕಳ ಹೇಳಿಕೆಗಳನ್ನು ಸ್ಥಳದಲ್ಲಿ ಪಡೆದು ನಂತರ ಶಿಕ್ಷಣ ಇಲಾಖೆಗೆ ಒಪ್ಪಿಸಲಾಯಿತು. ಇದೇ ವೇಳೆ ಎಲ್ಲಾ ಉದ್ದಿಮೆಗಳ ಮಾಲೀಕರಿಗೆ ಕರಪತ್ರ ಹಾಗೂ ಪೋಸ್ಟರ್‌ಗಳನ್ನು ನೀಡುವುದರ ಮೂಲಕ ಬಾಲಕಾರ್ಮಿಕ ಪದ್ಧತಿ ಕುರಿತು ಜಾಗೃತಿ ಮೂಡಿಸಲಾಯಿತು ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾಧಿಕಾರಿ ಮೌನೇಶ್ ಅವರು ತಿಳಿಸಿದ್ದಾರೆ.

ಟಾಸ್ಕ್ ಫೋರ್ಸ್ ಸಮಿತಿಯಲ್ಲಿ ಬಳ್ಳಾರಿಯ 1ನೇ ವೃತ್ತದ ಕಾರ್ಮಿಕ ನಿರೀಕ್ಷಕ ರಮೇಶ್, ಶಿಕ್ಷಣ ಇಲಾಖೆಯ ಸಂಪನ್ಮೂಲ ವ್ಯಕ್ತಿ ಸೈಯದ್ ಭಾಷಾ, ಆರೋಗ್ಯ ಇಲಾಖೆಯ ಮುಸ್ತಾಕ್ ಅಹಮದ್, ಮಕ್ಕಳ ಸಹಾಯವಾಣಿ ಸಿಬ್ಬಂದಿಗಳಾದ ಚಂದ್ರಕಲಾ, ಕಿರಣ್ ಕುಮಾರ್, ರೀಚ್ ಸಂಸ್ಥೆಯ ಸಂಯೋಜಿಕಿ ಲಕ್ಷ್ಮಿದೇವಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ಭತ್ತ, ರಾಗಿ, ಕಿರು ಸಿರಿಧಾನ್ಯಗಳಿಗೆ ಕನಿಷ್ಠ ಬೆಂಬಲ ಬೆಲೆ ನಿಗದಿ

## ನ.1 ಹಾಗೂ ಜ.1 ರಿಂದ ಖರೀದಿ ಕೇಂದ್ರಗಳ ಆರಂಭ

**ಚಿಕ್ಕಮಗಳೂರು:** 2025–26ನೇ ಸಾಲಿಗೆ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿಯಲ್ಲಿ ಜಿಲ್ಲೆಯ ರೈತರು ಬೆಳೆದ ಗುಣಮಟ್ಟದ ಭತ್ತ, ರಾಗಿ ಮತ್ತು ಕಿರು ಸಿರಿಧಾನ್ಯಗಳನ್ನು ನೇರವಾಗಿ ಖರೀದಿಸಲು ತಾಲ್ಲೂಕು ಕೇಂದ್ರಗಳ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ(ಎಪಿಎಂಸಿ)ಯಲ್ಲಿ ಕೇಂದ್ರಗಳನ್ನು ತೆರೆಯಲಾಗಿದೆ.

ಕ್ವಿಂಟಾಲ್‌ಗೆ ಭತ್ತ ಸಾಮಾನ್ಯ ರೂ.2,369 ಹಾಗೂ ಗ್ರೇಡ್ ಎ.ಗೆ ರೂ.2,389ರ ದರ ನಿಗದಿಪಡಿಸಲಾಗಿದ್ದರೆ, ರಾಗಿ ರೂ. 4,886 ಹಾಗೂ ಸಾಮೆ ಮತ್ತು ನವಣೆಗೆ ರೂ.4,886ರ ದರ ನಿಗದಿಪಡಿಸಲಾಗಿದೆ. ಸರ್ಕಾರದ ಆದೇಶದಂತೆ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮವನ್ನು ಖರೀದಿ ಏಜೆನ್ಸಿಯನ್ನಾಗಿ ನೇಮಿಸಲಾಗಿದ್ದು, ಖರೀದಿ ಕೇಂದ್ರಗಳ ಆರಂಭದ ಬಗ್ಗೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಇತ್ತೀಚೆಗೆ ನಡೆದ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯಲ್ಲಿ ತೀರ್ಮಾನಿಸಲಾಗಿದೆ.


ಭತ್ತ ಖರೀದಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ರೈತರ ನೋಂದಣಿ ಕಾರ್ಯ ಈಗಾಗಲೇ ಆರಂಭವಾಗಿದ್ದು, ಅಕ್ಟೋಬರ್ 31ರವರೆಗೆ ಅವಕಾಶವಿದೆ. ಖರೀದಿ ಪ್ರಕ್ರಿಯೆಯು ನವೆಂಬರ್ 1 ರಿಂದ 2026ರ ಫೆಬ್ರವರಿ 28ರವರೆಗೆ ಚಾಲ್ತಿಯಲ್ಲಿರುತ್ತದೆ. ಹಾಗೆಯೇ ರಾಗಿ ಮತ್ತು ಕಿರು ಸಿರಿಧಾನ್ಯ ಖರೀದಿಗೆ ಈಗಾಗಲೇ ನೋಂದಣಿ ಆರಂಭವಾಗಿದ್ದು, ಡಿಸೆಂಬರ್ 15ರವರೆಗೆ ಅವಕಾಶವಿದೆ. ಖರೀದಿ ಪ್ರಕ್ರಿಯೆಯು 2026ರ ಜನವರಿ 1 ರಿಂದ ಮಾರ್ಚ್ 31ರವರೆಗೆ ಚಾಲ್ತಿಯಲ್ಲಿರುತ್ತದೆ.

ಭತ್ತಕ್ಕೆ ತರೀಕೆರೆ, ಮೂಡಿಗೆರೆ, ಕೊಪ್ಪ, ಶೃಂಗೇರಿ ಹಾಗೂ ನ.ರಾ.ಪುರ ತಾಲ್ಲೂಕುಗಳ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಪ್ರಾಂಗಣಗಳು, ರಾಗಿ ಮತ್ತು ಕಿರು ಸಿರಿಧಾನ್ಯಗಳಿಗೆ ಚಿಕ್ಕಮಗಳೂರು, ಕಡೂರು, ತರೀಕೆರೆ ಹಾಗೂ ಅಜ್ಜಂಪುರ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಪ್ರಾಂಗಣಗಳಲ್ಲಿ ಖರೀದಿ ಕೇಂದ್ರಗಳು ಕಾರ್ಯ ನಿರ್ವಹಿಸಲಿವೆ.

ಭತ್ತ, ರಾಗಿ ಮತ್ತು ಕಿರು ಸಿರಿಧಾನ್ಯ ಖರೀದಿ ಪ್ರಕ್ರಿಯೆಯನ್ನು ಎನ್‌ಐಸಿ–ಎಫ್‌ಸಿಎಸ್ ತಂತ್ರಾಂಶದ ಮೂಲಕ ನಿರ್ವಹಿಸಲಿದ್ದು,

ಈ ಯೋಜನೆಯಡಿ ಭತ್ತ, ರಾಗಿ ಮತ್ತು ಕಿರು ಸಿರಿಧಾನ್ಯ ಮಾರಾಟ ಮಾಡಲು ಇಚ್ಛಿಸುವ ರೈತರು ತಮ್ಮ ಎಫ್‌ಐಡಿ ಸಂಖ್ಯೆ, ಆಧಾರ್ ಕಾರ್ಡ್, ಬ್ಯಾಂಕ್ ಪಾಸು ಪುಸ್ತಕದೊಂದಿಗೆ ಸಂಬಂಧಿಸಿದ ಖರೀದಿ ಕೇಂದ್ರಕ್ಕೆ ಭೇಟಿ ನೀಡಿ ಹೆಸರು ನೋಂದಾಯಿಸಿಕೊಳ್ಳಬಹುದು. ಹೆಸರು ನೋಂದಾಯಿಸಿದ ರೈತರಿಂದ ಮಾತ್ರ ಗುಣಮಟ್ಟದ ದಾಸ್ತಾನನ್ನು ಖರೀದಿಸಲಾಗುವುದು. ಹೆಚ್ಚಿನ ಮಾಹಿತಿಗೆ ನಗರದ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಜಿಲ್ಲಾ ವ್ಯವಸ್ಥಾಪಕರ(9448496018)ನ್ನು ಸಂಪರ್ಕಿಸಬಹುದು.

# ರಾಜ್ಯ ಮಟ್ಟದ ಜುಡೋ ಸ್ಪರ್ಧೆಗೆ ಕುಮಾರಿ ಭುವನ ಆಯ್ಕೆ.



**ದಾವಣಗೆರೆ:** 2025 – 26ನೇ ಶೈಕ್ಷಣಿಕ ಸಾಲಿನ ಚಿತ್ರದುರ್ಗದಲ್ಲಿ ನಿನ್ನೆ ನಡೆದ ರಾಜ್ಯ ಮಟ್ಟದ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳ ರಾಜ್ಯ ಮಟ್ಟದ ಜುಡೋ ಸ್ಪರ್ಧೆಯಲ್ಲಿ ಸಂತ ಪೌಲರ ಕಾಲೇಜಿನ ದ್ವಿತೀಯ ಪಿಯುಸಿಯ ವಿದ್ಯಾರ್ಥಿನಿಯಾದ ಕುಮಾರಿ. ಭುವನಾ ಆರ್ ಎಲ್. (–36 ಕೆಜಿ) ಪ್ರಥಮ ಸ್ಥಾನ ಪಡೆದು ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ. ಇವರಿಗೆ ಆಡಳಿತ ಮಂಡಳಿಯ ಸದಸ್ಯರು, ಸೇಂಟ್ ಪಾಲ್ಸ್ ಕಾನ್ವೆಂಟ್ ನ ಸ್ಥಳೀಯ ವ್ಯವಸ್ಥಾಪಕರು ಮತ್ತು ಕಾಲೇಜಿನ ಆಡಳಿತಾಧಿಕಾರಿಗಳಾದ ಸಿಸ್ಟರ್ ಸ್ಟೆಲ್ಲಾ ಮಾರೀಸ್,

ಕಾಲೇಜಿನ ಕಾರೆಸ್ಪಾಂಡೆಂಟ್ ರಾದ ಸಿಸ್ಟರ್ ರಶ್ಮಿ, ಪ್ರಾಚಾರ್ಯರಾದ ಮೇಘನಾಥ್ ಕೆ.ಟಿ, ದೈಹಿಕ ಶಿಕ್ಷಕರಾದ ಸಿದ್ದೇಶ್ ಎ.ಬಿ, ಜುಡೋ ತರಬೇತುದಾರರಾದ ರಮೇಶ್ ಮತ್ತು ಮಂಜು ಹಾಗೂ ಕಾಲೇಜಿನ ಬೋಧಕ ಮತ್ತು ಬೋಧಕೇತರ ವರ್ಗದವರಿಂದ ಅಭಿನಂದನೆಗಳನ್ನು ಸಲ್ಲಿಸಲಾಯಿತು.

### ಜನರ ಅಹವಾಲಿಗೆ ಸಚಿವರ ಸ್ಪಂದನ

# ಸಚಿವ ಎಚ್ ಕೆ ಪಾಟೀಲ ಅವರಿಂದ ಸಾರ್ವಜನಿಕರ ಅಹವಾಲು ಸ್ವೀಕಾರ

**ಗದಗ:** ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ಮಂಗಳವಾರದಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್ ಕೆ ಪಾಟೀಲ ಅವರಿಂದ ಸಾರ್ವಜನಿಕ ಅಹವಾಲು ಸ್ವೀಕಾರ ಕಾರ್ಯಕ್ರಮ ಜರುಗಿತು.

ಸಚಿವರಾದ ಎಚ್ ಕೆ ಪಾಟೀಲ ಅವರಿಗೆ ಸಾರ್ವಜನಿಕರು ತಮ್ಮ ವಿವಿಧ ಸಮಸ್ಯೆಗಳ ಪರಿಹಾರಕ್ಕಾಗಿ ಅಹವಾಲು ನೀಡಿದರು. ಅಲ್ಲದೇ ಸಾರ್ವಜನಿಕ ಸಮಸ್ಯೆಗಳ ಕುರಿತು ಹಲವರು ಸಚಿವರ ಗಮನಕ್ಕೆ ತಂದರು.

ಸಾರ್ವಜನಿಕರಿಂದ ಶಾಂತ ಚಿತ್ತದಿಂದಲೇ ಅಹವಾಲುಗಳನ್ನು ಸ್ವೀಕರಿಸಿದ ಸಚಿವರು ಸಂಬಂಧಿಸಿದ ಇಲಾಖಾ ಅಧಿಕಾರಿಗಳಿಗೆ ಕೂಡಲೆ ಸಮಸ್ಯೆ ಪರಿಹಾರಕ್ಕಾಗಿ ಕ್ರಮಕೈಗೊಳ್ಳುವಂತೆ ಸೂಚನೇ ನೀಡಿದರು.

ದೇವಸ್ಥಾನದ ಗೋಪುರ ನಿರ್ಮಾಣಕ್ಕೆ ಅನುದಾನ, ಬಡಾವಣೆಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು ಮನವಿ ಸೇರಿದಂತೆ ಸಾರ್ವಜನಿಕರಿಂದ ಸಾಮೂಹಿಕ ಹಾಗೂ ವಯಕ್ತಿಕ ಅಹವಾಲುಗಳನ್ನು ಸ್ವೀಕರಿಸಿ ಸಂಭಂದಿಸಿದ ಇಲಾಖೆ ಅಧಿಕಾರಿಗಳಿಗೆ ತಕ್ಷಣ ಪರಿಹಾರ ಮಾಡುವಂತೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್. ಕೆ.ಪಾಟೀಲ ಅವರು ಸೂಚಿಸಿದರು.

ಸಾರ್ವಜನಿಕರು ಅನಾರೋಗ್ಯ ಕಾರಣ ಶಸ್ತ್ರಚಿಕಿತ್ಸೆ ಸಹಾಯ ಕೋರಿ ಅಹವಾಲು ತೋಡಿಕೋಂಡರು. ಇದಕ್ಕೆ ಸ್ಪಂದಿಸಿದಂತೆ ಸಚಿವರಾದ ಎಚ್ ಕೆ ಪಾಟೀಲ ಅವರು ಪರಿಹಾರ ನೀಡುವ ಕುರಿತು ಬರವಸೆ ನೀಡಿದರು.



ಸಚಿವ ಎಚ್ ಕೆ ಪಾಟೀಲ ಅವರ ಶಾಂತ, ಸಹಾನುಭೂತಿಪೂರ್ಣ ನಡವಳಿಕೆ ಜನರಲ್ಲಿ ಸಂತೋಷ ಮೂಡಿಸಿ, ಜನನಾಯಕ ಪಾಟೀಲರ ಸ್ಪಂದನಾತ್ಮಕ ಆಡಳಿತ ಎಂದು ನಾಗರಿಕರು ಮೆಚ್ಚುಗೆ ವ್ಯಕ್ತಪಡಿಸಿದರು.

ಸಚಿವರ ಈ ನೇರ ಸಂವಾದಾತ್ಮಕ ಶೈಲಿ ಸಾರ್ವಜನಿಕರಲ್ಲಿ ಸಂತೋಷ ಉಂಟುಮಾಡಿ, "ಜನರ ಅಹವಾಲು ಕೇಳುವ ಜನನಾಯಕನಾದ ಎಚ್.ಕೆ. ಪಾಟೀಲರು ನಿಜವಾದ ಸೇವಾ ಮನೋಭಾವ ಇರುವ ವ್ಯಕ್ತಿ" ಎಂಬ ಪ್ರಶಂಸೆ ಎಲ್ಲೆಡೆ ಕೇಳಿಬಂತು.

ಈ ಸಂದರ್ಬದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ ಬಿ ಅಸೂಟಿ, ತಾಲ್ಲೂಕು ಅಧ್ಯಕ್ಷ ಅಶೋಕ ಮಂದಾಲಿ, ಕೃಷ್ಣಾ ಪರಾಪುರ, ಶಕುಂತಲಾ ಅಕ್ಕಿ, ಎಸ್ ಎನ್ ಬಳ್ಳಾರಿ, ದುರಗಪ್ಪ ವಿಭೂತಿ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ ಆರ್, ಎಸಿ ಗಂಗಪ್ಪ ಎಂ, ಅಧಿಕಾರಿಗಳಾದ ಡಾ. ಎಸ್ ಎಸ್ ನೀಲಗುಂದ, ಬಸನಗೌಡ ಕೊಟೂರ, ರಾಜಾರಾಂ ಪವಾರ,

ರುದ್ರಣ್ಣಗೌಡ ಜಿ ಜೆ, ಪದ್ಮಾವತಿ ಜಿ, ರಫೀಕಾ ಹಳ್ಳೂರ, ತಾರಾಮಣಿ ಆರ್, ಶ್ರೀನಿವಾಸ ಮೂರ್ತಿ ಕುಲಕರ್ಣಿ, ಡಾ ಹುಲಗಣ್ಣವರ, ಬಸವರಾಜ ಬಳ್ಳಾರಿ, ಶರಣು ದೊಡ್ಡೂರ, ಎಂ ಎಂ ತುಂಬರಮಟ್ಟಿ, ಮಹಾಂತೇಶ ಕೆ, ರಮೇಶ್, ಅಮೀತ ಬಿದರಿ, ವಸಂತ ಮಡ್ಲೂರ, ಮಲ್ಲಯ್ಯ ಕೆ, ಶಿವಕುಮಾರ ಕುರಿ, ಆರ್ ಎಸ್ ಬುರಡಿ, ಡಾ. ಬಸವರಾಜ ಬೊಮ್ಮನಹಳ್ಳಿ, ಶ್ರೀಧರ ಚಿನಗುಡಿ, ಶಿದ್ದಲಿಂಗ ಮಸಾನಾಯಕ, ಸೇರಿದಂತೆ ಇತರರು ಇದ್ದರು

# ಕನ್ನಡ ರಾಜ್ಯೋತ್ಸವ 2025

**ಗದಗ:** ಗದಗ ಜಿಲ್ಲಾಡಳಿತದಿಂದ ಕನ್ನಡ ರಾಜ್ಯೋತ್ಸವದ ಪ್ರಯುಕ್ತ ನವೆಂಬರ್ 1 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮವು ಜರುಗಲಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಧ್ವಜಾರೋಹಣ ನೆರವೇರಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಬಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದ ಪಿ.ಸಿ.ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್.ಪಾಟೀಲ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಅವರುಗಳು ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಕರ್ನಾಟಕ ಯೋಜನೆ ಕಾರ್ಯಕ್ರಮ ಸಂಯೋಜನೆ ಮತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಶ್ರೀಮತಿ ಜಾನಕಿ ಎಂ, ಆಗಮಿಸಲಿದ್ದಾರೆ.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ ಜಗದೀಶ ಸರ್ವರಿಗೂ ಸ್ವಾಗತ ಕೋರಿದ್ದಾರೆ.2025 ರ ಕನ್ನಡ ರಾಜ್ಯೋತ್ಸವದ ಕಾರ್ಯಕ್ರಮಗಳು:

ಬೆಳಿಗ್ಗೆ 9 ಗಂಟೆಗೆ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಅವರಿಂದ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ, ರಾಷ್ಟ್ರಗೀತೆ, ನಾಡಗೀತೆ, ಪರೇಡ್ ವೀಕ್ಷಣೆ , ಪಥಸಂಚಲನ ಮತ್ತು ವಂದನೆ ಸ್ವೀಕಾರ, ರಾಜ್ಯೋತ್ಸವದ ಸಂದೇಶ, ಸಾಧಕರಿಗೆ ಸನ್ಮಾನ, ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

# ಬಡ ಮಕ್ಕಳಿಗೂ ಪ್ರತಿಭಾ ಪುರಸ್ಕಾರ ಬೇಕು ಶಾಸಕ ಸ್ವರೂಪ್ ಪ್ರಕಾಶ್

**ಹಾಸನ :** ಶಿಕ್ಷಣ ಕ್ಷೇತ್ರದಲ್ಲಿ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸುವುದರಜೊತೆಗೆ, ಉನ್ನತ ವಿದ್ಯಾಭ್ಯಾಸ ಮಾಡುತ್ತಿರುವಬಡ ಮಕ್ಕಳಿಗೂ ಸಹ ಪ್ರತಿಭಾ ಪುರಸ್ಕಾರವನ್ನು ಮಾಡಬೇಕು ಎಂದು ಶಾಸಕರಾದ ಸ್ವರೂಪ್ ಪ್ರಕಾಶ್ ತಿಳಿಸಿದ್ದಾರೆ.

ಕರ್ನಾಟಕರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘ (ನೋಂ) ಇವರ ವತಿಯಿಂದ ನಗರದಜಿಲ್ಲಾ ನಿವೃತ್ತ ನೌಕರರ ಸಮುದಾಯ ಭವನದಲ್ಲಿಂದುಆಯೋಜಿಸಿದ್ದ ಶಿಕ್ಷಕರ ದಿನಾಚರಣೆ, ಪ್ರತಿಭಾ ಪುರಸ್ಕಾರ ಮತ್ತು ಮಾಜಿ ಶಾಸಕರಾದ ದಿ॥ ಹೆಚ್.ಎಸ್ ಪ್ರಕಾಶ್‌ರವರ ಭಾವ ಚಿತ್ರ ಅನಾವರಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದಅವರುನನ್ನತಂದೆಯ ನೆನೆಸಿಕೊಂಡು ಅವರ ಭಾವಚಿತ್ರವನ್ನು ಅನಾವರಣಗೊಳಿಸಿರುವುದು ಮಗನಾಗಿ ನನಗೆ ಬಹಳ ಸಂತೋಷವಾಗುತ್ತಿದೆಎಂದು ತಿಳಿಸಿದ್ದಾರೆ.ಕಳೆದ ಎರಡು ವರ್ಷಗಳ ಹಿಂದೆ ಶಾಸಕನಾಗಿ ಪ್ರತಿಭಾ ಪುರಸ್ಕಾರಕಾರ್ಯಕ್ರಮಕ್ಕೆ ಬಂದಾಗಕಟ್ಟಡದುಸ್ಥಿತಿಯಲ್ಲಿದೆ ಅದನ್ನು ಸರಿಪಡಿಸಿಕೊಡಬೇಕುಎಂದುಕೆಲವು ಬೇಡಿಕೆಗಳನ್ನು ಇಟ್ಟಿದ್ದರು.

# ಸಾರ್ವಜನಿಕ ಪರಿಸರ ಆಲಿಕೆ ಸಭೆ

**ಬಳ್ಳಾರಿ:** ಸಂಡೂರು ತಾಲ್ಲೂಕಿನ ತಾರಾನಗರ ಗ್ರಾಮದ ಒಟ್ಟು 41.729 ಹೆಕ್ಟೇರ್ ಅರಣ್ಯ ಪ್ರದೇಶದಲ್ಲಿ ವಾರ್ಷಿಕ 25 ಮಿಲಿಯನ್ ಟನ್ ಸಾಮರ್ಥ್ಯದ (ಖನಿಜ ಥ್ರೋಪುಲ್) ಹೈ ಸಿಲಿಸಿಯಸ್ ಕಬ್ಬಿಣದ ಅದಿರು (ಬಿ.ಹೆಚ್.ಕ್ಯೂ) ಅನ್ನು ಸಂಸ್ಕರಿಸುವ ಮೂಲಕ ವಾರ್ಷಿಕ 10 ಮಿಲಿಯನ್ ಟನ್ ಸಂಸ್ಕರಿಸಿದ ಕಬ್ಬಿಣದ ಅದಿರನ್ನು ಉತ್ಪಾದಿಸುವ ಸಾಮರ್ಥ್ಯದೊಂದಿಗೆ ಗ್ರೀನ್–ಫೀಲ್ಡ್ ಹೈ ಸೊಲಿಸಿಯೆಸ್ ಕಬ್ಬಿಣದ ಅದಿರು (ಬಿ.ಹೆಚ್.ಕ್ಯೂ) ಸಂಸ್ಕಾರಣಾ ಘಟಕ ಮತ್ತು ಸಂಬಂಧಿತ ಮೂಲ ಸೌಕರ್ಯವನ್ನು ಸ್ಥಾಪಿಸಲು ಯೋಜನಾ ಪ್ರಸ್ತಾವನೆ ಸಲ್ಲಿಸಿದ್ದು, ಇದರ ಸಂಬಂಧ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರ ಅಧ್ಯಕ್ಷತೆಯಲ್ಲಿ ಡಿ.01 ರಂದು ಬೆಳಿಗ್ಗೆ 11 ಗಂಟೆಗೆ ಸಂಡೂರು ತಾಲ್ಲೂಕಿನ ತಾರಾನಗರ ಗ್ರಾಮದ ಸರ್ವೆ ನಂ 6/4, 46/2, 7/4, 47/ಬಿ, 47/ಸಿ, 47/ಡಿ ಯೋಜನಾ ಪ್ರದೇಶದಲ್ಲಿ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ನಡೆಸಲು ತೀರ್ಮಾನಿಸಲಾಗಿದೆ.

ಗ್ರಾಮಸ್ಥರು, ಸುತ್ತಮುತ್ತಲಿನ ಸಾರ್ವಜನಿಕರು ಸಭೆಯಲ್ಲಿ ಪಾಲ್ಗೊಂಡು ಅಭಿಪ್ರಾಯ, ಅಹವಾಲು ಸಲ್ಲಿಸಬಹುದು ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿ ಸಿದ್ದೇಶ್ವರ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಾವು ಕಚ್ಚಿಸಿಕೊಂಡು ಕಾಲು ಕಳೆದುಕೊಂಡ ರೈತ

**ಚಿತ್ರದುರ್ಗ:** 40 ವರ್ಷಗಳ ಹಿಂದೆ ಹಾವಿನಿಂದ ಕಚ್ಚಿಸಿಕೊಂಡು ಬಲಗಾಲನ್ನು ಕಳೆದುಕೊಂಡ ರೈತ ಯುವಕ ಟಿ.ಜಿ. ಕೃಷ್ಣಪ್ಪ ಇಂದು ವಿಶ್ರಾಂತಿಗಾಗಿ ಸರ್ಕಾರಿ ವಿಜ್ಞಾನ ಕಾಲೇಜಿನ ಆವರಣದಲ್ಲಿರುವ ಅರಳಿಕಟ್ಟೆಯ ಮೇಲೆ ಕುಳಿತು,

ಸ್ವಲ್ಪ ಮಟ್ಟಿಗೆ ವಿದ್ಯಾರ್ಥಿಗಳ ಜೊತೆ ಸ್ನೇಹ ಸಂಪಾದಿಸಿಕೊಂಡು ಹೋಗುವಾಗ, ಕಟ್ಟೆ ಸುತ್ತಮುತ್ತ ಇರುವ ಗಲೀಜನ್ನು, ಕಸವನ್ನು, ಮರದ ಎಲೆಗಳನ್ನು ಕಸಬರಕೆಯಿಂದ ಗುಡಿಸಿ, ಸ್ವಚ್ಛಗೊಳಿಸಿ ಹೋಗುತ್ತಿರುವುದು ಇತರ ವಿದ್ಯಾರ್ಥಿಗಳಿಗೆ ಮಾದರಿಯಾಗಿ ನಿಂತಿದ್ದಾರೆ. ಕಾಲು ಕಳೆದುಕೊಂಡ ನೋವಿನಲ್ಲೂ ಸಹ ಸಾಮಾಜಿಕ ಸೇವೆ ಮಾಡಬೇಕೆಂಬ ಇವರ ಭಾವನೆ ವಿದ್ಯಾರ್ಥಿಗಳಿಗೆ ಮಾದರಿಯಾಗಿದೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರಾದ ಡಾ ಎಚ್ ಕೆ ಎಸ್ ಸ್ವಾಮಿ ಅವರು ಕರೆ ನೀಡಿದರು.

ಅವರು ಚಿತ್ರಕನಗರದ ಕೇಂದ್ರ ಭಾಗದಲ್ಲಿರುವ ಪ್ರತಿಷ್ಠಿತ ಸರ್ಕಾರಿ ವಿಜ್ಞಾನ ಕಾಲೇಜಿನ ಆವರಣದಲ್ಲಿ ಅರಳಿಯಕಟ್ಟೆ ಮೇಲೆ ವಿಶ್ರಾಂತಿಗೆಂದು ಬಂದು ಕುಳಿತ ಹಿರಿಯ ನಾಗರಿಕರಿಗೆ ಮತ್ತು ವಿದ್ಯಾರ್ಥಿಗಳಿಗೆ ಉದ್ದೇಶಿಸಿ ಸಾಮಾಜಿಕ ಸೇವೆ ಮಾಡಲು ಅಂಗವೈಕಲ್ಯಾ ಕಾರಣವಾಗಬಾರದು ಎಂದು ಮಾತನಾಡುತ್ತಿದ್ದರು.

40 ವರ್ಷಗಳ ಹಿಂದೆ ರೈತರಾಗಿ ಹುಲ್ಲಿನ ಬವಣೆಯನ್ನು ಒಟ್ಟುವಾಗ ಬವಣೆಯ ಕೆಳಗಡೆ ಇದ್ದ ಕೊಳಕುಮಂಡಲ ಹಾವನ್ನ ತುಳಿದು, ಅದರಿಂದ ಕಚ್ಚಿಸಿಕೊಂಡು,

ಜ್ಞಾನ ತಪ್ಪಿ ಬಿದ್ದು, ಅವರನ್ನು ಆಸ್ಪತ್ರೆಗೆ ತೆಗೆದುಕೊಂಡು ಹೋಗದೆ, ಯಾವುದೋ ಮಂತ್ರವಾದಿಯ ಬಳಿ ಕರೆದುಕೊಂಡು ಹೋಗಿ,



ವಿಷ ತೆಗೆಯುವ ನೆಪದಲ್ಲಿ ವಿಷ ಜಾಸ್ತಿಯಾಗಿ, ಕಾಲು ಕೊಳೆತು ಕಾಲನ್ನ ಕತ್ತರಿಸಿ, ಕೃತಕ ಕಾಲನ್ನು ಜೋಡಿಸಿರುವ ಕೃಷ್ಣಪ್ಪನವರ ಬದುಕು ಕಷ್ಟಕರವಾಗಿದ್ದು, ಅದನ್ನು ನಿಭಾಯಿಸುವಲ್ಲಿ ಅವರ ಮನಸ್ಸು ದೃಢವಾಗಿತ್ತು ಎಂದರು.

40 ವರ್ಷಗಳಲ್ಲೂ ಸಹ ಕೃತಕ ಕಾಲನ್ನು ಧರಿಸಿ ಕುಂಟೆ ಹೊಡೆಯುವುದು, ನೇಗಿಲು ಹೊಡೆಯುವುದು, ಹೊಲದಲ್ಲಿ ಕೆಲಸ ಮಾಡುವುದು, ಬವಣೆ ಹಾಕುವುದು, ಎತ್ತಿನಗಾಡಿ ಓಡಿಸುವುದು, ಮುಂತಾದ ಕೆಲಸಗಳನ್ನು ಮಾಡಿ, ಮಕ್ಕಳನ್ನು ಸಾಕಿ ವಿದ್ಯಾವಂತರನ್ನಾಗಿ ಮಾಡಿ, ಈಗ ತುರುವುನೂರಿನಿಂದ ಚಿತ್ರದುರ್ಗಕ್ಕೆ ಮಗನ ಮನೆಯಲ್ಲಿ ವಾಸವಾವಿದ್ದಾರೆ.


ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

## ಗ್ರಾಮ ಪಂಚಾಯಿತಿ ಕಾರ್ಯಾಲಯ ತಣಿಗೆರೆ

ಚನ್ನಗಿರಿ (ತಾ), ದಾವಣಗೆರೆ (ಜಿ),

ನ: ಗ್ರಾಪಂ–ತಗೆ/ಟೆಂಡರ್/2025–26/ ದಿನಾಂಕ: 27–10–2025

### ಟೆಂಡರ್ ಪ್ರಕಟಣೆ

**ವಿಷಯ: 2025–26ನೇ ಸಾಲಿನ 15ನೇ ಹಣಕಾಸು ಯೋಜನೆಯಡಿ ತಣಿಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೆ.ಟಿ.ಪಿ.ಪಿ. ನಿಯಮಾನುಸಾರ ಇ–ಪ್ರೊಕ್ಯೂರ್‌ಮೆಂಟ್ ಮೂಲಕ ವಿವಿಧ ಟೆಂಡರ್ ಕರೆದಿರುವ ಬಗ್ಗೆ.**

ಈ ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಟೆಂಡರ್‌ನಲ್ಲಿನ ಷರತ್ತುಗಳ ಪ್ರಕಾರ 2025–26ನೇ ಸಾಲಿನ ಅಡಿಯಲ್ಲಿ ಅನುಮೋದಿತ ಕ್ರಿಯಾ ಯೋಜನೆಯಡಿಯಲ್ಲಿ ತಣಿಗೆರೆ ಗ್ರಾಮ ಪಂಚಾಯಿತಿ ವ್ಯಾತ್ತಿಯಲ್ಲಿ ಈ ಕೆಳಕಂಡ ಟೆಂಡರ್‌ನ್ನು ಕರೆಯಲಾಗಿದೆ.

| ಕ್ರ ಸಂ | ಟೆಂಡರ್ ಸಂಖ್ಯೆ | ಟೆಂಡರ್ ಹೆಸರು | ಟೆಂಡರ್ ವೇಳಾ ಪಟ್ಟಿ |
|---|---|---|---|
| 1 | RDPR/2025-26/IND12083 | ತಣಿಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಿಗೆ ಕುಡಿಯುವ ನೀರಿನ ಸಾಮಾಗ್ರಿಗಳ ಖರೀದಿ ಮತ್ತು ಮೋಟಾರ್ ದುರಸ್ಥಿ ಹಾಗೂ ನಿರ್ವಹಣೆ (ಪ.ಜಾ/ಪ.ಪಂ ಮೀಸಲಿರಿಸಿದ ಅನುದಾನವು ಸೇರಿ) | ರೂ 4,77,424/– |
| 2 | RDPR/2025-26/IND12084 | ತಣಿಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಿಗೆ ಬೀದಿ ದೀಪ ಸಾಮಾಗ್ರಿಗಳ ಖರೀದಿ ಮತ್ತು ಮೋಟಾರ್ ದುರಸ್ಥಿ ಹಾಗೂ ನಿರ್ವಹಣೆ (ಪ.ಜಾ/ಪ.ಪಂ ಮೀಸಲಿರಿಸಿದ ಅನುದಾನವು ಸೇರಿ) | ರೂ 4,58,798/– |

ಈ ಸಂಬಂಧ ಕೆ.ಟಿ.ಪಿ.ಪಿ. ನಿಯಮಾನುಸಾರ ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಇ–ಟೆಂಡರ್‌ಗಾಗಿ ಅರ್ಹ ಟೆಂಡರ್‌ದಾರರು/ಸಂಸ್ಥೆಗಳು ಭರ್ತಿ ಮಾಡಿ ಟೆಂಡರ್‌ಗಳನ್ನು ಕರ್ನಾಟಕ ಸರ್ಕಾರದ WWW e-procurement portal ಪದ್ಧತಿಯಂತೆ ಮಾತ್ರ ಸಲ್ಲಿಸತಕ್ಕದ್ದು ಟೆಂಡರ್ ಭರ್ತಿ ಮಾಡಲು ಕೊನೆಯ ದಿನಾಂಕ: 03.11.2025 ಹಾಗೂ ಹೆಚ್ಚಿನ ಮಾಹಿತಿಗೆ ಅಧಿಕೃತ ಪೋರ್ಟಲ್ http:/kppp.Karnataka gov.in ಪೋರ್ಟಲ್ ಅಥವಾ ಕಛೇರಿ ಸಮಯದಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಣಿಗೆರೆ ಇವರನ್ನು ಸಂಪರ್ಕಿಸುವುದು.

ಸಹಿ/
ಅಧ್ಯಕ್ಷರು
ಗ್ರಾಮ ಪಂಚಾಯಿತಿ, ತಣಿಗೆರೆ

ಸಹಿ/
ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು
ಗ್ರಾಮ ಪಂಚಾಯಿ, ತಣಿಗೆರೆ

# ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗೆ ಪೂರಕವಾಗಿ 200ಹಾಸ್ಟೆಲ್ಗಳ ನಿರ್ಮಾಣಕ್ಕೆ ಸರ್ಕಾರ ಕ್ರಮ

**ಶಿವಮೊಗ್ಗ :** ಸರ್ಕಾರವು ಪ್ರಸಕ್ತ ಸಾಲಿನಲ್ಲಿ ರಾಜ್ಯದಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗೆ ಪೂರಕವಾಗಿ 200 ಹೊಸ ವಿದ್ಯಾರ್ಥಿನಿಲಯಗಳನ್ನು ಆರಂಭಿಸಲು ಉದ್ದೇಶಿಸಿದ್ದು, ಶೀಘ್ರದಲ್ಲಿ ಅಧಿಕೃತ ಆದೇಶ ಹೊರಡಿಸಲಿದೆ ಎಂದು ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ ಅಧ್ಯಕ್ಷ ಕೃಷ್ಣಮೂರ್ತಿ ಅವರು ಹೇಳಿದರು.

ಅವರು ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯಿಂದ ನಗರದ ಅಬ್ದುಲ್ನಜೀರ್ಸಾಬ್ಸಭಾಂಗಣದಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿರುವ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ವಿವಿಧ ಇಲಾಖೆಗಳಲ್ಲಿ ಹಮ್ಮಿಕೊಳ್ಳಲಾಗಿರುವ ಯೋಜನೆ, ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು.

ಜಿಲ್ಲೆಯ ಸಾಗರ ತಾಲೂಕಿನಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗಗಳ ಅನುದಾನದಿಂದ ನಿರ್ಮಿಸಲಾದ ಹಾಸ್ಟೆಲ್ಕಟ್ಟಡಕ್ಕೆ ನಿಗಧಿತ ಸಂಖ್ಯೆಯ ವಿದ್ಯಾರ್ಥಿಗಳ ಕೊರತೆಯ ಹಿನ್ನೆಲೆಯಲ್ಲಿ ಸ್ಥಗಿತಗೊಂಡಿತ್ತು. ಅನೇಕ ವರ್ಷಗಳಿಂದ ಪಾಳುಬಿದ್ದಿದ್ದ ಕಟ್ಟಡವನ್ನು ಇತರೆ ಹಿಂದುಳಿದ ವರ್ಗಗಳ ಇಲಾಖೆಯು ನಿಯಮಾನುಸಾರ ವಶಕ್ಕೆ ಪಡೆದು, ಅಭಿವೃದ್ಧಿಪಡಿಸಿ, ಅದನ್ನು ಸದುಪಯೋಗ ಪಡಿಸಿಕೊಳ್ಳಲಾಗುತ್ತಿದೆ. ಸದರಿ ಕಟ್ಟಡವನ್ನು ಯಾವ ಉದ್ದೇಶಕ್ಕಾಗಿ ನಿರ್ಮಿಸಲಾಗಿದೆಯೋ ಅದೇ ಉದ್ದೇಶಕ್ಕೆ ಬಿಟ್ಟುಕೊಟ್ಟು, ನೂತನ ಕಟ್ಟಡ ನಿರ್ಮಾಣಕ್ಕೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಅವರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರಿಗೆ ಸೂಚಿಸಿದರು.

ವಸತಿ ನಿಲಯ ಕಟ್ಟಡಗಳ ನಿರ್ಮಾಣಕ್ಕೆ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೊಳಪಡುವ ಸಾರ್ವಜನಿಕ ಬಳಕೆಯ ನಿವೇಶನಗಳು ನಗರದ ಹೊರವಲಯದಲ್ಲಿದ್ದು, ಹಾಸ್ಟೆಲ್ನಿರ್ಮಾಣಕ್ಕಾಗಿ ಗುರುತಿಸಿದ್ದಲ್ಲಿ ಅಂತಹ ಸ್ಥಳದಲ್ಲಿ ಹಾಸ್ಟೆಲ್ನಿರ್ಮಾಣದ ನಂತರ ಅಲ್ಲಿಂದ ವಿದ್ಯಾರ್ಥಿಗಳು ನಗರ ಪ್ರದೇಶಕ್ಕೆ ಒಡಾಡಲು ಅನುಕೂಲವಾಗುವಂತೆ ಬಸ್ಸಂಪರ್ಕ ವ್ಯವಸ್ಥೆ ಕಲ್ಪಿಸುವಂತೆ ಅವರು ಸೂಚಿಸಿದರು.

ಹಾಸ್ಟೆಲ್ಪ್ರವೇಶಕ್ಕೆ ದಿನೇದಿನೇ ಬೇಡಿಕೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಸಲಾಗುತ್ತಿರುವ ಹಾಸ್ಟೆಲ್ನಲ್ಲಿ ಪರಿಶಿಷ್ಟ ವಿದ್ಯಾರ್ಥಿಗಳಿಗೆ ಹಾಸ್ಟೆಲ್ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗಿರುವಂತೆ ಇತರೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ನಡೆಸಲಾಗುತ್ತಿರುವ ವಸತಿ ನಿಲಯಗಳಲ್ಲಿ ಇತರೆ ವಿದ್ಯಾರ್ಥಿಗಳ ಪ್ರವೇಶಕ್ಕೂ ಅವಕಾಶ ಒದಗಿಸಬೇಕು. ಸಂಬಂಧಿಸಿದ ಇಲಾಖಾಧಿಕಾರಿಗಳು ಈ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕು. ಎಸ್.ಎನ್.ಚನ್ನಬಸಪ್ಪ, ಶಾಸಕರು, ಶಿವಮೊಗ್ಗ ನಗರ ವಿಧಾನಸಭಾ ಕ್ಷೇತ್ರ.

ಸರ್ಕಾರದ ಜನಪರ ಯೋಜನೆಗಳನ್ನು ಜನಸಾಮಾನ್ಯರಿಗೆ ತಲುಪಿಸುವಲ್ಲಿ ಇಲಾಖೆ ಅಧಿಕಾರಿಗಳ ನಡುವೆ ಸಮನ್ವಯತೆ ಅಗತ್ಯ. ಅಧಿಕಾರಿಗಳೂ ಸಹ ಮಾನವೀಯ ನೆಲೆಯಲ್ಲಿ ಕಾರ್ಯನಿರ್ವಹಿಸಬೇಕು ಎಂದ ಅವರು, ಶಾಲಾ-ಕಾಲೇಜುಗಳಲ್ಲಿ ಅಹಿತಕರ ಘಟನೆಗಳು ನಡೆಯದಂತೆ ಕಾಲಕಾಲಕ್ಕೆ ವಿದ್ಯಾರ್ಥಿಗಳಿಗೆ ಸಮಾಲೋಚನೆ ನಡೆಸಬೇಕು. ಗಾಂಜಾ, ಅಫೀಮು ಬಲೆಗೆ ಬೀಳದಂತೆ ಅವರ ಭವಿಷ್ಯದ ಜೀವನ ಹಾಳಾಗದಂತೆ ಪೊಲೀಸ್ ಲಾಖೆಯು ವಿಶೇಷ ಗಮನಹರಿಸಬೇಕು. ದುಷ್ಟ ವಿದ್ಯಾರ್ಥಿಗಳ ರಕ್ಷಣೆಯಲ್ಲಿ ಜನಪ್ರತಿನಿಧಿಗಳ ಮಧ್ಯಪ್ರವೇಶ ಇರಬಾರದು ಎಂದರು.ಸಭೆಯಲ್ಲಿ ಶಾಸಕರಾದ ಬೇಳೂರು ಗೋಪಾಲಕೃಷ್ಣ, ಎಸ್.ಎನ್.ಚನ್ನಬಸಪ್ಪ, ಶ್ರೀಮತಿ ಬಲ್ಕೀಸ್ಬಾನು, ಡಾ॥ ಧನಂಜಯ ಸರ್ಜಿ, ಗುರುರಾಜ ಗಂಟಿಹೊಳಿ, ಅಬ್ದುಲ್ಜಬ್ಬಾರ್, ಎಸ್.ಕೆ.ಜಕ್ಕಪ್ಪನವರ್, ಶ್ರೀನಿವಾಸ್, ಜಿಲ್ಲಾಧಿಕಾರಿ ಗುರುದತ್ತಹೆಗಡೆ, ಸಿಇಒ ಎನ್.ಹೇಮಂತ್, ಪೊಲೀಸ್ ಧೀಕ್ಷಕ ಜಿ.ಕೆ.ಮಿಥುನ್ಕುಮಾರ್ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ರಾಜ್ಯಮಟ್ಟದ ನೃತ್ಯ ಪ್ರದರ್ಶನ




**ದಾವಣಗೆರೆ:** ದಾವಣಗೆರೆ ನಗರದ ಎಮ್. ಸಿ.ಸಿ. ಎ. ಬ್ಲಾಕ್ ನಲ್ಲಿರುವ ನಾಗಮ್ಮ ಕೇಶವಮೂರ್ತಿ ಸಭಾಂಗಣದಲ್ಲಿ ಇತ್ತಿಚಿಗೆ ನಡೆದ ವಿಶ್ವರೂಪಂ ಸ್ಟುಡಿಯೋ ಹಾಗೂ ವಿವಿಧ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ರಾಜ್ಯಮಟ್ಟದ ನೃತ್ಯ ಪ್ರದರ್ಶನವನ್ನು ಆಯೋಜಿಸಲಾಗಿತ್ತು. ಈ ಸ್ಪರ್ಧೆಗಳಲ್ಲಿ ರಾಜ್ಯದ ಅನೇಕ ಜಿಲ್ಲೆಗಳಿಂದ ವಿವಿಧ ನೃತ್ಯ ಸ್ಪರ್ಧಾಳುಗಳು ಭಾಗವಹಿಸಿದ್ದರು. ಈ ಕಾರ್ಯಕ್ರಮವನ್ನು ದಾವಣಗೆರೆ ಜಿಲ್ಲಾ ಕನ್ನಡ ಚಳುವಳಿ ನೂತನ ಜಿಲ್ಲಾ ಅಧ್ಯಕ್ಷರಾದ ಶಿವರತನ್ ಜ್ಯೋತಿ ಬೆಳಗಿಸುವುದರ ಮೂಲಕ ಉದ್ಘಾಟಿಸಿ

ಎಲ್ಲಾ ನೃತ್ಯಪಟುಗಳು ತಮ್ಮ ಪ್ರತಿಭೆ ತೋರಿಸಲಿಕ್ಕೆ ಇದು ಒಂದು ಉತ್ತಮ ವೇದಿಕೆಯಾಗಿದೆ ಸ್ಪರ್ಧೆ ಅಂದಮೇಲೆ ಸೋಲು ಗೆಲುವು ಸಾಮಾನ್ಯ ಹಾಗೂ ಈ ಸ್ಪರ್ಧೆಗೆ ಉತ್ತಮವಾದಂತ ತೀರ್ಪುಗಾರರು ಇರುವುದರಿಂದ ಕಾರ್ಯಕ್ರಮವು ಉತ್ತಮವಾಗಿ ಯಶಸ್ವಿಯಾಗುತ್ತದೆ ಯಾರಿಗೂ ಸಂದೇಹ ಬೇಡ ನಿಮ್ಮೆಲ್ಲರ ಬಹುಷ್ಯ ಉತ್ತಮವಾಗಲಿ ಒಳ್ಳೆಯ ಪ್ರದರ್ಶನ ನೀಡಿ ಈ ಕಾರ್ಯಕ್ರಮ ಯಶಸ್ವಿಯಾಗಲಿ ಎಂದು ಶುಭ ಹಾರೈಸಿದರು,

ಇವರೊಂದಿಗೆ ವಾರ್ತಾ ಇಲಾಖೆ ನಿವೃತ್ತ ನೌಕರ ಸರ್ವೋತ್ತಮ ಸೇವ ಪ್ರಶಸ್ತಿ ಪುರಸ್ಕೃತರಾದ. ಬಿ. ಎಸ್. ಬಸವರಾಜ್. ದಾ.ಹ. ಶಿವಕುಮಾರ್. ನೃತ್ಯ ಶಿಕ್ಷಕರು. ಹಾಗೂ ನೃತ್ಯ ಕ್ರೀಡಾಪಟುಗಳು ಆಯೋಜಕರು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಕಳೆದ ಮಾರ್ಚ್ ಏಪ್ರಿಲ್‌ನಲ್ಲಿ ನಡೆದ ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಯಲ್ಲಿ ಶೇ.90 ಕ್ಕಿಂತ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮತ್ತು ವಿದ್ಯಾರ್ಥಿ ವೇತನ ನೀಡಲು ನ.15 ರೊಳಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಕುರುಹಿನ ಶೆಟ್ಟಿ ಮಹಿಳಾ ಸಂಘದ ಅಧ್ಯಕ್ಷೆ ಸಿ.ಎಸ್ ಪುಷ್ಪರಾಜೇಂದ್ರ ತಿಳಿಸಿದ್ದಾರೆ.

ಪತ್ರಿಕಾ ಹೇಳಿಕೆಯಲ್ಲಿ ಈ ವಿಷಯ ತಿಳಿಸಿರುವ ಅವರು, ಪ್ರೋತ್ಸಾಹಧನ ಮತ್ತು ವಿದ್ಯಾರ್ಥಿವೇತನ ನೀಡಲು ಕುರುಹಿನ ಶೆಟ್ಟಿ ಮಹಿಳಾ ಸಂಘದ ಜೊತೆಗೆ ಶ್ರೀ ನೀಲಕಂಠೇಶ್ವರ ಮಹಿಳಾ ಸಂಘ ಸಹಯೋಗದಲ್ಲಿ ನಿರ್ಧರಿಸಲಾಗಿದ್ದು, ನವೆಂಬರ್ ತಿಂಗಳಲ್ಲಿ ನೀಡುವ ವಿದ್ಯಾರ್ಥಿವೇತನ ವಿತರಣೆಗೆ ಅರ್ಹ ವಿದ್ಯಾರ್ಥಿಗಳಿಂದ ಭರ್ತಿಮಾಡಿದ ಅರ್ಜಿಗಳನ್ನು ಸಂಘದ ಕಚೇರಿಗೆ ನವೆಂಬರ್ 15 ರೊಳಗೆ ಸಲ್ಲಿಸುವಂತೆ ಮನವಿ ಮಾಡಿದ್ದಾರೆ.

ಅರ್ಜಿ ಫಾರಂಗಳು ಸಂಘದ ಕಚೇರಿಗಳಲ್ಲಿ ಕಚೇರಿ ವೇಳೆಯಲ್ಲಿ ಪಡೆಯಬಹುದಾಗಿದ್ದು, ಜಿಲ್ಲಾ ಕುರುಹಿನ ಬಳಗ ಅಥವಾ ಕುರುಹಿನ ಶೆಟ್ಟಿ ಬ್ರಿಗೇಡ್ ವಾಟ್ಸಾಪ್ ಗ್ರೂಪ್‌ನಿಂದ ಅರ್ಜಿ ಫಾರಂನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದ್ದು, ಹೆಚ್ಚಿನ ವಿವರಗಳಿಗೆ 8760501774, 9482562089, 9448703156, 8618951862 ಈ ಮೊಬೈಲ್ ಸಂಖ್ಯೆಗಳನ್ನು ಸಂಪರ್ಕಿಸಬೇಕೆಂದು ವಿನಂತಿಸಿದ್ದಾರೆ.

## ಕರ್ನಾಟಕ ಮಾಧ್ಯಮ ಅಕಾಡೆಮಿ: ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಇಂಟರ್ನ್ಶಿಪ್ ಗೆ ಅವಕಾಶ

**ಬಳ್ಳಾರಿ;** ಕರ್ನಾಟಕ ಮಾಧ್ಯಮ ಅಕಾಡೆಮಿಯು ಮಹಿಳಾ ಆಯವ್ಯಯ ಹಾಗೂ ಪರಿಶಿಷ್ಟ ಜಾತಿ ಉಪ ಯೋಜನೆ ಮತ್ತು ಪರಿಶಿಷ್ಟ ಪಂಗಡ ಉಪ ಯೋಜನೆಗಳಡಿ ಪತ್ರಿಕೋದ್ಯಮದಲ್ಲಿ ಆಸಕ್ತಿ ಇರುವ ಸ್ನಾತಕೋತ್ತರ ಪದವೀಧರರಿಗೆ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಇಂಟರ್ನ್ಶಿಪ್ ಅವಕಾಶ ಕಲ್ಪಿಸಿದೆ.

ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದವರಿಗೆ ಆದ್ಯತೆ ನೀಡಲಾಗುವುದು. ಬರವಣಿಗೆಯಲ್ಲಿ ಪರಿಣತಿ ಹೊಂದಿರುವ, ಪತ್ರಿಕೋದ್ಯಮದಲ್ಲಿ ಆಸಕ್ತಿ ಇರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

2021-2022, 2022-23, 2023-24 ಹಾಗೂ 2024-2025ನೇ ಶೈಕ್ಷಣಿಕ ವರ್ಷದಲ್ಲಿ ಯಾವುದೇ ವಿಷಯದಲ್ಲಿ ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಸ್ನಾತಕೋತ್ತರ ಪದವಿ ಪಡೆದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಪ್ರವೇಶ ಪರೀಕ್ಷೆಯ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಒಟ್ಟು 21 ಅಭ್ಯರ್ಥಿಗಳಿಗೆ ಇಂಟರ್ನ್ಶಿಪ್ ಅವಕಾಶ ಒದಗಿಸಲಾಗುವುದು.

ವಿವರ: ಮಹಿಳಾ ಆಯವ್ಯಯದಡಿ 08 ಮಹಿಳೆಯರು, ಪರಿಶಿಷ್ಟ ಜಾತಿ ಉಪಯೋಜನೆಯಡಿ 09 ಪರಿಶಿಷ್ಟ ಜಾತಿಯ ಅಭ್ಯರ್ಥಿಗಳು ಹಾಗೂ ಪರಿಶಿಷ್ಟ ಪಂಗಡ ಉಪ ಯೋಜನೆಯಡಿ 4 ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಇಂಟರ್ನ್ಶಿಪ್ ಅವಕಾಶ ಕಲ್ಪಿಸಲಾಗುವುದು.

ಆಯ್ಕೆಯಾದ ಅಭ್ಯರ್ಥಿಗಳಿಗೆ ವಿವಿಧ ಮಾಧ್ಯಮ ಸಂಸ್ಥೆಗಳಲ್ಲಿ ಎರಡು ತಂಡಗಳಲ್ಲಿ ಎರಡು ತಿಂಗಳ ಇಂಟರ್ನ್ಶಿಪ್ ಗೆ ಅವಕಾಶ ಕಲ್ಪಿಸಲಾಗುವುದು. ಇಂಟರ್ನ್ಶಿಪ್ ಗೆ ಸಂಸ್ಥೆ ಹಾಗೂ ಸ್ಥಳವನ್ನು ಅಕಾಡೆಮಿಯೇ ನಿಗದಿ ಪಡಿಸುತ್ತದೆ.

ಆಯ್ಕೆಯಾದ ಅಭ್ಯರ್ಥಿಗಳಿಗೆ ಅಕಾಡೆಮಿ ವತಿಯಿಂದ ಮಾಸಿಕ 20,000/- ರೂ. ಸ್ಟೈಪೆಂಡ್ ನೀಡಲಾಗುವುದು. ಅಭ್ಯರ್ಥಿಗಳು ತಮ್ಮ ಸ್ವವಿವರದೊಂದಿಗೆ ನಿಗದಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಪೂರಕ ದಾಖಲೆಗಳೊಂದಿಗೆ ಗೂಗಲ್ ಫಾರ್ಮ್ https://forms.gle/Qth3f5FjMHXSxTB68 ರಲ್ಲಿ ಅರ್ಜಿ ಸಲ್ಲಿಸುವುದು. ಅಭ್ಯರ್ಥಿಗಳ ಆಯ್ಕೆಯ ಅಂತಿಮ ತೀರ್ಮಾನ ಅಕಾಡೆಮಿಯ ಸಮಿತಿಯದ್ದೇ ಅಗಿರುತ್ತದೆ.

ಅರ್ಜಿ ಸಲ್ಲಿಸಲು ನವೆಂಬರ್ 15 ಕೊನೆಯ ದಿನವಾಗಿದೆ ಎಂದು ಅಕಾಡೆಮಿ ಅಧ್ಯಕ್ಷೆ ಆಯೇಶಾ ಖಾನಂ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆ

**ಚಿಕ್ಕಮಗಳೂರು:** ಜಿಲ್ಲೆಯ ಚಿಕ್ಕಮಗಳೂರು ತರೀಕೆರೆ ಮತ್ತು ನ.ರಾ.ಪುರ ತಾಲ್ಲೂಕುಗಳಲ್ಲಿರುವ ಗ್ರಾಮ ಪಂಚಾಯಿತಿಗಳಲ್ಲಿ ಗೌರವಧನದ ಆಧಾರದ ಮೇಲೆ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಹುದ್ದೆಗೆ ವಿಕಲಚೇತನರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿಯನ್ನು ಸಲ್ಲಿಸಬಯಸುವವರು ಆಯಾ ತಾಲ್ಲೂಕಿನ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಿಂದ ಪಡೆದ ಅರ್ಜಿಯನ್ನು ಭರ್ತಿ ಮಾಡಿ ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಪ್ರತಿ, ವಾಸಸ್ಥಳ ದೃಢೀಕರಣ ಪತ್ರ, ವಿಶಿಷ್ಟ ಗುರುತಿನ ಚೀಟಿ (ಯು.ಡಿ.ಐ.ಡಿ ಕಾರ್ಡ್), ಆಧಾರ್ ಕಾರ್ಡ್ ಪ್ರತಿ, ಜಾತಿ ಮತ್ತು ಆದಾಯ ದೃಢೀಕರಣ ಪತ್ರ, ಪಡಿತರ ಚೀಟಿಗಳ ಜೆರಾಕ್ಸ್ ಪ್ರತಿ ಮತ್ತು ಪಾಸ್ ಪೋರ್ಟ್ ಅಳತೆಯ ಎರಡು ಭಾವಚಿತ್ರಗಳನ್ನು ಲಗತ್ತಿಸಿ ನವೆಂಬರ್ 27 ರೊಳಗೆ ಸಲ್ಲಿಸುವಂತೆ ಕೋರಲಾಗಿದೆ.

ಚಿಕ್ಕಮಗಳೂರು ತಾಲ್ಲೂಕಿನಲ್ಲಿ ಮುಗುಳವಳ್ಳಿ, ಹಿರೇಕೊಳಲೆ ಹಾಗೂ ದಾಸರಹಳ್ಳಿ ಗ್ರಾಮ ಪಂಚಾಯಿತಿಗಳಿಗೆ ಮೂರು, ತರೀಕೆರೆ ತಾಲ್ಲೂಕಿನ ಧೋರನಾಳು ಗ್ರಾಮ ಪಂಚಾಯಿತಿಯಲ್ಲಿ ಎರಡು ಹಾಗೂ ನ.ರಾ.ಪುರ ತಾಲ್ಲೂಕಿನ ಕಾನೂರು ಗ್ರಾಮ ಪಂಚಾಯಿತಿಯಲ್ಲಿ ಒಂದು ಹುದ್ದೆ ಖಾಲಿ ಇದೆ.

# ಇಂಗ್ಲೀಷ್ ಭಾಷಾ ಪ್ರೌಢಿಮೆ ಹೊಂದಿದ್ದರೆ ಐಎಎಸ್, ಐಪಿಎಸ್ ಕಷ್ಟವಾಗದು

**ದಾವಣಗೆರೆ:** ಇಂಗ್ಲೀಷ್ ಭಾಷೆ ಬರುವುದಿಲ್ಲ ಎಂಬ ಕಾರಣಕ್ಕೆ ಎಷ್ಟೋ ವಿದ್ಯಾರ್ಥಿಗಳು ಐಎಎಸ್, ಐಪಿಎಸ್ ನಂಥ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಗಳಿಸಲು ಸಾಧ್ಯವಾಗುತ್ತಿಲ್ಲ. ಇಂಗ್ಲೀಷ್ ಭಾಷಾ ಪ್ರೌಢಿಮೆ ಹೊಂದಿದರೆ ಉನ್ನತ ಹುದ್ದೆ ಅಲಂಕರಿಸಲು ಕಷ್ಟವಾಗದು. ಹಾಗಾಗಿ, ಇಂಗ್ಲೀಷ್ ಕಬ್ಬಿಣದ ಕಡಲೆ ಅಲ್ಲ. ಕಲಿಯಲು ಆಸಕ್ತಿ ಬೇಕು ಅಷ್ಟೇ ಎಂದು ಇನ್ ಸೈಟ್ಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕ ಜಿ. ಬಿ. ವಿನಯ್ ಕುಮಾರ್ ಅಭಿಪ್ರಾಯಪಟ್ಟರು.

ಜಿಲ್ಲೆಯ ಹರಿಹರ ತಾಲೂಕಿನ ಶ್ರೀಮತಿ ಗಿರಿಯಮ್ಮ ಆರ್. ಕಾಂತಪ್ಪ ಶ್ರೇಷ್ಠಿ ಮಹಿಳಾ ಪ್ರಥಮ ಮತ್ತು ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿ ಹಾಗೂ ಇನ್ ಸೈಟ್ಸ್ ಐಎಎಸ್ ಸಂಸ್ಥೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಐಎಎಸ್, ಕೆಎಎಸ್ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿ ಕುರಿತು ಮಾರ್ಗದರ್ಶನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ ಹಾಗೂ ಮಾರ್ಗದರ್ಶಕರಾಗಿ ಪಾಲ್ಗೊಂಡು ಅವರು ಮಾತನಾಡಿದರು.



ಯಾರೂ ಸಂಪನ್ಮೂಲ ಬಳಸಿಕೊಳ್ಳುತ್ತಾರೋ ಅವರಿಗೆ ಯಶಸ್ಸು ಬೇಗ ಸಿಗುತ್ತದೆ. ನಮ್ಮ ಕಣ್ಣುಂದೆ ಇರುವ ಅವಕಾಶಗಳನ್ನು ಯಾವುದೇ ಕಾರಣಕ್ಕೂ ಬಿಡಬಾರದು. ಇಂಗ್ಲೀಷ್ ಬರಲ್ಲ ಎಂಬ ಕೀಳರಿಮೆಯಿಂದ ಹೊರ ಬನ್ನಿ. ತುಂಬಾ ವಿದ್ಯಾರ್ಥಿಗಳು ಇಂಗ್ಲೀಷ್ ಭಾಷೆ ಕಲಿಯಲ್ಲ, ನಾನು ಇದರಲ್ಲಿ ದುರ್ಬಲವಾಗಿದ್ದೇನೆಂದುಕೊಂಡು ಸುಮ್ಮನಾಗಿಬಿಡುತ್ತಾರೆ. ಸ್ಪರ್ಧಾತ್ಮಕ ಪರೀಕ್ಷೆ ತೆಗೆದುಕೊಂಡರೂ ಯಶ ಸಾಧಿಸಲು ಆಗದು ಎಂದು ತಿಳಿಸಿದರು.

ಇಂದಿನ ದಿನಗಳಲ್ಲಿ ಒಂದೂ ದಿನ ಹಳ್ಳಿ ನೋಡದವರು, ಜೀವನ ಸಾಗಿಸದೇ ಇರುವವರು, ಹಸಿವು, ಅವಮಾನ ಅನುಭವಿಸದೇ ಇರುವವರು ಅಧಿಕಾರಕ್ಕೆ ಬರುತ್ತಾರೆ. ಅಧಿಕಾರ ಸಿಕ್ಕಾಗ ನಿಮ್ಮ ಕೈಗೆ ಸಿಗಲ್ಲ. ಇಂಥ ಪರಿಸ್ಥಿತಿಯಲ್ಲಿ ನಾವಿದ್ದೇವೆ. ಸರ್ಕಾರದ ಅನುಕೂಲ ಸೌಲಭ್ಯ ಮತ್ತು ಹಕ್ಕು ಪಡೆಯಲು ನಿಮ್ಮನ್ನು ಕಾಡಿಸುತ್ತಾರೆ. ನೀವು ಉನ್ನತ ಸ್ಥಾನಕ್ಕೆ ಬಂದರೆ ಇನ್ನೊಬ್ಬರ ಮುಂದೆ ಅಪಮಾನ ಎದುರಿಸುವ, ಗುಲಾಮಗಿರಿಯಂತೆ ಬದುಕುವ ಪ್ರಮೇಯವೇ ಎದುರಾಗದು ಎಂದು ತಿಳಿಸಿದರು.ಎಸ್ಸಿ, ಎಸ್ಟಿ, ಒಬಿಸಿ, ಅಲ್ಪಸಂಖ್ಯಾತರಿಗೆ ಐಎಎಸ್ ಓದಲು ಸರ್ಕಾರವೇ ನೆರವು ನೀಡುತ್ತದೆ. ಪ್ರತಿತಿಂಗಳೂ ಹಣ ನಿಗದಿಪಡಿಸಿ ಕೊಡುತ್ತದೆ. ಹಾಗಾಗಿ, ಇದರ ಸೌಲಭ್ಯ ಪಡೆದುಕೊಳ್ಳಿ. ನಮ್ಮ ಸಂಸ್ಥೆಗೆ ಬಂದರೆ ಎಸ್ಸಿ, ಎಸ್ಟಿ, ಬಡವರು, ಆರ್ಥಿಕವಾಗಿ ದುರ್ಬಲವಾಗಿರುವವರಿಗೆ ಉಚಿತವಾಗಿ ಕೋಚಿಂಗ್ ನೀಡುತ್ತೇವೆ. ಇದಕ್ಕೆ ಸುಮಾರು ಒಂದೂವರೆ ಲಕ್ಷ ರೂಪಾಯಿ ವೆಚ್ಚ ತಗುಲುತ್ತದೆ. ಇದುವರೆಗೆ ನೂರಾರು ಬಡ ವಿದ್ಯಾರ್ಥಿಗಳಿಗೆ ಫ್ರೀಯಾಗಿ ಕೋಚಿಂಗ್ ನೀಡುತ್ತಿದ್ದೇವೆ. ನಿಮ್ಮ ಕೈಯಲ್ಲಾದಷ್ಟು ಶುಲ್ಕ ಪಾವತಿಸಿ. ಅತಿ ಕಡಿಮೆ ವೆಚ್ಚದಲ್ಲಿ ಕೋಚಿಂಗ್ ನೀಡುತ್ತೇವೆ ಎಂದು ವಿನಯ್ ಕುಮಾರ್ ಅವರು ಭರವಸೆ ನೀಡಿದರು.ರೀಲ್ಸ್ ನೋಡುವುದು, ಬಿಗ್ ಬಾಸ್ ಸೇರಿದಂತೆ ಹೆಚ್ಚಿನ ಮನರಂಜನೆಗೆ ಆದ್ಯತೆ ನೀಡುತ್ತಾರೆ. ಇಷ್ಟೇ ಸಮಯವನ್ನು ಓದಿನತ್ತ, ಪುಸ್ತಕಗಳ ಅಧ್ಯಯನ ಬಗ್ಗೆ ಸಮಯ ನೀಡಿ. ಮನರಂಜನೆಗೆ ಕಡಿಮೆ ಅವಧಿ ಕೊಟ್ಟು ಓದಿನತ್ತ ಹೆಚ್ಚಿನ ಗಮನ ಕೊಡಿ ಎಂದು ಅವರು ಸಲಹೆ ನೀಡಿದರು.

ಕಾಲೇಜಿನ ಪ್ರಾಂಶುಪಾಲ ಡಾ. ಶ್ರೀನಿವಾಸ್ ಅಜ್ಜೂರು ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಡಿಎಸ್ ಸಂಚಾಲಕ ಪಿ. ಜೆ. ಮಹಾಂತೇಶ್, ಸಮಾಜ ಸೇವಕ ಬಿ. ಮಗ್ದುಮ್, ಬಟ್ಟಲಕಟ್ಟೆಯ ಪರಶುರಾಮ್, ಬೋಧಕ ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಹಾಜರಿದ್ದರು. ಇದೇ ವೇಳೆ ಜಿ. ಬಿ. ವಿನಯ್ ಕುಮಾರ್ ಅವರನ್ನು ಸನ್ಮಾನಿಸಲಾಯಿತು.

# ಶ್ರೀ ಚನ್ನಬಸವೇಶ್ವರ ಜಯಂತಿ ಆಚರಣೆ



**ಹಾವೇರಿ :** ನಗರದ ಕಾಗಿನೆಲೆ ರಸ್ತೆಯ ಶ್ರೀ ಮುರುಗಿಸ್ವಾಮಿಮಠದಲ್ಲಿ ಶ್ರೀ ಚನ್ನಬಸವೇಶ್ವರ ಜಯಂತಿಯನ್ನು ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಆಚರಣೆ ಮಾಡಲಾಯಿತು.

ಕಿರಿಯ ವಯಸ್ಸಿನಲ್ಲೇ ಅದ್ಭುತ ಸಂದೇಶ ನೀಡಿದ ಹಿರಿಮೆ ಅವಿರಳ ಜ್ಞಾನಿ ಚೆನ್ನಬಸವಣ್ಣನವರು. 12 ಶತಮಾನದ ಅನುಭವ ಮಂಟಪದ ಸಂಪೂರ್ಣ ಹೊಣೆಗಾರಿಕೆಯನ್ನು ನಿಭಾಯಿಸಿದ ಹೆಗ್ಗಳಿಕೆ ಚನ್ನಬಸವಣ್ಣನವರಿಗೆ ಸಲ್ಲುತ್ತದೆ ಹೊಸಮಠ ಶಾಂತಲಿಂಗ ಸ್ವಾಮೀಜಿ ಹೇಳಿದರು.

ಶ್ರೀ ಚನ್ನಬಸವಣ್ಣನವರ ವಚನಗಳಲ್ಲಿ ಭಕ್ತ, ಮಹೇಶ.ಪ್ರಸಾದಿ.ಪ್ರಾಣಲಿಂಗಿ. ಶರಣ ಮತ್ತು ಐಕ್ಯ ಸ್ಥಿತಿಗಳನ್ನು ವಿವರವಾಗಿ ಪ್ರತಿಪಾದಿಸಿದರು. ಭಕ್ತನು ಲೌಕಿಕ ಜೀವನದಿಂದ ಆಧ್ಯಾತ್ಮಿಕ ಉನ್ನತಿಯನ್ನು ಸಾಧಿಸಿ.ಅಂತಿಮವಾಗಿ ಶಿವನಲ್ಲಿ ಐಕ್ಯನಾಗುವ ಮಾರ್ಗವನ್ನು ಸೂಚಿಸುತ್ತದೆ. ಕಲ್ಯಾಣ ಕ್ರಾಂತಿಗೆ ಮತ್ತು ವಚನ ಸಂಗ್ರಹ:ಕಲ್ಯಾಣದ ಕ್ರಾಂತಿಯ ನಂತರ,ಚನ್ನಬಸವಣ್ಣನವರು ಎಲ್ಲ ವಚನಕಾರರ ವಚನಗಳನ್ನು ಸಂಗ್ರಹಿಸಿ, ಅವುಗಳನ್ನು ನಾಶವಾಗದಂತೆ ಉಳಿವಿಯ ಕಡೆಗೆ ಕೊಂಡೊಯ್ದುರು. ಇದರಿಂದಾಗಿ ಇಂದಿಗೂ ವಚನ ಸಾಹಿತ್ಯ ನಮಗೆ ಲಭ್ಯವಾಗಿದೆ.ಎಂದು ಶ್ರೀಗಳು ಕಾರ್ಯಕ್ರಮದ ಸಾನ್ನಿಧ್ಯವಹಿಸಿ ಮಾತನಾಡಿದರು.

ಸಾಹಿತಿ ಹನುಮಂತಗೌಡ ಗೊಲ್ಲರ ಹಾಗೂ ಮಲ್ಲಿಕಾರ್ಜುನ ಇಂಚ್ಚಿಗೇರಿ ಅವರು ಮಾತನಾಡಿ ಮಹಾಶರಣರ ಜಯಂತಿ ಭಾಗವಹಿಸಿದ್ದು ನಮ್ಮ ಭಾಗ್ಯ. ಶರಣರ ತತ್ವ ಸಿದ್ಧಾಂತಗಳನ್ನು

ಪಾಲಿಸೋಣ ಎಂದರು. ಈ ಸಂದರ್ಭದಲ್ಲಿ ಗಣ್ಯರಾದ ಪರಶುರಾಮ ಹರ್ಲಾಪುರ,ಜಯದೇವ ಕೆರೂಡಿ,ಗೂಳಪ್ಪ ಅರಳಿಕಟ್ಟಿ,ನಿಂಗಪ್ಪ ಆರೇರ, ಮಲ್ಲೇಶ ಬಾಗಲಿ,ಬಸವರಾಜ ತಟಪಟ್ಟಿ,ಮುತ್ತುರಾಜ ಹೀರೆಮಠ,ಪರಸಪ್ಪ ಕರೆದ್ಯಾಮಣ್ಣನವರ, ಗಣೇಶ,ಜ್ಯೋತಿ,ನಿರಂಜನ ಪಾವಲಿ ಸೇರಿದಂತೆ ಭಕ್ತರು ಪಾಲ್ಗೊಂಡಿದ್ದರು.

## ಪೌರಕಾರ್ಮಿಕರಿಗೆ ಕಿರುಕುಳ ನೀಡುತ್ತಿರುವ ಪಾಲಿಕೆ ಅಧಿಕಾರಿಗಳನ್ನು ವರ್ಗಾಯಿಸಿ: ಹೆಚ್.ಸಿ.ಗುಡ್ಡಪ್ಪ ಆಗ್ರಹ

**ದಾವಣಗೆರೆ:** ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವ ಪೌರಕಾರ್ಮಿಕರಿಗೆ ಕಿರುಕುಳ ಮತ್ತು ಮಾನಸಿಕ ಹಿಂಸೆ ನೀಡುತ್ತಿರುವ ಆಯುಕ್ತರು ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ) ಇವರನ್ನು ವರ್ಗಾವಣೆ ಮಾಡಿ ಇವರ ಮೇಲೆ ಕಾನೂಮ ಕ್ರಮ ಕೈಗೊಳ್ಳುವಂತೆ ಮಾದಿಗ ದಂಡೋರ ಜಿಲ್ಲಾ ಸಮಿತಿ ಒತ್ತಾಯಿಸಿದೆ.

ಸುದ್ದಿಗೋಷ್ಟಿಯಲ್ಲಿ ಸಮಿತಿ ಜಿಲ್ಲಾಧ್ಯಕ್ಷ ಹೆಚ್.ಸಿ.ಗುಡ್ಡಪ್ಪ ಮಾತನಾಡಿ, ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸುಮಾರು 700ಜನ ಪೌರಕಾರ್ಮಿಕರು ಕೆಲಸ ನಿರ್ವಹಿಸುತ್ತಿದ್ದಾರೆ. ಬಹುತೇಕ ಎಲ್ಲರೂ ಪರಿಶಿಷ್ಟ ಜಾತಿ ಮಾದಿಗ ಸಮಾಜಕ್ಕೆ ಸೇರಿದವರಾಗಿರುತ್ತಾರೆ. ಬೆಳಿಗ್ಗೆ 5 ಗಂಟೆಯಿಂದ ಕೆಲಸ ಮಾಡುತ್ತಾ ಬದುಕುತ್ತಿರುವ ಇವರು ತಮ್ಮ ಸ್ವಂತ ಆರೋಗ್ಯ ಮತ್ತು ಮಕ್ಕಳ ಶಿಕ್ಷಣ, ಕುಟುಂಬದ ಹಲವಾರು ಸಮಸ್ಯೆಗಳನ್ನು ಬದಿಗಿಟ್ಟು ನಗರ ಸ್ವಚ್ಛತೆಗೆ ಆಧ್ಯತೆ ನೀಡಿದ್ದಾರೆ ಎಂದರು.

ತಮ್ಮ ಸಮಸ್ಯೆಗಳ ನಡುವೆ ನಗರ ಸ್ವಚ್ಛತೆಯಲ್ಲಿ ತೊಡಗಿರುವ ಪೌರ ಕಾರ್ಮಿಕರಿಗೆ ಆಯುಕ್ತರು ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರು( ಪರಿಸರ) ಇಲ್ಲ ಸಲ್ಲದ ಕಿರುಕುಳಗಳನ್ನು ನೀಡುತ್ತಿದ್ದಾರೆ. ಪೌರಕಾರ್ಮಿಕರ ಕೆಲಸವನ್ನು ಹೊರತುಪಡಿಸಿ ಹೆಚ್ಚುವರಿ ಕೆಲಸವಾದ ಒಣ. ಮತ್ತು ಹಸಿ ಕಸವನ್ನು ಬೇರ್ಪಡಿಸುವಂತೆ ಇವರ ಮೇಲೆ ಒತ್ತಡ ಹೇರುತ್ತಿದ್ದಾರೆ ಎಂದು ದೂರಿದರು.

ಒಣ ಕಸ ಮತ್ತು ಹಸಿ ಕಸವನ್ನು ಬೇರ್ಪಡಿಸುವ ಉದ್ದೇಶದಿಂದಲೇ ಎನ್.ಜಿ.ಓ. ಒಂದಕ್ಕೆ ವಾರ್ಷಿಕ ಹಲವು ಕೋಟಿ ರೂ.ಗಳಿಗೆ ಗುತ್ತಿಗೆ ನೀಡಿದ್ದರೂ ಸದರಿ ಸಂಸ್ಥೆಯು ಸಮರ್ಪಕವಾಗಿ ಕಾರ್ಯ ನಿರ್ವಹಿಸದೆ, ತಪ್ಪು ಮಾಹಿತಿ ನೀಡಿ ಹಣ ಪಡೆಯುತ್ತಿದ್ದರೂ ಈ ಸಂಸ್ಥೆಯ ಮೇಲೆ ಯಾವುದೇ ಕ್ರಮಕೈಗೊಳ್ಳದ ಆಯಕ್ತರು, ಪೌರ ಕಾರ್ಮಿಕರಿಂದ ಹೆಚ್ಚುವರಿ ಕೆಲಸ ಮಾಡಿಸುವುದರೊಂದಿಗೆ ಯಾವುದೇ ಮುನ್ಸೂಚನೆ ನೀಡದೆ ಒಟ್ಟು ಸುಮಾರು 41 ಸಿಬ್ಬಂದಿಗಳನ್ನು ಅಮಾನತ್ತು ಮಾಡಿದ್ದಾರೆ. ನಂತರ ಹಲವು ಸಿಬ್ಬಂದಿಗಳನ್ನು ಮರು ನೇಮಕ ಮಾಡಿರುತ್ತಾರೆ. ಅಮಾನತ್ತು ಮಾಡಿರುವುದು ಅತ್ಯಂತ ದುರಾದೃಷ್ಟ ಸಂಗತಿ ಎಂದರು.ಆದ್ದರಿಂದ ಅಮಾಯಕ ಪೌರಕಾರ್ಮಿಕರಿಗೆ ಉದ್ದೇಶ ಪೂರ್ವಕವಾಗಿ ಕಿರುಕುಳ ನೀಡುತ್ತಿರುವ ಆಯುಕ್ತರು ಮತ್ತು ಪರಿಸರ ಅಭಿಯಂತರರನ್ನು ಈ ಕೂಡಲೆ ವರ್ಗಾಯಿಸಿ ಅವರ ಮೇಲೆ ಕಾನೂನು ಕ್ರಮ ತೆಗೆದುಕೊಳ್ಳಬೇಕು. ಈ ವಿಚಾರದಲ್ಲಿ ಜಿಲ್ಲಾ ಮಂತ್ರಿಗಳು ವಿಳಂಬ ನೀತಿಯನ್ನು ಅನುಸರಿಸಿದರೆ ಮಹಾನಗರ ಪಾಲಿಕೆ ಕಚೇರಿ ಮತ್ತು ಜಿಲ್ಲಾ ಉಸ್ತುವಾರಿ ಮಂತ್ರಿಗಳ ಕಚೇರಿಗೆ ಮುತ್ತಿಗೆ ಹಾಕಿ ನಗರಾಡಳಿತ ಮತ್ತು ಜಿಲ್ಲಾಡಳಿತ ವಿರುದ್ಧ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದೆಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಹೆಚ್.ಚಿದಾನಂದಪ್ಪ, ಎಂ.ಆಂಜನೇಯ, ಎಂ.ಡಿ.ಶಿವಕುಮಾರ್, ದಾಸಪ್ಪ, ಲೋಕೇಶ್ ಇದ್ದರು.

# ಸಾಧಕರಿಗೆ ಪ್ರಶಸ್ತಿ ಪುರಸ್ಕಾರ

**ಚಿಕ್ಕಮಗಳೂರು:** ಮಂಗಳೂರಿನಲ್ಲಿ ರವೀಂದ್ರ ಕಲಾವೇದಿಕೆ. ಕಥಾ ಬಿಂದು ಪ್ರಕಾಶನದ ವತಿಯಿಂದ ನಡೆದ ಸಾಹಿತ್ಯೋತ್ಸವ 2025 ಅಕ್ಟೋಬರ್ 26ರಂದು ಭಾನುವಾರ ನಡೆದ ಸಮಾರಂಭದಲ್ಲಿ ಚಿಕ್ಕಮಗಳೂರಿನ ಹಲವು ಸಾಧಕರು ವಿವಿಧ ಕ್ಷೇತ್ರದಲ್ಲಿ ಅವರು ಮಾಡಿದ ಸಾಧನೆಯನ್ನು ಗುರುತಿಸಿ ಪುರಸ್ಕರಿಸಿ ಸನ್ಮಾನಿಸಲಾಯಿತು.

ಡಾಕ್ಟರ್ ಹರಿಕೃಷ್ಣ ಪುನರೂರು ನಿಕಟ ಪೂರ್ವ ಕನ್ನಡ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷರು ಹಾಗೂ ಕಥಾ ಬಿಂದು ಪ್ರಕಾಶನದ ಪಿವಿ ಪ್ರದೀಪ್ ಕುಮಾರ್ ಸಾರಥ್ಯದಲ್ಲಿ ಡಾಕ್ಟರ್ ಲಕ್ಷ್ಮಿಕಾಂತ್ ಕೆ .ಎನ್. ಅವರಿಗೆ ರಾಜ್ಯ ಪ್ರಶಸ್ತಿ (ಶಿಕ್ಷಣ ರತ್ನ). ಶ್ರೀಮತಿ ಕವಿತಾ ಗೋಪಾಲ್( ಸಮಾಜ ಸೇವ ರತ್ನ), ಕುಮಾರ್ ಆರ್ ಶೆಟ್ಟಿ( ಸೌರಭ ರತ್ನ), ಶ್ರೀಮತಿ ಪೂರ್ಣಿಮಾ ಗುರುಮೂರ್ತಿ( ಸೌರಭ ರತ್ನ), ಶ್ರೀಮತಿ ಶೈಲಾ ಚೆಲುವಯ್ಯ (ಸೌರಭ ರತ್ನ), ಶ್ರೀಮತಿ ಅಣ್ಣಮ್ಮ( ಸೌರಭ ರತ್ನ) ಸತೀಶ್ ಶೆಟ್ಟಿ( ಸಮಾಜ ಸೇವಾ ರತ್ನ) ಪ್ರಶಸ್ತಿ ನೀಡಿ ಗೌರವಿಸಲಾಯಿತು. ಈ ಸಂಧರ್ಭದಲ್ಲಿ ವೇದಿಕೆ ಮೇಲೆ ಹವಲು ಗಣ್ಯರು ಉಪಸ್ಥಿತರಿದ್ದರು.



# ಪದವೀಧರ ಕ್ಷೇತ್ರಕ್ಕೆ ಬಲ ತುಂಬಲು ಬಿಜೆಪಿಯನ್ನು ಬೆಂಬಲಿಸಿ: ಸ್ಪರ್ಧಾಂಕಾಂಕ್ಷಿ ಪ್ರದೀಪ್ ಕುಮಾರ್

**ದಾವಣಗೆರೆ:** ಆಗ್ನೇಯ ಪದವೀಧರ ಕ್ಷೇತ್ರಕ್ಕೆ ಬಲತುಂಬಲು, ಶಿಕ್ಷಣ, ಯುವಸಬಲೀಕರಣ ಹಾಗೂ ರಾಷ್ಟ್ರದ ಭದ್ರಬುನಾದಿಯ ಕನಸನ್ನು ನನಸಾಗಿಸಲು ಪದವೀಧರರು ನನ್ನೊಂದಿಗೆ ಕೈಜೋಡಿಸಬೇಕೆಂದು ಆಗ್ನೇಯ ಪದವೀಧರ ಕ್ಷೇತ್ರದ ಬಿಜೆಪಿ ಸ್ಪರ್ಧಾಂಕಾಂಕ್ಷಿ ಎನ್.ಬಿ.ಪ್ರದೀಪ್ ಕುಮಾರ್ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಾವಣಗೆರೆಯಲ್ಲಿ ಅನೇಕ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಗಳು, ಎಂಜಿನಿಯರಿಂಗ್, ವೈದ್ಯಕೀಯ ಶಿಕ್ಷಣ ಸೇರಿದಂತೆ ಸರಕಾರಿ ಕಾಲೇಜುಗಳು ಇವೆ. ಈ ವ್ಯವಸ್ಥೆಗಳು ಮತ್ತಷ್ಟು ಸುಧಾರಿಸಬೇಕು ಎಂದಾದರೆ ಪದವೀಧರ ಕ್ಷೇತ್ರಕ್ಕೆ ಬಲ ಬೇಕು. ಅದನ್ನು ಸಾಧ್ಯವಾಗಿಸಲು ದಾವಣಗೆರೆಯ ಎಲ್ಲ ಪದವೀಧರರೂ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡು ಮತದಾನದಲ್ಲಿ ಭಾಗವಹಿಸಬೇಕು ಎಂದರು.

ನನಗೆ ಶಿಕ್ಷಣ, ರಾಜಕೀಯ ವಲಯಗಳಲ್ಲಿ ಈಗಾಗಲೇ ಹಲವು ವರ್ಷಗಳಿಂದ ಸೇವೆ ಸಲ್ಲಿಸಿರುವ ಅನುಭವ ಇದೆ. ಹಲವು ದಶಕಗಳಿಂದ ನಾನು ಶಿಕ್ಷಣ ಹಾಗೂ ಔದ್ಯೋಗಿಕ ಕ್ಷೇತ್ರದಲ್ಲಿ ಪೂರ್ಣವಾಗಿ ತೊಡಗಿಸಿಕೊಂಡಿರುವುದರಿಂದ ಶಿಕ್ಷಕರು ಮತ್ತು ಯುವಜನರ ಸಮಸ್ಯೆಗಳ ಬಗ್ಗೆ ಪೂರ್ಣ ಅರಿವು ಹಾಗೂ ಮಾಹಿತಿಗಳನ್ನು ಹೊಂದಿದ್ದೇನೆ. ಮುಂದಿನ ದಿನಗಳಲ್ಲಿ ಅವುಗಳ ನಿವಾರಣೆಗೆ ಪ್ರಾಮಾಣಿಕ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು.

ಪ್ರತಿಯೊಬ್ಬ ಪದವೀಧರರೂ ಈ ಚುನಾವಣೆಯಲ್ಲಿ ಪಾಲ್ಗೊಂಡು ಪದವೀಧರ ಕ್ಷೇತ್ರಕ್ಕೆ ಬಲತುಂಬಲು. ಯುವಸಬಲೀಕರಣ ಭದ್ರಬುನಾದಿಯ ಶಿಕ್ಷಣ, ಯುವ ಹಾಗೂ ರಾಷ್ಟ್ರದ ಕನಸನ್ನು ನನಸಾಗಿಸಲು ನನ್ನೊಂದಿಗೆ ಕೈಜೋಡಿಸಬೇಕೆಂದು ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ರಂಗನಾಥ. ಕಿರಣ್ ಕುಮಾರ್, ವೇದಮೂರ್ತಿ ಇತರರು ಇದ್ದರು.

# ಅದ್ದೂರಿಯಾಗಿ ರಾಜ್ಯೋತ್ಸವ




**ಬೆಟಗೇರಿ :** ಬೆಟಗೇರಿ ರಾಜ್ಯೋತ್ಸವ ಸಮಿತಿ, ಸಾರ್ವಕನಿಕ ಶಿಕ್ಷಣ ಇಲಾಖೆ, ಮಹಾರಾಣಾ ಪ್ರತಾಪಸಿಂಹ ಶಿಕ್ಷಣ ಸಂಸ್ಥೆ ಹಾಗೂ ಇಲ್ಲಿಯ ಸಾರ್ವಜನಿಕರ ಆಶ್ರಯದಲ್ಲಿ ಕಳೆದ 28 ವರ್ಷಗಳಿಂದ ಕರ್ನಾಟಕ ರಾಜ್ಯೋತ್ಸವ ಆಚರಿಸುತ್ತ ಬಂದಿದ್ದು, ಅದರ ಅಂಗವಾಗಿ ಪ್ರಸ್ತುತ ಸಾಲಿನ ಕರ್ನಾಟಕ ರಾಜ್ಯೋತ್ಸವವನ್ನು ನವಂಬರ–1 ಶನಿವಾರದಂದು ಅದ್ದೂರಿಯಾಗಿ ಆಚರಿಸಲಾಗುವುದು.

ಅದರ ಅಂಗವಾಗಿ ಬೆಟಗೇರಿ ಶಾಲಾ ಕಾಲೇಜುಗಳ ಆಕರ್ಷಕ ರೂಪಕಗಳೊಂದಿಗೆ ತಾಯಿ ಭುವನೇಶ್ವರಿ ಭಾವಚಿತ್ರದ ಮೆರವಣಿಗೆ ನಡೆಯಲಿದೆ. ಈ ಮೆರವಣಿಗೆಯಲ್ಲಿ ಬೆಟಗೇರಿಯ ಎಲ್ಲ ವಿದ್ಯಾರ್ಥಿ ವಿದ್ಯಾರ್ಥಿನಿಯರು, ಶಾಲಾ ಕಾಲೇಜು ಮುಖ್ಯಸ್ಥರು, ಶಿಕ್ಷಕ ಶಿಕ್ಷಕಿಯರು, ಸಿಬ್ಬಂದಿಯವರು ಹಾಗೂ ಸಾರ್ವಜನಿಕರು ಪಾಲ್ಗೊಳ್ಳಲಿರುವರು.

ನವಂಬರ–1 ರಂದು ಮುಂಜಾನೆ ಸರಿಯಾಗಿ 8–30 ಗಂಟೆಗೆ ನಡೆಯುವ ಈ ಕಾರ್ಯಕ್ರಮಕ್ಕೆ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ.ಪಾಟೀಲರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರಾದ ಡಿ.ಆರ್.ಪಾಟೀಲ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಬೆಟಗೇರಿಯ ಎಲ್ಲ ನಗರಸಭಾ ಸದಸ್ಯರುಗಳು, ಡಿ.ಡಿ.ಪಿಐ. ಗದಗ, ಗದಗ ಶಹರ ಕ್ಷೇತ್ರಶಿಕ್ಷಣಾಧಿಕಾರಿಗಳು ಸೇರಿದಂತೆ ಹಲವಾರು ಗಣ್ಯರು ಪಾಲ್ಗೊಳ್ಳಲಿರುವರು.

ಈ ಕಾರ್ಯಕ್ರಮಕ್ಕೆ ಸಾರ್ವಜನಿಕರು, ಶಾಲಾ ಕಾಲೇಜದವರು ಪಾಲ್ಗೊಳ್ಳಬೇಕೆಂದು ರಾಜ್ಯೋತ್ಸವ ಸಮಿತಿ ಅಧ್ಯಕ್ಷರಾದ ಗಣೇಶಸಿಂಗ ಬ್ಯಾಳಿ ವಿನಂತಿಸಿದ್ದಾರೆ.

ತಂಬಾಕು ನಿಯಂತ್ರಣ ಕೋಶ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಕಟ್ಟುನಿಟ್ಟಿನ ಸೂಚನೆ

# ಅನಧೀಕೃತ ತಂಬಾಕು ಉತ್ಪನ್ನ ಮಾರಾಟ ಮಾಡುವವರ ಮೇಲೆ ಕ್ರಮ ಜರುಗಿಸಿ



**ಬಳ್ಳಾರಿ:** ಜಿಲ್ಲೆಯಲ್ಲಿ ಪರವಾನಿಗೆ ಪಡೆಯದೇ ಅನಧಿಕೃತವಾಗಿ ತಂಬಾಕು ಉತ್ಪನ್ನ ಮಾರಾಟ ಮಾಡುವವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಹೇಳಿದರು.

ಬುಧವಾರ, ನಗರದ ಜಿಲ್ಲಾಧಿಕಾರಿಗಳ ಹಳೆಯ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲಾ ನಗರಾಭಿವೃದ್ಧಿ ಕೋಶ ಅಧೀನದ ವ್ಯಾಪ್ತಿಯಲ್ಲಿ ಬರುವ ಅಂಗಡಿ, ಹೋಟೆಲ್, ವಾಣಿಜ್ಯ ಮಳಿಗೆಗಳಲ್ಲಿ ತಂಬಾಕು ಉತ್ಪನ್ನಗಳ ವ್ಯಾಪಾರಕ್ಕೆ ಸರ್ಕಾರದ ಮಾನದಂಡಗಳಡಿ ಪರವಾನಿಗೆ ನೀಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಪ್ರಾಥಮಿಕ, ಪ್ರೌಢ ಶಿಕ್ಷಣ ಇಲಾಖೆ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ಶಾಲಾ–ಕಾಲೇಜುಗಳನ್ನು ತಂಬಾಕು ಮುಕ್ತ ಶಿಕ್ಷಣ ಸಂಸ್ಥೆಗಳನ್ನಾಗಿ ಘೋಷಿಸಿ ತ್ವರಿತವಾಗಿ ಟಿಒಎಫ್‌ಇಐ ಆಪ್ ನಲ್ಲಿ ನಮೂದಿಸಬೇಕು. ಇಲ್ಲವಾದಲ್ಲಿ ಸಂಬಂಧಿಸಿದ ಅಧಿಕಾರಿಗಳ ಮೇಲೆ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಿದರು.

ಶಾಲಾ–ಕಾಲೇಜು ಮಕ್ಕಳು ಒಂದು ಬಾರಿ ತಂಬಾಕು ಉತ್ಪನ್ನಗಳಿಗೆ ದಾಸರಾದರೆ, ಅದರಿಂದ ಹೊರಬರುವುದು ಕಷ್ಟಕರ. ಹಾಗಾಗಿ ಅಧಿಕಾರಿಗಳು ಹೆಚ್ಚಾಗಿ ಶಾಲಾ–ಕಾಲೇಜುಗಳಲ್ಲಿ, ಗ್ರಾಮೀಣ ಕ್ಷೇತ್ರಗಳಲ್ಲಿ ಮತ್ತು ಸಮುದಾಯಗಳಲ್ಲಿ ತಂಬಾಕು ಉತ್ಪನ್ನಗಳಿಂದಾಗುವ ದುಷ್ಪರಿಣಾಮ ಕುರಿತು ಹೆಚ್ಚು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳುವಂತೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿನ ಎಲ್ಲಾ ಬಾರ್ ಮತ್ತು ರೆಸ್ಟೋರೆಂಟ್ ಗಳಲ್ಲಿ ಕಡ್ಡಾಯವಾಗಿ ಧೂಮಪಾನ ವಲಯ ಸ್ಥಾಪಿಸಿ, ಅವುಗಳ ಉಪಯೋಗ, ಕ್ರಮಬದ್ಧತೆ ಕುರಿತು ಅಬಕಾರಿ ಅಧಿಕಾರಿಗಳು ನಿಯಮಿತವಾಗಿ ಪರಿಶೀಲನೆ ನಡೆಸುತ್ತಿರಬೇಕು ಎಂದು ತಿಳಿಸಿದರು.

ಜಿಲ್ಲೆಯ ಎಲ್ಲಾ ಬಸ್ ನಿಲ್ದಾಣಗಳಲ್ಲಿ ತಂಬಾಕು ಸೇವನೆ ಯ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಲು ಕ್ರಮವಹಿಸಬೇಕು. ನಿಲ್ದಾಣ ಅಂದಗೆಡಿಸುವ, ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಉತ್ಪನ್ನ ಸೇವಿಸಿ, ಎಲ್ಲೆಂದರಲ್ಲಿ ಉಗುಳುವವರ ಮೇಲೆ ದಂಡ ವಿಧಿಸಬೇಕು ಎಂದು ಕಕರಾರಸಾ ಸಂಸ್ಥೆಯ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಡಾ.ಮರಿಯಂಬಿ ವಿ.ಕೆ ಅವರು ಮಾತನಾಡಿ, ಜಿಲ್ಲೆಯಲ್ಲಿ 2025ರ ಜುಲೈನಿಂದ ಸೆಪ್ಟೆಂಬರ್ ವರೆಗಿನ ಒಟ್ಟು 617 ಕ್ಷಯರೋಗಿಗಳಲ್ಲಿ 86 ತಂಬಾಕು ವ್ಯಸನಿಗಳಾಗಿದ್ದು, ಎಲ್ಲರನ್ನು ತಂಬಾಕು ವ್ಯಸನಮುಕ್ತ ಕೇಂದ್ರದಲ್ಲಿ ದಾಖಲಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಮಾತನಾಡಿ, ತಂಬಾಕು ವ್ಯಸನದಿಂದ ಮುಕ್ತರಾಗಿ ಬರುವ ವ್ಯಕ್ತಿಗಳಿಂದ ಅದರಿಂದಾಗುವ ಪರಿಣಾಮ ಕುರಿತು ಸಾರ್ವಜನಿಕರಿಗೆ ತಿಳಿಯಪಡಿಸಲು ಮತ್ತು ಅದರ ಜೊತೆಗೆ ಅಧಿಕಾರಿಗಳ ನಿರ್ದೇಶನ ಒಳಗೊಂಡ ವಿಡಿಯೋ ಚಿತ್ರೀಕರಿಸಿ ಸಾಮಾಜಿಕ ಜಾಲತಾಣಗಳಲ್ಲಿ ಹೆಚ್ಚಿನ ಪ್ರಚಾರ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ಶಾಲಾ–ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ತಂಬಾಕು ಉತ್ಪನ್ನಗಳಿಂದ ದೂರವಿರುತ್ತೇನೆ ಎಂಬ ಪ್ರತಿಜ್ಞಾ ವಿಧಿ ಸ್ವೀಕರಿಸುವ ಕಾರ್ಯಕ್ರಮ ಹಮ್ಮಿಕೊಳ್ಳಬೇಕು. ಇದರಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಸಹ ಭಾಗವಹಿಸುವಂತೆ ಕ್ರಮವಹಿಸಬೇಕು ಎಂದು ಹೇಳಿದರು.

ಅಧಿಕಾರಿಗಳು ಹೆಚ್ಚಾಗಿ ಕ್ಷೇತ್ರ ಮಟ್ಟದಲ್ಲಿ ಸಂಚರಿಸಿದಾಗ ಮಾತ್ರ ತಂಬಾಕು ಬಳಕೆ ಮೇಲೆ ಕಡಿವಾಣ ಹಾಕಲು ಸಾಧ್ಯವಾಗುತ್ತದೆ ಎಂದು ಅಧಿಕಾರಿಗಳಿಗೆ ಹೇಳಿದರು.

ಇದೇ ವೇಳೆ ಜಿಲ್ಲೆಯಲ್ಲಿ ಡಿ.06 ರ ವರೆಗೆ ನಡೆಯುವ 'ತಂಬಾಕು ಮುಕ್ತ ಯುವ ಅಭಿಯಾನ 3.0' ಗೆ ಚಾಲನೆ ನೀಡಲಾಯಿತು.

ಸಭೆಯಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ.ವಿ., ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಂ, ಜಿಲ್ಲಾ ತಂಬಾಕು ಸಲಹೆಗಾರ ಪ್ರಶಾಂತ್ ಸೇರಿದಂತೆ ಡಿಡಿಪಿಐ, ಡಿಡಿಪಿಯು, ಮಹಾನಗರ ಪಾಲಿಕೆ ಅಧಿಕಾರಿಗಳು ಹಾಗೂ ಎಲ್ಲಾ ತಾಲ್ಲೂಕು ವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ಕನ್ನಡ ರಾಜ್ಯೋತ್ಸವ

**ಚಿಕ್ಕಬಳ್ಳಾಪುರ:** ಜಿಲ್ಲಾಡಳಿತ, ಚಿಕ್ಕಬಳ್ಳಾಪುರ ವತಿಯಿಂದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮವನ್ನು ನವೆಂಬರ್ 1 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಸರ್. ಎಂ.ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ.

ಧ್ವಜಾರೋಹಣವನ್ನು ಉನ್ನತ ಶಿಕ್ಷಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಸಿ. ಸುಧಾಕರ್ ರವರು ನೆರವೇರಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಶಾಸಕರಾದ ಪ್ರದೀಪ್ ಈಶ್ವರ್ ರವರು ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಕೆ.ಸುಧಾಕರ್, ಕೋಲಾರ ಲೋಕಸಭಾ ಕ್ಷೇತ್ರದ ಸಂಸದರಾದ ಎಂ.ಮಲ್ಲೇಶ್ ಬಾಬು, ಶಾಸಕರುಗಳಾದ ಎಸ್.ಎನ್. ಸುಬ್ಬಾರೆಡ್ಡಿ, ಬಿ.ಎನ್. ರವಿಕುಮಾರ್, ಕೆ.ಹೆಚ್. ಪುಟ್ಟಸ್ವಾಮಿಗೌಡ, ವಿಧಾನ ಪರಿಷತ್ತು ಶಾಸಕರಾದ ಚಿದಾನಂದ ಎಂ. ಗೌಡ, ಎಂ.ಎಲ್. ಅನಿಲ್ ಕುಮಾರ್, ಡಿ.ಟಿ. ಶ್ರೀನಿವಾಸ, ಡಾ. ಹೆಚ್.ನರಸಿಂಹಯ್ಯ ವಿಜ್ಞಾನ ಶೈಕ್ಷಣಿಕ ಸಾಂಸ್ಕೃತಿಕ ಮತ್ತು ಪ್ರವಾಸೋದ್ಯಮ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎನ್.ಹೆಚ್ ಶಿವಶಂಕರರೆಡ್ಡಿ, ಚಿಕ್ಕಬಳ್ಳಾಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಎನ್. ಕೇಶವರೆಡ್ಡಿ, ಕರ್ನಾಟಕ ಜಾನಪದ ಅಕಾಡೆಮಿಯ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಯಲುವಹಳ್ಳಿ ಎನ್. ರಮೇಶ್, ಚಿಕ್ಕಬಳ್ಳಾಪುರ ನಗರಸಭೆ ಅಧ್ಯಕ್ಷ ಎ.ಗಜೇಂದ್ರ ರವರು ಭಾಗವಹಿಸಲಿದ್ದಾರೆ. ಅತಿಥಿಗಳಾಗಿ ವಿದ್ಯುನ್ಮಾನ ಮಾಹಿತಿ ತಂತ್ರಜ್ಞಾನ ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಮತ್ತು ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿಗಳಾದ ಡಾ. ಎನ್. ಮಂಜುಳ ರವರು ಭಾಗವಹಿಸುವರು.ಜಿಲ್ಲೆಯ ಎಲ್ಲಾ ಚುನಾಯಿತ ಪ್ರತಿನಿಧಿಗಳು, ಸರ್ಕಾರಿ ನೌಕರರ ಸಂಘ ಹಾಗೂ ಇತರೆ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಮತ್ತು ಸಮಸ್ತ ನಾಗರಿಕರು ಭಾಗವಹಿಸಲಿದ್ದಾರೆ.

# ಕೋಟ್ಪಾ ದಾಳಿ 1400 ದಂಡ ಸಂಗ್ರಹ



**ಚಿಕ್ಕಬಳ್ಳಾಪುರ:** ತಂಬಾಕು ಮುಕ್ತ ಯುವ ಅಭಿಯಾನ 3.0 ಪ್ರಯುಕ್ತ ಜಿಲ್ಲಾಡಳಿತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಇತರ ಇಲಾಖೆಗಳ ಸಹಯೋಗದ ತಂಡದ ವತಿಯಿಂದ ಚಿಕ್ಕಬಳ್ಳಾಪುರ ನಗರದ ಎಂ ಜಿ ರಸ್ತೆಯ ಇಕ್ಕೆಲಗಳ ಬಳಿ ನಿಯಮ ಮೀರಿ ತಂಬಾಕು ಪದಾರ್ಥಗಳನ್ನು ಮಾರಾಟ ಮಾಡುತ್ತಿದ್ದ ಅಂಗಡಿ ಮಾಲೀಕರಿಗೆ ಬುಧವಾರ ದಂಡ ವಿಧಿಸುವ ಜೊತೆಗೆ ಜಾಗೃತಿ ಮೂಡಿಸುವ ಕೆಲಸ ಮಾಡಲಾಯಿತು.ಈ ವೇಳೆ ಜಿಲ್ಲಾ ತಂಬಾಕು ನಿಯಂತ್ರ ಕೋಶ ಮತ್ತು ಚಿಕ್ಕಬಳ್ಳಾಪುರ ತಾಲ್ಲೂಕು ತನಿಖಾದಳದವರ ಸಹಯೋಗದಲ್ಲಿ ಕೋಟ್ಪಾದಾಳಿಯನ್ನು ಸಹ ಹಮ್ಮಿಕೊಳ್ಳಲಾಯಿತು.

ಈ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾ ಸಹಾಯಕರಾದ ಮಂಜುನಾಥ್ ಎಂ ಆರ್ ರವರು ಮಾತನಾಡಿ, ಯಾವುದೇ ಸಾರ್ವಜನಿಕ ಪ್ರದೇಶದ ಹೋಟೆಲ್,ಕಾಂಡಿಮೆಂಟ್,ಬೇಕರಿ,ಇತರೆ ಯಾವುದೇ ಅಂಗಡಿ ಮಾಲೀಕರು ಧೂಮಪಾನ ನಿಷೇಧಿತ ನಾಮಫಲಕವನ್ನು ಅಳವಡಿಸಿಕೊಳ್ಳದೆ ಇದ್ದಲ್ಲಿ ಕೋಟ್ಪಾ ಕಾಯ್ದೆಯಡಿ 1000 ರೂ.ಗಳ ವರೆಗೆ ದಂಡ ವಿಧಿಸಲಾಗುವುದು. ಅಂತಹದ್ದಕ್ಕೆ ಯಾರು ಅವಕಾಶ ನೀಡಬೇಡಿ ಎಂದು ಮನವಿ ಮಾಡಿದರು.

ನಿಯಮ ಬಾಹಿರವಾಗಿ ತಂಬಾಕು ಪದಾರ್ಥಗಳ ಮಾರಾಟ ಮಾಡುತ್ತಿದ್ದ ಅಂಗಡಿ ಮಾಲೀಕರಿಗೆ ದಂಡ ವಿಧಿಸುವ ಜೊತೆಗೆ ಎಚ್ಚರಿಕೆ ನೀಡಿ ಮುಂದಿನ ದಿನಗಳಲ್ಲಿ ಇಂತಹ ವಹಿವಾಟನ್ನು ಮಾಡಿದರೆ ಕಠಿಣ ಸಜೆಗೆ ಒಳಪಡಿಸುವುದಾಗಿಯೂ ತಿಳಿಸಿದರು. ಯಾವುದೇ ಸಾರ್ವಜನಿಕ ಪ್ರದೇಶದಲ್ಲಿ ಧೂಮಪಾನ ಮಾಡುವುದನ್ನು ಕಡ್ಡಾಯವಾಗಿ ನೀಷೆಧಿಸಿದ್ದು ಉಲ್ಲಂಘಿಸಿದವರಿಗೂ ಸಹ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಇಂದು ಕೈಗೊಂಡ ಕೋಟ್ಪಾ ದಾಳಿಯಿಂದ ಒಟ್ಟು 17 ಪ್ರಕರಣಗಳನ್ನು ದಾಖಲಿಸಿ 1400 ದಂಡವನ್ನು ಸಂಗ್ರಹಿಸಲಾಗಿದೆ ಎಂದು ಮಾಹಿತಿ ನೀಡಿದರು.

ಸಾರ್ವಜನಿಕರು ತಂಬಾಕು ಸೇವನೆಯನ್ನು ತ್ಯಜಿಸಲು ಜಿಲ್ಲಾ ಆಸ್ಪತ್ರೆಯಲ್ಲಿ ಸಿಗುವ ಉಚಿತ ಎನ್.ಆರ್.ಟಿ ಚಿಕಿತ್ಸೆಯನ್ನು ಪಡೆದು ವ್ಯಸನ ಮುಕ್ತರಾಗಬೇಕೆಂದು ತಿಳಿಸಿ ತಂಬಾಕು ಮುಕ್ತ ಸಮಾಜ ವ್ಯಸನ ಮುಕ್ತ ಸಮಾಜ ನಿರ್ಮಾಣ ಮಾಡುವಲ್ಲಿ ಸಾರ್ವಜನಿಕರು ಸಹಕರಿಸಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ನಾರಾಯಣಸ್ವಾಮಿ, ಪ್ರೀಯಾ ಮತ್ತು ಸಮಾಜ ಕಾರ್ಯಕರ್ತ ಮಂಜುನಾಥ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಹಾಗೂ ತಾಲ್ಲೂಕು ತನಿಖಾದಳದ ಅಧಿಕಾರಿಗಳು, ಸಿಬ್ಬಂದಿ ಹಾಜರಿದ್ದರು.

# ಸಾರ್ವಜನಿಕರ ಪ್ರಕಟಣೆ ನೀರು ಪೂರೈಕೆ ಮಾಡುವ ಸ್ಥಳಗಳ ಮಾಹಿತಿ

**ಗದಗ:** ಗದಗ ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ದಿನಾಂಕ: 30–10–2025 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ: ವಾರ್ಡ್ 16 ಕುಷ್ಠ ರೋಗ ಕಾಲೋನಿ, ಅಂಬೇಡ್ಕರ ನಗರ, ಗುಡದೂರ ಸ್ವಾಮಿ ಮಠ, ರಹಿಮತ ನಗರ, ಡಿ ಸಿ ಮಿಲ ರಸ್ತೆ, ರಾಮಗಿರಿಯವರ ಲೈನ, ಡೂರಗಲ್ಲಿ 2 ಭಾಗಗಳು. ವಾರ್ಡ್ 3 – ಮಿಶನ ಕಂಪೌಂಡ, ಬಣ್ಣದ ನಗರ, ಕುಂಬಾರಓಣಿ, ಅಯಪ್ಪಜ್ಜನ ರಸ್ತೆ, ಮಲ್ಲಿಕಾರ್ಜುನ ರಸ್ತೆ, ರಜಪೂತಗಲ್ಲಿ, ಬಳಗಾನೂರ ರಸ್ತೆ ಎಡಭಾಗ ಉಳಿದ ಕೆಲವು ಭಾಗಗಳು.

ಪ್ರಕಟಣೆ: ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ ಮಾಡಲಾಗುವುದು ಅಂತಾ ಮಾನ್ಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಶಿಕ್ಷಣದ ಜೊತೆಗೆ ಕ್ರೀಡೆಗೂ ಪ್ರೋತ್ಸಾಹ ಅಗತ್ಯ



**ಶಿವಮೊಗ್ಗ:** ಶಿಕ್ಷಣದ ಜೊತೆಯಲ್ಲಿ ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವಂತೆ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಬೇಕು. ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಕ್ರೀಡೆ ಸಹಕಾರಿಯಾಗುತ್ತದೆ ಎಂದು ನಿವೃತ್ತ ದೈಹಿಕ ಶಿಕ್ಷಣ ಅಧಿಕಾರಿ ನಿರಂಜನಮೂರ್ತಿ ಹೇಳಿದರು.

ಅವರು ನಗರದ ಡೆಲ್ಲಿ ವರ್ಲ್ಡ್ ಶಾಲೆಯಲ್ಲಿ ಆಯೋಜಿಸಿದ್ದ ಶಾಲೆಯ ವಾರ್ಷಿಕ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡುತ್ತಾ, ಮಕ್ಕಳಲ್ಲೂ ಸಹ ಸಾಕಷ್ಟು ಪ್ರತಿಭೆ ಇರುತ್ತದೆ. ಶಿಕ್ಷಕರು ಹಾಗೂ ಪಾಲಕರು ಪ್ರೋತ್ಸಾಹ ನೀಡಿ ಕ್ರೀಡಾ ಆಸಕ್ತಿ ಬೆಳೆಸಬೇಕು ಎಂದರು.

ಶಾಲೆಯ ಪ್ರಾಂಶುಪಾಲರಾದ ದಿವ್ಯಾಶೆಟ್ಟಿ ಮಾತನಾಡುತ್ತಾ, ಮಕ್ಕಳನ್ನು ಪುಸ್ತಕಕ್ಕೆ ಮಾತ್ರ ಸೀಮಿತವಾಗಿರಸದೆ ಮಕ್ಕಳ ಸರ್ವಾಂಗೀಣ ಅಭಿವೃದ್ಧಿಯ ಕಡೆ ಪೋಷಕರು ಗಮನಹರಿಸಬೇಕು. ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಸದಾ ಆರೋಗ್ಯದಿಂದ ಇರಲು ಸಾಧ್ಯವಾಗುತ್ತದೆ. ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡಲು ಹೆಚ್ಚಿನ ಅವಕಾಶಗಳಿವೆ ಎಂದರು.

ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕರು, ಆಡಳಿತ ಮಂಡಳಿ, ಪೋಷಕರು ಉಪಸ್ಥಿತರಿದ್ದರು.

# ಜೆಜೆಎಂ ಕಾಮಗಾರಿಗಳ ಪ್ರಗತಿ ಪರಿಶೀಲನೆಗೆ ನ.10ರಂದು ವಿಸ್ತೃತ ಚರ್ಚೆ: ರಾಮಲಿಂಗಾರೆಡ್ಡಿ



**ರಾಮನಗರ:** ಜಿಲ್ಲೆಯಲ್ಲಿ ಕೈಗೊಳ್ಳಲಾದ ಜಲಜೀವನ್ ಮಿಷನ್ ಕಾಮಗಾರಿಗಳ ಪ್ರಗತಿ ಹಾಗೂ ಸಮಸ್ಯೆಗಳ ಕುರಿತು ನವೆಂಬರ್ 10 ರಂದು ವಿಸ್ತೃತವಾಗಿ ಚರ್ಚೆ ನಡೆಸಲಾಗುವುದು ಎಂದು ಸಾರಿಗೆ, ಮುಜರಾಯಿ ಹಾಗೂ ಬೆಂಗಳೂರು ದಕ್ಷಿಣ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾ ರೆಡ್ಡಿ ಅವರು ತಿಳಿಸಿದರು.

ಅವರು ಅ.29ರ ಬುಧವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ 2025–26ನೇ ಸಾಲಿನ ತ್ರೈಮಾಸಿಕ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶಗಳ ಕಾರ್ಯಕ್ರಮಗಳೂ ಸೇರಿದಂತೆ) ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಕೈಗೊಳ್ಳಲಾದ ಜಲಜೀವನ್ ಮಿಷನ್ ಕಾಮಗಾರಿಗಳಲ್ಲಿ ಎದುರಾದ ಸಮಸ್ಯೆಗಳು, ಅಸಮರ್ಪಕ ಕಾಮಗಾರಿಗಳು ಅವುಗಳ ಪರಿಹಾರಕ್ಕೆ ಕೈಗೊಳ್ಳಬೇಕಾದ ಕ್ರಮಗಳು, ಕಾಮಗಾರಿಗೆ ಬಿಡುಗಡೆಯಾದ ಅನುದಾನ, ಬಳಕೆ ಮೊತ್ತ ಸೇರಿದಂತೆ ಜೆಜೆಎಂನ ಕಾಮಗಾರಿಗಳನ್ನು ಸವಿವರವಾಗಿ ಚರ್ಚಿಸಲು, ಜಿಲ್ಲೆಯ ಹಿರಿಯ ಅಧಿಕಾರಿಗಳು, ಜೆಜೆಎಂ ಅಧಿಕಾರಿಗಳು, ಕೆಡಿಪಿ ಸಮಿತಿ ಸದಸ್ಯರು ಸಭೆಗೆ ನವೆಂಬರ್ 10ರಂದು ಹಾಜರಾಗಬೇಕು ಎಂದರು.

ಕೃಷಿ ಇಲಾಖೆಗೆ ಸಂಬಂಧಿಸಿದಂತೆ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವರು, ರೈತರಿಗೆ ಸಕಾಲದಲ್ಲಿ ಬಿತ್ತನೆ ಬೀಜ, ಗೊಬ್ಬರ ಪೂರೈಕೆ ಆಗಿರುವುದನ್ನು ಖಾತ್ರಿ ಪಡಿಸಿಕೊಂಡು ಜಿಲ್ಲೆಯಲ್ಲಿ ಯಾವುದೇ ಸಮಸ್ಯೆಗಳು ಎದುರಾಗಬಾರದು ಅಗತ್ಯ ಇರುವ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳನ್ನು ಪೂರೈಸುವಂತೆ ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಅಂಬಿಕಾ ಅವರಿಗೆ ಸೂಚನೆ ನೀಡಿದರು.

ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವರು ಶೇ. 8 ರಷ್ಟು ಬಾಕಿ ಉಳಿದ ಸಮೀಕ್ಷಾ ಕಾರ್ಯಕ್ಕೆ ಸಮೀಕ್ಷೆಯಲ್ಲಿ ಭಾಗವಹಿಸಿದವರ ಬಗ್ಗೆ, ಆಸಕ್ತಿ ಇಲ್ಲದವರ ಬಗ್ಗೆ, ವಲಸಿಗರು ಈ ಸಮೀಕ್ಷೆಯಲ್ಲಿ ಭಾಗವಹಿಸದಿರುವ ಬಗ್ಗೆ ಸ್ಪಷ್ಟವಾಗಿ ನಮೂದಿಸಿಕೊಳ್ಳಬೇಕು ಎಂದು ಸೂಚಿಸಿದರು.

ಜಿಲ್ಲೆಯಲ್ಲಿ ಹೊಸದಾಗಿ 35 ಅಂಗನವಾಡಿ ಕೇಂದ್ರಗಳ ನಿರ್ಮಾಣಕ್ಕೆ ಬಗ್ಗೆ ಅನುಮತಿ ದೊರೆತಿದ್ದು, ಅವುಗಳಿಗೆ ನಿವೇಶನ ಹುಡುಕಲು ತುರ್ತಾಗಿ ಯತ್ನಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಿಗೆ ಸೂಚಿಸಿದರು.ಮಕ್ಕಳ ರಕ್ಷಣಾ ಘಟಕದ ಮಕ್ಕಳ ರಕ್ಷಣಾಧಿಕಾರಿ ರಜನಿ ಅವರು ಮಾತನಾಡಿ ಜಿಲ್ಲೆಯಲ್ಲಿ ಇದುವರೆಗೂ 73 ಪೋಕ್ಸೋ ಕೇಸ್‌ಗಳು ದಾಖಲಾಗಿದ್ದು, 73 ಪ್ರಕರಣಗಳಿಗೂ ಎಫ್.ಐ ಆರ್ ದಾಖಲಿಸಲಾಗಿದೆ. ಒಟ್ಟು ಎಂಟು ಬಾಲ್ಯ ವಿವಾಹಗಳನ್ನು ತಡೆಗಟ್ಟಿದ್ದು ಎಫ್.ಐ.ಆರ್ ದಾಖಲಿಸಲಾಗಿದೆ ಎಂದರು.

ಕರ್ನಾಟಕ ಆರ್ಯವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಡಿ ಫಲಾನುಭವಿಗಳ ಆಯ್ಕೆಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಆಯ್ಕೆ ಸಮಿತಿಯಿಂದ ಕೂಡಲೇ ಆಯ್ಕೆ ಕಾರ್ಯವನ್ನು ಪೂರ್ಣಗೊಳಿಸುವಂತೆ ತಿಳಿಸಿದರು.

ಜಿಲ್ಲಾಸ್ಪತ್ರೆ ಹಾಗೂ ತಾಲೂಕು ಆಸ್ಪತ್ರೆಗಳಲ್ಲಿ ಔಷಧಿಗೆ ಕೊರತೆಯಾದಂತೆ ಎಚ್ಚರ ವಹಿಸಬೇಕು ಹಾಗೂ ಕಡ್ಡಾಯವಾಗಿ ಪ್ರತಿ ಮೂರು ತಿಂಗಳಿಗೊಮ್ಮೆ ಆರೋಗ್ಯ ರಕ್ಷಾ ಸಮಿತಿ ಸಭೆ ನಡೆಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ನಿರಂಜನ್ ಅವರಿಗೆ ಜಿಲ್ಲಾ ಉಸ್ತುವಾರಿ ಸಚಿವರು ತಾಕೀತು ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ನಿಯಮಿತದ ಅಧ್ಯಕ್ಷರಾದ ಎಸ್. ಗಂಗಾಧರ್ ಅವರು ಪ್ರತಿ ಮೂರು ತಿಂಗಳಿಗೊಮ್ಮೆ ಆರೋಗ್ಯ ರಕ್ಷಾ ಸಮಿತಿಯ ಸಭೆ ನಡೆಸಲೇಬೇಕು. ಸಭೆ ನಡೆಯದಿದ್ದರೆ ಆರೋಗ್ಯ ಮಂತ್ರಿಗಳಿಗೆ ದೂರು ನೀಡಲಾಗುವುದು.

# ನರೇಗಾ ಇ– ಕೆವೈಸಿ ಅಭಿಯಾನದಲ್ಲಿ ಪಾಲ್ಗೊಳ್ಳಿ

## ಮಲ್ಲಯ್ಯ ಕೊರವನವರ ಮನವಿ / ಬಿಂಕದಕಟ್ಟಿ ಗ್ರಾಪಂಗೆ ಭೇಟಿ

ಗದಗ: ಮಹಾತ್ಮಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ನೋಂದಾಯಿತ ಕುಟುಂಬಗಳ ಜಾಬ್ಕಾರ್ಡ್‌ಗಳನ್ನು ಇ–ಕೆವೈಸಿ ಮೂಲಕ ಇಂಧೀಕರಿಸಲಾಗುತ್ತಿದ್ದು, ಎಲ್ಲ ನರೇಗಾ ಕೂಲಿ ಕಾರ್ಮಿಕರು ಈ ಅಭಿಯಾನದಲ್ಲಿ ಭಾಗವಹಿಸಿ ಕಡ್ಡಾಯವಾಗಿ ತಮ್ಮ ಜಾಬ್ಕಾರ್ಡ್ಗಳ ಇ–ಕೆವೈಸಿ ಮಾಡಿಕೊಳ್ಳಬೇಕು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಮಲ್ಲಯ್ಯ ಕೊರವನವರ ಮನವಿ ಮಾಡಿದರು.

ಬಧುವಾರ ತಾಲೂಕಿನ ಬಿಂಕದಕಟ್ಟಿ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಇ– ಕೆವೈಸಿ ಪ್ರಗತಿ ಪರಿಶೀಲನೆ ಮಾಡಿ ಅವರು ಮಾತನಾಡಿದರು. ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಆದೇಶ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳ ಸೂಚನೆಯಂತೆ ಜಿಲ್ಲೆಯಲ್ಲಿ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ನೋಂದಾಯಿತ ಸಕ್ರಿಯ ಕೂಲಿಕಾರರ

ಜಾಬ್ ಕಾರ್ಡ್ ಅನ್ನು ಇ–ಕೆವೈಸಿ ಮೂಲಕ ಮೌಲ್ಯೀಕರಿಸುತ್ತಿದ್ದು, ನರೇಗಾ ಯೋಜನೆಯಡಿ ತಾಲೂಕಿ ಎಲ್ಲಾ ಗ್ರಾಮ ಪಂಚಾಯಿತಿಗಳ

ಸಕ್ರಿಯ ಕುಟುಂಬಗಳ ಜಾಬ್ ಕಾರ್ಡ್ ಅಭಿಯಾನದ ಮಾದರಿಯಲ್ಲಿ ಅತೀ ತುರ್ತಾಗಿ ಇ–ಕೆವೈಸಿ ಮೂಲಕ ಪೂರ್ಣಗೊಳಿಸಲು ಸಿಬ್ಬಂದಿಗಳಿಗೆ ಅಗತ್ಯ ತರಬೇತಿಯನ್ನು ನೀಡಲಾಗಿದೆ ಎಂದರು. ತರಬೇತಿ ಪಡೆದ ಎಲ್ಲಾ ಸಿಬ್ಬಂದಿಗಳು ಜಾಬ್ ಕಾರ್ಡ್ ಗಳಿಗೆ ಇ–ಕೆವೈಸಿ ಮಾಡುವ ಪ್ರಕ್ರಿಯೆಯಲ್ಲಿ ತೊಡಗಿದ್ದು, ಇ–ಕೆವೈಸಿ ಪ್ರಕ್ರಿಯೆಯಲ್ಲಿ ಕೂಲಿಕಾರ್ಮಿಕರು ಕಡ್ಡಾಯವಾಗಿ ಪಾಲ್ಗೊಳ್ಳಬೇಕು ಮುಂದಿನ ದಿನಗಳಲ್ಲಿ ಇ–ಕೆವೈಸಿ ಮಾಡಿಕೊಳ್ಳದ ಜಾಬ್‌ಕಾರ್ಡ್‌ಗಳು ನಿಷ್ಕ್ರಿಯವಾಗುತ್ತವೆ. ಮಹಾತ್ಮಗಾಂಧಿ ನರೇಗಾ ಯೋಜನೆಯ ಹೆಚ್ಚು ಪಾರದರ್ಶಕ ಅನುಷ್ಠಾನಕ್ಕೆ ಮತ್ತೊಂದು ಹೆಜ್ಜೆ ಇ–ಕೆವೈಸಿ ಆಗಿದ್ದು, ನರೇಗಾ ಕೂಲಿಕಾರರು, ಕಾಯಕ ಬಂಧುಗಳು ತಮ್ಮ ಜಾಬ್ ಕಾರ್ಡ್‌ಗಳಿಗೆ ಇ–ಕೆವೈಸಿ ಅಪ್ಡೇಟ್ ಮಾಡಿಸಿಕೊಳ್ಳುವುದು ಕಡ್ಡಾಯವಾಗಿದೆ.

## ಒಂದೇ ಒಂದು ಕೈಗಾರಿಕೆಯೂ ರಾಜ್ಯದಿಂದ ಹೊರ ಹೋಗಿಲ್ಲ: ಸಚಿವ ಎಂ.ಬಿ.ಪಾಟೀಲ



**ಮೈಸೂರು :** ರಾಜ್ಯದಿಂದ ಒಂದೇ ಒಂದು ಕೈಗಾರಿ–ಕೆಯೂ ಹೊರಹೋಗಿಲ್ಲ. ಈ ವಿಚಾರವಾಗಿ ಹಬ್ಬಿಸುತ್ತಿರುವ ತಪ್ಪು ಕಲ್ಪನೆಯಿಂದ ಎಲ್ಲರೂ ಹೊರಬರಬೇಕಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಹೇಳಿದರು. ರಾಜ್ಯದಲ್ಲಿ ಕೈಗಾರಿಕೆಗಳ ಬೆಳವಣಿಗೆಗೆ ಅತ್ಯಗತ್ಯವಾದ ಕಾರ್ಯಪರಿಸರ ಅತ್ಯುತ್ತಮವಾಗಿದ್ದು, ಇಲ್ಲಿ ಅತ್ಯುತ್ತಮ ಪ್ರತಿಭಾ ಸಂಪನ್ಮೂಲವಿದೆ. ಜೊತೆಗೆ ಸರ್ಕಾರದ ಕೈಗಾರಿಕಾ ನೀತಿಗಳು ಚೆನ್ನಾಗಿವೆ ಎಂದು ಅವರು ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಬಂದ ಮೇಲೆ ಕಳೆದ ಫೆಬ್ರವರಿಯಲ್ಲಿ ಜಾಗತಿಕ ಹೂಡಿಕೆದಾರರ ಸಮಾವೇಶ ನಡೆಸಲಾಯಿತು. ಇದರ ಮೂಲಕ 10.27 ಲಕ್ಷ ಕೋಟಿ ರೂ. ಬಂಡವಾಳ ಹರಿದು ಬರುವ ಖಾತ್ರಿ ಸಿಕ್ಕಿತು. ಈ ಪೈಕಿ ಶೇ.60ಕ್ಕಿಂತ ಹೆಚ್ಚು ಬಂಡವಾಳ ಈಗಾಗಲೇ ನಮ್ಮಲ್ಲಿ ಹೂಡಿಕೆ ಮಾಡಲ್ಪಟ್ಟಿದೆ. ನಾವು ಬರೀ ಮಾತನಾಡುವುದಿಲ್ಲ. ನುಡಿದಂತೆ ನಡೆಯುತ್ತಿದ್ದೇವೆ. ಈ ಹೂಡಿಕೆಗಳಿಂದ ಸಾವಿರಾರು ಸಂಖ್ಯೆಯಲ್ಲಿ ಉದ್ಯೋಗಗಳೂ ಸೃಷ್ಟಿಯಾಗುತ್ತಿವೆ ಎಂದು ಅವರು ವಿವರಿಸಿದರು.

ನಾನು ಕೈಗಾರಿಕಾ ಸಚಿವನಾದ ಮೇಲೆ ಹಲವು ದೇಶಗಳಿಗೆ ಭೇಟಿ ಕೊಟ್ಟು, ಹೂಡಿಕೆದಾರರನ್ನು ರಾಜ್ಯಕ್ಕೆ ಕರೆತರುತ್ತಿದ್ದೇನೆ. ಫಾಕ್ ಸಕಾನ್ ತರಹದ ದೈತ್ಯ ಕಂಪನಿಯು ತೈವಾನ್ ನಂತರದ ತನ್ನ ಬೃಹತ್ ಘಟಕವನ್ನು ನಮ್ಮಲ್ಲಿ ಆರಂಭಿಸಿದೆ. ಇಲ್ಲಿಂದ ದುಬಾರಿ ಮೊಬೈಲ್ ಫೋನುಗಳು ರಫ್ತಾಗಿ ಹೋಗುತ್ತವೆ ಎಂದರು.

## ಮೆಸ್ಕಾಂನಿಂದ ಮುನ್ಸೂಚನೆ

**ಚಿಕ್ಕಮಗಳೂರು,ಅ.30:** ಜಿಲ್ಲೆಯ ತರೀಕೆರೆ ತಾಲ್ಲೂಕು ನಂದಿಹೊಸಹಳ್ಳಿ ಗ್ರಾಮದಲ್ಲಿ ಸ್ಥಾಪನೆಯಾಗುತ್ತಿರುವ ಉದ್ದೇಶಿತ 2ಘ8 ಎಂವಿಎ, 66/11 ಕೆ.ವಿ. ಹೊಸ ವಿದ್ಯುತ್ ಉಪಕೇಂದ್ರ ಸಂಪರ್ಕಿಸಲು ಹಾಲಿಯಿರುವ 66 ಕೆ.ವಿ. ಚಿಕ್ಕಮಗಳೂರು – ಲಿಂಗದಹಳ್ಳಿ ಪ್ರಸರಣ ಮಾರ್ಗದಿಂದ ಸುಮಾರು 2.05 ಕಿ.ಮೀ. ಉದ್ದದ ಪ್ರಸರಣ ಮಾರ್ಗಕ್ಕೆ ಕೋಯಾಟ್ ವಾಹಕವನ್ನು ಬಳಸಿ ನಿರ್ಮಿಸುವ ಕಾಮಗಾರಿಯು ಪೂರ್ಣಗೊಂಡಿದ್ದು, ಈ ಪ್ರಸರಣ ಮಾರ್ಗವು ಹೊಸಹಳ್ಳಿ ಮತ್ತು ನಂದಿ ಗ್ರಾಮದ ಸರಹದ್ದಿನ ಮುಖಾಂತರ ಹಾದು ಹೋಗುತ್ತಿದೆ.

ಅಕ್ಟೋಬರ್ 31 ರಂದು ಅಥವಾ ನಂತರದ ದಿನಗಳಲ್ಲಿ ಯಾವುದೇ ಕ್ಷಣದಲ್ಲಿಯಾದರೂ ಈ ಮಾರ್ಗವನ್ನು ಚಾಲನೆಗೊಳಿಸಲಾಗುವುದು. ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಈ ಮಾರ್ಗದಲ್ಲಿ ಬರುವ ಗೋಪುರಗಳನ್ನು ಹತ್ತುವುದಾಗಲಿ, ದನಕರುಗಳನ್ನು ಕಟ್ಟುವುದಾಗಲಿ, ವಾಹಕಗಳಿಗೆ ತಗುಲುವಂತೆ ವಸ್ತುಗಳನ್ನು ಎಸೆಯುವುದಾಗಲಿ ನಿಷೇಧಿಸಲಾಗಿದೆ ಹಾಗೂ ಈ ಕೃತ್ಯದಿಂದ ಉಂಟಾಗುವ ಪರಿಣಾಮಗಳಿಗೆ ಆಯಾ ವ್ಯಕ್ತಿಗಳೇ ನೇರ ಹೊಣೆಗಾರರಾಗುತ್ತಾರೆ ಎಂದು ನಗರದ ಕವಿಪ್ರನಿನಿ ಯೋಜನೆಗಳ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್‌ರವರು (ಕೆಪಿಟಿಸಿಎಲ್) ನೀಡಿರುವ ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಒಂದು ವೇಳೆ ನಿಯಮ ಉಲ್ಲಂಘಿಸಿ ವಿದ್ಯುತ್ ಅನಾಹುತ ಸಂಭವಿಸಿದಲ್ಲಿ ಆಯಾ ನೇರ ಹೊಣೆಗಾರರಾಗುತ್ತಾರೆ. ಕವಿಪ್ರನಿನಿಯು ಯಾವುದೇ ಜವಾಬ್ದಾರಿಯಾಗಿರುವುದಿಲ್ಲ ಹಾಗೂ ಪರಿಹಾರವನ್ನು ನೀಡಲಾಗುವುದಿಲ್ಲವೆಂದು ಅವರು ತಿಳಿಸಿದ್ದಾರೆ.

## ಭಾರತದಲ್ಲಿ ರೂ. 100 ಕೋಟಿ ಹೂಡಿಕೆಗೆ ಆಮ್ವೇ ನಿರ್ಧಾರ



**ಬಳ್ಳಾರಿ:** ಮುಂದಿನ ಮೂರರಿಂದ ಐದು ವರ್ಷಗಳಲ್ಲಿ ಭಾರತದಲ್ಲಿ 100 ಕೋಟಿ ರೂಪಾಯಿ ಹೂಡಿಕೆ ಮಾಡಲು ಆಮ್ವೇ ನಿರ್ಧರಿಸಿದೆ ಎಂದು ಆಮ್ವೇ ಅಧ್ಯಕ್ಷ ಮತ್ತು ಸಿಇಒ ಮೈಕೆಲ್ ನೆಲ್ಸನ್ ಪ್ರಕಟಿಸಿದ್ದಾರೆ.

ಭಾರತದಲ್ಲಿ ಉತ್ಪಾದನೆ ಆರಂಭಿಸಿ ಹತ್ತು ವರ್ಷ ಪೂರ್ಣಗೊಂಡ ಹಿನ್ನೆಲೆಯಲ್ಲಿ ಭಾರತಕ್ಕೆ ಭೇಟಿ ನೀಡಿದ ಅವರು, ಆಮ್ವೇ ಬ್ಯುಸಿನೆಸ್ ಮಾಲೀಕರು/ ವಿತರಕ ಸಾಮರ್ಥ್ಯಗಳನ್ನು ಮತ್ತಷ್ಟು ಹೆಚ್ಚಿಸುವುದು, ತನ್ನ ಭೌತಿಕ ಉಪಸ್ಥಿತಿಯನ್ನು ಬಲಪಡಿಸುವುದು ಮತ್ತು ವಿಸ್ತರಿಸುವುದು ಹಾಗೂ ಗ್ರಾಹಕ ಅನುಭವವನ್ನು ಮತ್ತಷ್ಟು ಹೆಚ್ಚಿಸುವ ಉದ್ದೇಶ ಹೊಂದಿದೆ ಎಂದು ಹೇಳಿದ್ದಾರೆ.

ಸಂಸ್ಥೆಯ ಭೌತಿಕ ಉಪಸ್ಥಿತಿಯನ್ನು ವಿಸ್ತರಿಸಲು ಮತ್ತು ಚೌಕಟ್ಟು ಮರುವಿನ್ಯಾಸ, ವಿಶೇಷ ತರಬೇತಿ ವಲಯಗಳು ಮತ್ತು ಸುಧಾರಿಸಿದ ಸೇವಾ ಅಭುಭವಗಳ ಜೊತೆಯಲ್ಲಿ ಪ್ರಸ್ತುತ ಮಳಿಗೆಗಳನ್ನು ಸಮಯ ಕಳೆಯುವ ಡೈನಾಮಿಕ್ ಹಬ್‌ಗಳಾಗಿ ಬದಲಾಯಿಸುವ ಮೂಲಕ ವಿತರಕ ಮತ್ತು ಗ್ರಾಹಕ ಅನುಭವವನ್ನು ಉತ್ತಮಗೊಳಿಸುವ ನಿಟ್ಟಿನಲ್ಲಿ ಹೂಡಿಕೆ ಮಾಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಮೇಕ್ ಇನ್ ಇಂಡಿಯಾ ದೃಷ್ಟಿಕೋನದಡಿ ಭಾರತ ವಿಕಸಿತ ಭಾರತದೆಡೆಗೆ ದಾಪುಗಾಲು ಹಾಕುತ್ತಿರುವ ಹಿನ್ನೆಲೆಯಲ್ಲಿ ಸ್ಥಳೀಯ ಉಪಸ್ಥಿತಿಯನ್ನು ಬಲಪಡಿಸುವ ಮೂಲಕ ಮತ್ತು ಜನರು ಹಾಗೂ ನಾವೀನ್ಯತೆಯಲ್ಲಿ ಹೂಡಿಕೆ ಮಾಡುವ ಮೂಲಕ ಈ ಪರಿವರ್ತನಾ ಪ್ರಯಾಣದಲ್ಲಿ ಕೊಡುಗೆ ನೀಡಲು ಬಹಳ ಹೆಮ್ಮೆ ಪಡುತ್ತೇವೆ ಎಂದು ಆಮ್ವೇ ಇಂಡಿ–ಯಾದ ವ್ಯವಸ್ಥಾಪಕ ನಿರ್ದೇಶಕರಾಗಿರುವ ರಜನೀಶ್ ಚೋಪ್ರಾ ವಿವರಿಸಿದ್ದಾರೆ.

## ಅತಿಥಿ ಶಿಕ್ಷಕಿಯ ಮೇಲೆ ಹಲ್ಲೆ : ಆರೋಪಿಗಳ ವಿರುದ್ಧ ಕ್ರಮಕ್ಕೆ ಒತ್ತಾಯ

**ಚಿಕ್ಕಮಗಳೂರು:** ಜಿಲ್ಲೆಯ ಕೊಪ್ಪ ತಾಲೂಕಿನಲ್ಲಿ ಅಮಾನವೀಯ ಘಟನೆ ನಡೆದಿದೆ. ಸರ್ಕಾರಿ ಶಾಲೆಯ ಅತಿಥಿ ಶಿಕ್ಷಕಿಯೊಬ್ಬರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ್ದಲ್ಲದೆ, ಅವರನ್ನು ವಿವಸ್ತ್ರಗೊಳಿಸಿ ಮರಕ್ಕೆ ಕಟ್ಟಿಹಾಕಲಾಗಿದೆ. ಕೊಪ್ಪ ತಾಲೂಕಿನ ಜಯಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದ ಈ ಘಟನೆಯಲ್ಲಿ, ಸರ್ಕಾರಿ ಶಾಲೆಯ ಅತಿಥಿ ಶಿಕ್ಷಕಿ(25 ವರ್ಷ ವಯಸ್ಸು) ಶಾಲೆ ಮುಗಿಸಿ ಮನೆಗೆ ವಾಪಸ್ಸಾಗುತ್ತಿದ್ದಾಗ ಅವರ ಮೇಲೆ ದುಷ್ಕರ್ಮಿಗಳು ಮಾರಣಾಂತಿಕ ಹಲ್ಲೆ ಮಾಡಿದ್ದಾರೆ. ಅಷ್ಟೇ ಅಲ್ಲದೆ ನಗ್ನಗೊಳಿಸಿರುವ ಆರೋಪ ಕೇಳಿಬಂದಿದೆ.

ಶಿಕ್ಷಕಿಯ ಕೂಗಾಟ ಕೇಳಿ ಸ್ಥಳಕ್ಕೆ ಧಾವಿಸಿದ ಮನೆಯವರು ಮತ್ತು ಸ್ಥಳೀಯರು ಆಕೆಯನ್ನು ರಕ್ಷಿಸಿದ್ದಾರೆ. ತೀವ್ರವಾಗಿ ಗಾಯಗೊಂಡಿರುವ ಶಿಕ್ಷಕಿಯನ್ನು ಮೊದಲು ಕೊಪ್ಪ ಆಸ್ಪತ್ರೆಗೆ ದಾಖಲಿಸಲಾಗಿತ್ತು. ನಂತರ ಹೆಚ್ಚಿನ ಚಿಕಿತ್ಸೆಗಾಗಿ ಶಿವಮೊಗ್ಗದ ಮೆಗ್ಗಾನ್ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ.

# ಇಂಗ್ಲೀಷ್ ಭಾಷಾ ಪ್ರೌಢಿಮೆ ಹೊಂದಿದ್ದರೆ ಐಎಎಸ್, ಐಪಿಎಸ್ ಕಷ್ಟವಾಗದು: ಜಿ. ಬಿ. ವಿನಯ್ ಕುಮಾರ್

**ದಾವಣಗೆರೆ:** ಇಂಗ್ಲೀಷ್ ಭಾಷೆ ಬರುವುದಿಲ್ಲ ಎಂಬ ಕಾರಣಕ್ಕೆ ಎಷ್ಟೋ ವಿದ್ಯಾರ್ಥಿಗಳು ಐಎಎಸ್, ಐಪಿಎಸ್ ನಂಥ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಗಳಿಸಲು ಸಾಧ್ಯವಾಗುತ್ತಿಲ್ಲ. ಇಂಗ್ಲೀಷ್ ಭಾಷಾ ಪ್ರೌಢಿಮೆ ಹೊಂದಿದರೆ ಉನ್ನತ ಹುದ್ದೆ ಅಲಂಕರಿಸಲು ಕಷ್ಟವಾಗದು. ಹಾಗಾಗಿ, ಇಂಗ್ಲೀಷ್ ಕಬ್ಬಿಣದ ಕಡಲೆ ಅಲ್ಲ. ಕಲಿಯಲು ಆಸಕ್ತಿ ಬೇಕು ಅಷ್ಟೇ ಎಂದು ಇನ್ ಸೈಟ್ಸ್ ಸಂಸ್ಥೆ ಸಂಸ್ಥಾಪಕ ನಿರ್ದೇಶಕ ಜಿ. ಬಿ. ವಿನಯ್ ಕುಮಾರ್ ಅಭಿಪ್ರಾಯಪಟ್ಟರು.

ಜಿಲ್ಲೆಯ ಹರಿಹರ ತಾಲೂಕಿನ ಶ್ರೀಮತಿ ಗಿರಿಯಮ್ಮ ಆರ್. ಕಾಂತಪ್ಪ ಶ್ರೇಷ್ಠಿ ಮಹಿಳಾ ಪ್ರಥಮ ಮತ್ತು ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿ ಹಾಗೂ ಇನ್ ಸೈಟ್ಸ್ ಐಎಎಸ್ ಸಂಸ್ಥೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಐಎಎಸ್, ಕೆಎಎಸ್ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿ ಕುರಿತು ಮಾರ್ಗದರ್ಶನ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿ ಹಾಗೂ ಮಾರ್ಗದರ್ಶಕರಾಗಿ ಪಾಲ್ಗೊಂಡು ಅವರು ಮಾತನಾಡಿದರು. ಯಾರೂ ಸಂಪನ್ಮೂಲ ಬಳಸಿಕೊಳ್ಳುತ್ತಾರೋ ಅವರಿಗೆ ಯಶಸ್ಸು ಬೇಗ ಸಿಗುತ್ತದೆ. ನಮ್ಮ ಕಣ್ಣುಂದೆ ಇರುವ ಅವಕಾಶಗಳನ್ನು ಯಾವುದೇ ಕಾರಣಕ್ಕೂ ಬಿಡಬಾರದು. ಇಂಗ್ಲೀಷ್ ಬರಲ್ಲ ಎಂಬ ಕೀಳರಿಮೆಯಿಂದ ಹೊರ ಬನ್ನಿ. ತುಂಬಾ ವಿದ್ಯಾರ್ಥಿಗಳು ಇಂಗ್ಲೀಷ್ ಭಾಷೆ ಕಲಿಯಲ್ಲ,



ನಾನು ಇದರಲ್ಲಿ ದುರ್ಬಲವಾಗಿದ್ದೇನೆಂದುಕೊಂಡು ಸುಮ್ಮನಾಗಿಬಿಡುತ್ತಾರೆ. ಸ್ಪರ್ಧಾತ್ಮಕ ಪರೀಕ್ಷೆ ತೆಗೆದು–ಕೊಂಡರೂ ಯಶ ಸಾಧಿಸಲು ಆಗದು ಎಂದು ತಿಳಿಸಿದರು. ಇಂದಿನ ದಿನಗಳಲ್ಲಿ ಒಂದೂ ದಿನ ಹಳ್ಳಿ ನೋಡದವರು, ಜೀವನ ಸಾಗಿಸದೇ ಇರುವವರು, ಹಸಿವು, ಅವಮಾನ ಅನುಭವಿಸದೇ ಇರುವವರು ಅಧಿಕಾರಕ್ಕೆ ಬರುತ್ತಾರೆ. ಅಧಿಕಾರ ಸಿಕ್ಕಾಗ ನಿಮ್ಮ ಕೈಗೆ ಸಿಗಲ್ಲ. ಇಂಥ ಪರಿಸ್ಥಿತಿಯಲ್ಲಿ ನಾವಿದ್ದೇವೆ. ಸರ್ಕಾರದ ಅನುಕೂಲ ಸೌಲಭ್ಯ ಮತ್ತು ಹಕ್ಕು ಪಡೆಯಲು ನಿಮ್ಮನ್ನು ಕಾಡಿಸುತ್ತಾರೆ. ನೀವು ಉನ್ನತ ಸ್ಥಾನಕ್ಕೆ ಬಂದರೆ ಇನ್ನೊಬ್ಬರ ಮುಂದೆ ಅಪಮಾನ ಎದುರಿಸುವ, ಗುಲಾಮಗಿರಿಯಂತೆ ಬದುಕುವ ಪ್ರಮೇಯವೇ ಎದುರಾಗದು ಎಂದು ತಿಳಿಸಿದರು.

ಎಸ್ಸಿ, ಎಸ್ಟಿ, ಒಬಿಸಿ, ಅಲ್ಪಸಂಖ್ಯಾತರಿಗೆ ಐಎಎಸ್ ಓದಲು ಸರ್ಕಾರವೇ ನೆರವು ನೀಡುತ್ತದೆ. ಪ್ರತಿತಿಂಗಳೂ ಹಣ ನಿಗದಿಪಡಿಸಿ ಕೊಡುತ್ತದೆ. ಹಾಗಾಗಿ, ಇದರ ಸೌಲಭ್ಯ ಪಡೆದುಕೊಳ್ಳಿ. ನಮ್ಮ ಸಂಸ್ಥೆಗೆ ಬಂದರೆ ಎಸ್ಸಿ, ಎಸ್ಟಿ, ಬಡವರು, ಆರ್ಥಿಕವಾಗಿ ದುರ್ಬಲವಾಗಿರುವವರಿಗೆ ಉಚಿತವಾಗಿ ಕೋಚಿಂಗ್ ನೀಡುತ್ತೇವೆ. ಇದಕ್ಕೆ ಸುಮಾರು ಒಂದೂವರೆ ಲಕ್ಷ ರೂಪಾಯಿ ವೆಚ್ಚ ತಗುಲುತ್ತದೆ. ಇದುವರೆಗೆ ನೂರಾರು ಬಡ ವಿದ್ಯಾರ್ಥಿಗಳಿಗೆ ಫ್ರೀಯಾಗಿ ಕೋಚಿಂಗ್ ನೀಡುತ್ತಿದ್ದೇವೆ. ನಿಮ್ಮ ಕೈಯಲ್ಲಾದಷ್ಟು ಶುಲ್ಕ ಪಾವತಿಸಿ. ಅತಿ ಕಡಿಮೆ ವೆಚ್ಚದಲ್ಲಿ ಕೋಚಿಂಗ್ ನೀಡುತ್ತೇವೆ ಎಂದು ವಿನಯ್ ಕುಮಾರ್ ಅವರು ಭರವಸೆ ನೀಡಿದರು. ರೀಲ್ಸ್ ನೋಡುವುದು, ಬಿಗ್ ಬಾಸ್ ಸೇರಿದಂತೆ ಹೆಚ್ಚಿನ ಮನರಂಜನೆಗೆ ಆದ್ಯತೆ ನೀಡುತ್ತಾ–ರೆ. ಇಷ್ಟೇ ಸಮಯವನ್ನು ಓದಿನತ್ತ, ಪುಸ್ತಕಗಳ ಅಧ್ಯಯನ ಬಗ್ಗೆ ಸಮಯ ನೀಡಿ. ಮನರಂಜನೆಗೆ ಕಡಿಮೆ ಅವಧಿ ಕೊಟ್ಟು ಓದಿನತ್ತ ಹೆಚ್ಚಿನ ಗಮನ ಕೊಡಿ ಎಂದು ಅವರು ಸಲಹೆ ನೀಡಿದರು.

ಕಾಲೇಜಿನ ಪ್ರಾಂಶುಪಾಲ ಡಾ. ಶ್ರೀನಿವಾಸ್ ಅಜ್ಜೂರು ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಡಿಎಸ್ಎಸ್ ಸಂಚಾಲಕ ಪಿ. ಜೆ. ಮಹಾಂತೇಶ್, ಸಮಾಜ ಸೇವಕ ಬಿ. ಮಗ್ದುಮ್, ಬಟ್ಟಲಕಟ್ಟೆಯ ಪರಶುರಾಮ್, ಬೋಧಕ ಬೋಧ–ಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಹಾಜರಿದ್ದರು. ಇದೇ ವೇಳೆ ಜಿ. ಬಿ. ವಿನಯ್ ಕುಮಾರ್ ಅವರನ್ನು ಸನ್ಮಾನಿಸಲಾಯಿತು.

## ಅಯೋಧ್ಯೆ ರಾಮಮಂದಿರಕ್ಕೆ ದೇಶ– ವಿದೇಶಗಳಿಂದ ಸಾರ್ವಜನಿಕರಿಂದ 3,000 ಕೋಟಿ ರೂ. ದೇಣಿಗೆ

**ಅಯೋಧ್ಯಾ:** ರಾಮ ಮಂದಿರ ನಿರ್ಮಾಣಕ್ಕಾಗಿ ದೇಶ– ವಿದೇಶಗಳಿಂದ ಜನರು 3,000 ಕೋಟಿ ರೂ. ಗಳಿಗೂ ಹೆಚ್ಚು ದೇಣಿಗೆ ನೀಡಿದ್ದಾರೆ. ಅಯೋಧ್ಯೆ ರಾಮ ಮಂದಿರ ದೇವಾಲಯ ಯೋಜನೆಯ ಉಳಿದಿರುವ ಕಾಮಗಾರಿಗಳ ಒಟ್ಟು ವೆಚ್ಚ ಸುಮಾರು 1,800 ಕೋಟಿ ರೂ. ಎಂದು ಅಂದಾಜಿಸಲಾಗಿದೆ. ಇಲ್ಲಿಯವರೆಗೆ ಸುಮಾರು 1,500 ಕೋಟಿ ರೂ. ಗಳ ಬಿಲ್ಲಿಂಗ್ ಕಾರ್ಯಗಳು ಪೂರ್ಣಗೊಂಡಿದೆ ಎಂದು ರಾಮ ಮಂದಿರ ನಿರ್ಮಾಣ ಸಮಿತಿ ಅಧ್ಯಕ್ಷ ನೃಪೇಂದ್ರ ಮಿಶ್ರಾ ಬುಧವಾರ ತಿಳಿಸಿದ್ದಾರೆ.

ಅಯೋಧ್ಯೆ ರಾಮ ಮಂದಿರ ನಿರ್ಮಾಣಕ್ಕಾಗಿ 2022ರಲ್ಲಿ ದೇಣಿಗೆ ಸಂಗ್ರಹ ಕಾರ್ಯವನ್ನು ಆರಂಭಿಸಲಾಗಿತ್ತು. ಈ ಹಣಕಾಸು ಅಭಿಯಾನವನ್ನು ಪ್ರಾರಂಭಿಸಿದಾಗಿನಿಂದ ದೇಶಾದ್ಯಂತ ಜನರು ಉದಾರವಾಗಿ ಹಣವನ್ನು



ದಾನವಾಗಿ ನೀಡಿದ್ದಾರೆ ಎಂದು ಅವರು ತಿಳಿಸಿದರು. ದೇವಾಲಯದ ನಿರ್ಮಾಣಕ್ಕೆ ಇಲ್ಲಿಯವರೆಗೆ ಸುಮಾರು 1,500 ಕೋಟಿ ರೂ. ಗಳನ್ನು ಖರ್ಚು ಮಾಡಲಾಗಿದೆ. ಇನ್ನು ದೇವಾಲಯ ಸಂಕೀರ್ಣದಾದ್ಯಂತ ಉಳಿದ ಕೆಲಸಗಳನ್ನು ಪೂರ್ಣಗೊಳಿಸಲು 1,800 ಕೋಟಿ ರೂ. ಗಳಷ್ಟು ಅಂದಾಜು ವೆಚ್ಚವಾಗಲಿದೆ ಎಂದು ಅವರು ಹೇಳಿದರು.

ರಾಮ ಮಂದಿರದ ಆವರಣದಲ್ಲಿ ನವೆಂಬರ್ 25ರಂದು ದೇವಾಲಯದ ಶಿಖರದ ಮೇಲಿನ ಧ್ವಜಾರೋಹಣ ಸಮಾರಂಭ ನಡೆಯಲಿದೆ. ಈ ಸಮಾರಂಭಕ್ಕೆ ಎಲ್ಲಾ ದಾನಿಗಳನ್ನು ಆಹ್ವಾನಿಸಲಾಗುವುದು ಎಂದು ನೃಪೇಂದ್ರ ಮಿಶ್ರಾ ಹೇಳಿದರು.

ಧ್ವಜಾರೋಹಣ ಸಮಾರಂಭದಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಮುಖ್ಯ ಅತಿ–ಥಿಯಾಗಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಅವರು 70 ಎಕರೆ ವಿಸ್ತೀರ್ಣದ ದೇವಾಲಯ ಸಂಕೀರ್ಣದಲ್ಲಿರುವ ಶೇಷಾವತಾರ ದೇವಾಲಯ, ಕುಬೇರ ತಿಲ ಮತ್ತು ಸಪ್ತ ಮಂಟಪಕ್ಕೂ ಭೇಟಿ ನೀಡುವ ಸಾಧ್ಯತೆ ಇದೆ ಎಂದು ಅವರು ತಿಳಿಸಿದರು.

## ಬಹುಮಹಡಿ ಕಟ್ಟದಲ್ಲಿ 17 ಮಕ್ಕಳನ್ನು ಒತ್ತೆಯಾಳಾಗಿರಿಸಿಕೊಂಡ ವ್ಯಕ್ತಿ

**ಮುಂಬೈ:** ಪೊವೈ ಅಪಾರ್ಟ್‌ಮೆಂಟ್ ಒಂದರಲ್ಲಿ ವ್ಯಕ್ತಿಯೊಬ್ಬ ಕನಿಷ್ಠ 17 ಮಕ್ಕಳನ್ನು ಒತ್ತೆಯಾಳಾಗಿರಿಸಿಕೊಂಡಿದ್ದ ಎಂಬ ಆಘಾತಕಾರಿ ಮಾಹಿತಿ ಹೊರ ಬಿದ್ದಿದೆ. ಸದ್ಯ ಮಕ್ಕಳನ್ನು ರಕ್ಷಿಸಲಾಗಿದೆ. ಘಟನೆಗೂ ಮುನ್ನ ಬಿಡುಗಡೆಯಾದ ವೀಡಿಯೊ ಸಂದೇಶದಲ್ಲಿ ರೋಹಿತ್ ಆರ್ಯ ಎಂದು ಗುರುತಿಸಿಕೊಂಡಿದ್ದ ವ್ಯಕ್ತಿ, ಅಪರಿಚಿತ ಜನರೊಂದಿಗೆ ಸಂಭಾಷಣೆ ನಡೆಸಲು ಆತ್ಮಹತ್ಯೆ ಮಾಡಿಕೊಳ್ಳುವ ಬದಲು ಒತ್ತೆಯಾಳುಗಳನ್ನು ತೆಗೆದುಕೊಳ್ಳುವುದನ್ನು ಆರಿಸಿಕೊಂಡಿದ್ದೇನೆ ಎಂದು ಹೇಳಿದ್ದಾನೆ. "ನಾನು ರೋಹಿತ್ ಆರ್ಯ. ಆತ್ಮಹತ್ಯೆಯಿಂದ ಸಾಯುವ ಬದಲು, ನಾನು ಒಂದು ಯೋಜನೆಯನ್ನು ರೂಪಿಸಿದ್ದೇನೆ ಮತ್ತು ಇಲ್ಲಿ ಕೆಲವು ಮಕ್ಕಳನ್ನು ಒತ್ತೆಯಾಳುಗಳಾಗಿ ಇರಿಸಿದ್ದೇನೆ" ಎಂದು ಹೇಳಿದ್ದ.

ಅಷ್ಟೇ ಅಲ್ಲದೇ, "ನಿಮ್ಮಿಂದ ಬರುವ ಸಣ್ಣದೊಂದು ತಪ್ಪು ನಡೆಯೂ ನನ್ನನ್ನು ಪ್ರಚೋದಿಸುತ್ತದೆ" ಎಂದು ಆತ ಎಚ್ಚರಿಸಿದ್ದ. ಸ್ಥಳಕ್ಕೆ ಬೆಂಕಿ ಹಚ್ಚುವುದಾಗಿ ಬೆದರಿಕೆ ಹಾಕಿದ್ದ. ನನಗೆ ಸರಳ ಸಂಭಾಷಣೆಗಳು ಬೇಕು, ಅದಕ್ಕಾ–ಗಿಯೇ ನಾನು ಈ ಮಕ್ಕಳನ್ನು ಒತ್ತೆಯಾಳಾಗಿ



ಇರಿಸಿಕೊಂಡಿದ್ದೇನೆ. ನಾನು ಅವರನ್ನು ಒಂದು ಯೋಜನೆಯ ಭಾಗವಾಗಿ ಒತ್ತೆಯಾಳಾಗಿ ಇರಿಸಿದ್ದೇನೆ. ನಾನು ಬದುಕಿದ್ದರೆ, ನಾನು ಅದನ್ನು ಮಾಡುತ್ತೇನೆ; ನಾನು ಸತ್ತರೆ, ಬೇರೆ ಯಾರಾದರೂ ಮಾಡುತ್ತಾರೆ, ಆದರೆ ಅದು ಖಂಡಿತವಾಗಿಯೂ ಸಂಭವಿಸುತ್ತದೆ ಏಕೆ–ಂದರೆ ನಿಮ್ಮ ಸಣ್ಣದೊಂದು ತಪ್ಪು ನಡೆಯು ನನ್ನನ್ನು ಈ ಇಡೀ ಸ್ಥಳಕ್ಕೆ ಬೆಂಕಿ ಹಚ್ಚಿ ಅದರಲ್ಲೇ ಸಾಯುವಂತೆ ಮಾಡುತ್ತದೆ" ಎಂದು ಆರ್ಯ ವೀಡಿಯೊದಲ್ಲಿ ಹೇಳಿದ್ದ.

ಈ ವಿಡಿಯೋ ಪೊಲೀಸರನ್ನು ತಲುಪಿದ ತಕ್ಷಣವೇ ಇಡೀ ಕಟ್ಟಡವನ್ನು ಸುತ್ತುವರಿದು ಕಾರ್ಯಾಚರಣೆ ಪ್ರಾರಂಭಿಸಲಾಯಿತು. ಕೂಡಲೇ ಪೊಲೀಸರು 17 ಮಕ್ಕಳನ್ನು ರಕ್ಷಿಸಿದ್ದಾರೆ. ಸದ್ಯ ಆತನನ್ನು ಬಂಧಿಸಲಾಗಿದೆ. ಆತ ಯಾವ ಉದ್ದೇಶದಿಂದ ಈ ಕೃತ್ಯವೆಸಗಿದ್ದಾನೆ ಎಂದು ತನಿಖೆ ನಡೆಯುತ್ತಿದೆ.

ಪ್ರತ್ಯೇಕ ಪ್ರಕರಣದಲ್ಲಿ ಮಧ್ಯಪ್ರದೇಶದಲ್ಲಿ 27 ವರ್ಷದ ವ್ಯಕ್ತಿಯೋರ್ವ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರಾಯ್‌ಗಢ ಜಿಲ್ಲೆಯ 27 ವರ್ಷದ ವ್ಯಕ್ತಿಯೊಬ್ಬ ತನ್ನ ಪತ್ನಿ ಮತ್ತು ಅತ್ತೆಯ ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಿ ವಿಡಿಯೋ ರೆಕಾರ್ಡ್ ಮಾಡಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರವಿ ಕಶ್ಯಪ್ ಭಾನುವಾರ ಬಿಯೋರಾ ಪಟ್ಟಣದ ತಮ್ಮ ಮನೆಯಲ್ಲಿ ಫ್ಯಾನ್ ಸೀಲಿಂಗ್‌ಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸರು ಸೋಮವಾರ ತಿಳಿಸಿದ್ದಾರೆ.

ಕಶ್ಯಪ್ ತನ್ನ ಮೊಬೈಲ್ ಫೋನ್‌ನಲ್ಲಿ ಚಿತ್ರೀಕರಿಸಿದ ವೀಡಿಯೊದಲ್ಲಿ ಪತ್ನಿ ಮತ್ತು ಅತ್ತೆ ಮೇಲೆ ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿಸಿರುವುದಾಗಿ ಬಿಯೋರಾ ನಗರ ಪೊಲೀಸ್ ಠಾಣೆಯ ಉಸ್ತುವಾರಿ ವೀರೇಂದ್ರ ಧಕಡ್ ಹೇಳಿದ್ದಾರೆ.

ತನಿಖೆಯ ನಂತರ ಮುಂದಿನ ಕಾನೂನು ಕ್ರಮ ಜರುಗಿಸಲಾಗುವುದು ಎಂದರು. ಸಾಮಾಜಿಕ ಜಾಲತಾಣಗಳಲ್ಲಿ ಈ ವಿಡಿಯೋ ವೈರಲ್ ಆಗಿದ್ದು, ತನ್ನ ಹೆಂಡತಿ ಪ್ರತಿ ಹದಿನೈದು ದಿನಗಳಿಗೊಮ್ಮೆ ತವರು ಮನೆಗೆ ಹೋಗುತ್ತಾಳೆ. ಹಿಂದಿರುಗಿದ ನಂತರ ನನ್ನ ಕುಟುಂಬದೊಂದಿಗೆ ಜಗಳವಾಡುತ್ತಾಳೆ. ಅತ್ತೆ ಕೂಡಾ ತನಗೆ ಮಾನಸಿಕ ಕಿರುಕುಳ ನೀಡುತ್ತಿದ್ದಾರೆ.

## ಡಿಸಿಗೂ ತಟ್ಟಿದ್ದ ಸೈಬರ್ ಕಳ್ಳರ ಕಾಟ; ಜಿಲ್ಲಾಧಿಕಾರಿ ಹೆಸರಿನಲ್ಲಿ ನಕಲಿ ವಾಟ್ಸ್‌ಆಪ್ ಖಾತೆಗಳನ್ನು ಸೃಷ್ಟಿಸಿ ಹಣಕ್ಕೆ ಬೇಡಿಕೆ

**ಯಾದಗಿರಿ:** ಇತ್ತೀಚಿನ ದಿನಗಳಲ್ಲಿ ಸೈಬರ್ ಕ್ರೈಂ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಲೇ ಇದೆ. ರಾಜಕೀಯ ನಾಯಕರು, ಸಿನಿಮಾ ತಾ–ರೆಯರು ಹಾಗೂ ಅಧಿಕಾರಿಗಳು ಹೆಸರಿನಲ್ಲಿ ನಕಲಿ ಸಾಮಾಜಿಕ ಜಾಲತಾಣ ಖಾತೆಗಳನ್ನು ಸೃಷ್ಟಿಸಿ ಹಣಕ್ಕೆ ಬೇಡಿಕೆ ಇಡುತ್ತಿರುವ ಪ್ರಕರಣಗಳು ಬೆಳಕಿಗೆ ಬರುತ್ತಲೇ ಇವೆ. ಇದೀಗ ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಹೆಸರು ಬಳಸಿಕೊಂಡು ಹಣಕ್ಕೆ ಬೇಡಿಕೆ ಇಡುತ್ತಿರುವ ಪ್ರಕರಣ ವರದಿಯಾಗಿದೆ. ಸದ್ಯ ಈ ವಿಚಾರ ಭಾರಿ ಸದ್ದು ಮಾಡುತ್ತಿದೆ. ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಅವರ ಫೋಟೊ ಬಳಸಿಕೊಡು ಅವರ ಹೆಸರಿನಲ್ಲಿ ವಾಟ್ಸ್‌ಆ?ಯಪ್ ಖಾತೆ ತೆರೆದಿರುವ ಆರೋಪಿ



ಇಲಾಖೆಯ ಹಲವು ಅಧಿಕಾರಿಗಳಿಗೆ ಹಣ ನೀಡುವಂತೆ ಸಂದೇಶ ಕಳುಹಿಸಿದ್ದಾನೆ.

ಈ ಸಂದೇಶಕ್ಕೆ ಪ್ರತಿಕ್ರಿಯಿಸಿ ಆರೋಗ್ಯ ಇಲಾಖೆ ಅಧಿಕಾರಿಯೋರ್ವರು 50 ಸಾವಿರ ರೂ. ಕಳೆದುಕೊಂಡಿದ್ದಾರೆ ಎಂದು ವರದಿಯಾಗಿದೆ. ವಾಟ್ಸ್‌ಆಪ್ ಡಿಪಿಯಲ್ಲಿ ಜಿಲ್ಲಾಧಿಕಾರಿ ಹೆಸರು ಮತ್ತು ಫೋಟೊ ಬಳಸಿ ಮೊಬೈಲ್ ಸಂಖ್ಯೆ 84922021308, 84886912413 ಮೂಲಕ ನಕಲಿ ಖಾತೆಗಳನ್ನು ರಚಿಸಿ, ತುರ್ತು ಕಾರ್ಯಕ್ಕೆ ಹಣ ಬೇಕಿದೆ. ತಕ್ಷಣ ಕಳುಹಿಸಿ ಎಂದು ಸಂದೇಶ ರವಾನಿಸಲಾಗಿತ್ತು. ಇದನ್ನು ಕಂಡ ಅಧಿಕಾರಿಯೊಬ್ಬರು ಹಣ ಕಳುಹಿಸಿದ್ದರು. ಇನ್ನೂ ಕೆಲವರು ಅನುಮಾನಗೊಂಡು ಜಿಲ್ಲಾಧಿಕಾರಿ ಗಮನಕ್ಕೆ ತಂದಿದ್ದಾರೆ.

ಈ ಸಂಬಂಧ ಈಗಾಗಲೇ ಪ್ರಕರಣ ಕೂಡ ದಾಖಲಾಗಿದ್ದು, ಸಾಮಾಜಿಕ ಜಾಲತಾಣ ವಾಟ್ಸ್‌ಆಪ್ ಮೂಲಕ ನಕಲಿ ಮೊಬೈಲ್ ಸಂಖ್ಯೆಯಿಂದ ಹೆಸರು ಮತ್ತು ಭಾವಚಿತ್ರವನ್ನು ಬಳಸಿ ಅಧಿಕಾರಿಗಳಿಂದ ಹಣ ಕೇಳುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದಾಗಿ ಡಿಸಿ ಹರ್ಷಲ್ ಭೋಯರ್ ಪ್ರಕಟಣೆ ಮೂಲಕ ತಿಳಿಸಿದ್ದಾರೆ. ಸದ್ಯ ಈ ಪ್ರಕರಣದ ಬಗ್ಗೆ ತನಿಖೆ ನಡೆಯುತ್ತಿದೆ.

## ದಲಿತ ಸಮಾವೇಶಕ್ಕೆ ಹೈಕಮಾಂಡ್ ಅಂಕುಶ

**ಬೆಂಗಳೂರು:** ರಾಜ್ಯದಲ್ಲಿ ನವೆಂಬರ್ ಕ್ರಾಂತಿ, ಅಧಿಕಾರ ಹಂಚಿಕೆಯ ಚರ್ಚೆ, ದಲಿತ ಸಿಎಂ ವಿಚಾರಗಳು ಮುನ್ನಲೆಗೆ ಬಂದಿರುವಾಗಲೇ ದಲಿತ ಸಚಿವರುಗಳೆಲ್ಲಾ ಒಗ್ಗೂಡಿ ನಡೆಸಲು ಉದ್ದೇಶಿಸಿದ್ದ ದಲಿತ ಸಮಾವೇಶಕ್ಕೆ ಕಾಂಗ್ರೆಸ್ ಹೈಕಮಾಂಡ್ ತಡೆ ಹಾಕಿದ್ದು, ಏನೇ ಸಮಾವೇಶಗಳನ್ನು ಮಾಡಿದರೂ ಅದನ್ನು ಪಕ್ಷದ ವೇದಿಕೆ, ಬ್ಯಾನರ್‌ನಲ್ಲೇ ನಡೆಸುವಂತೆ ಕಟ್ಟಪ್ಪಣೆ ವಿಧಿಸಿದೆ.



ರಾಜ್ಯದಲ್ಲಿ ಒಂದು ವೇಳೆ ಮುಖ್ಯಮಂತ್ರಿ ಬದಲಾಯಿಸುವ ತೀರ್ಮಾನವನ್ನು ಹೈಕಮಾಂಡ್ ಕೈಗೊಂಡರೆ ಮುಂದಿನ ಮುಖ್ಯಮಂತ್ರಿ ದಲಿತ ಸಮುದಾಯದವರಿಗೆ ಸಿಗಬೇಕು ಎಂಬ ಹಕ್ಕೋತ್ತಾಯವನ್ನು ಮುಂದಿಟ್ಟುಕೊಂಡು ದಲಿತ ಸಚಿವರುಗಳ ಪ್ರದರ್ಶನಕ್ಕಾಗಿ ದಲಿತ ಸಮಾವೇಶವನ್ನು ನವೆಂಬರ್‌ನಲ್ಲಿ ನಡೆಸಲು ಮುಂದಾಗಿದ್ದರು.

ಈ ದಲಿತ ಸಮಾವೇಶದ ಮೂಲಕ ದಲಿತರ ಒಗ್ಗಟ್ಟನ್ನು ಪ್ರದರ್ಶಿಸಿ ದಲಿತ ಸಿಎಂ ಬೇಡಿಕೆಯನ್ನು ಈಡೇರಿಸಿಕೊಳ್ಳುವ ಉದ್ದೇಶ ದಲಿತ ಸಚಿವರುಗಳಾದ ಡಾ. ಜಿ. ಪರಮೇಶ್ವರ್, ಸತೀಶ್ ಜಾರಕಿಹೊಳಿ, ಡಾ. ಹೆಚ್.ಸಿ. ಮಹದೇವಪ್ಪ, ಕೆ.ಹೆಚ್. ಮುನಿಯಪ್ಪ, ಆರ್.. ತಿಮ್ಮಾಪುರ, ಶಿವರಾಜ್ ತಂಗಡಗಿ ಇವರುಗಳು ಹೊಂದಿದ್ದರು.

ಪಕ್ಷದ ವೇದಿಕೆ ಬಿಟ್ಟು ಪ್ರತ್ಯೇಕವಾಗಿ ಯಾವುದೇ ದಲಿತ ಸಮಾವೇಶ ಬೇಡ. ಏನೇ ಮಾಡಿದರೂ ಅದನ್ನು ಪಕ್ಷದ ಬ್ಯಾನರ್ ಅಡಿಯೇ ಮಾಡಿ ಎಂದು ಹೈಕಮಾಂಡ್ ಈ ಸಚಿವರುಗಳಿಗೆ ಸೂಚನೆ ನೀಡಿದೆ ಎಂದು ಕಾಂಗ್ರೆಸ್ ಮೂಲಗಳು ಹೇಳಿವೆ.

## ಟ್ರಂಪ್–ಕ್ಸಿ ಜಿನ್ ಪಿಂಗ್ ಮಹತ್ವದ ಮಾತುಕತೆ



**ಸಿಯೋಲ್:** ಅಮೆರಿಕಾ ಮತ್ತು ಚೀನಾ ನಡುವೆ ವ್ಯಾಪಾರ ಯುದ್ಧ ನಡೆಯುತ್ತಿರುವ ನಡುವೆಯೇ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಚೀನಾ ಅಧ್ಯಕ್ಷ ಕ್ಸಿ ಜಿನ್ ಪಿಂಗ್ 6 ವರ್ಷಗಳ ಬಳಿಕ ಪರಸ್ಪರ ಭೇಟಿಯಾಗಿ ಮಾತುಕತೆ ನಡೆಸಿರುವುದು ಮಹತ್ವ ಪಡೆದುಕೊಂಡಿದೆ.

ಟ್ರಂಪ್ ಅಮೆರಿಕ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಬಳಿಕ ಚೀನಾ ಅಧ್ಯಕ್ಷರನ್ನು ಮೊದಲ ಬಾರಿಗೆ ಭೇಟಿ ಮಾಡಿದ್ದಾರೆ. ದಕ್ಷಿಣ ಕೊರಿಯಾದ ಬುಸಾನ್‌ನಲ್ಲಿ ನಡೆದ ಸಭೆಯಲ್ಲಿ 2019ರ ನಂತರ ಕೋವಿಡ್ ಆರೋಪ, ಪ್ರತ್ಯಾರೋಪದ ಬಳಿಕ ಇದೀಗ ವ್ಯಾಪಾರ ಯುದ್ಧ ನಡೆಯುತ್ತಿರುವ ಸಮಯದಲ್ಲಿ ವಿಶ್ವದ ಬಲಿಷ್ಠ ಆರ್ಥಿಕತೆ ಹೊಂದಿರುವ ದೇಶಗಳ ನಾಯಕರು ಭೇಟಿ ಮಾಡಿ ಚರ್ಚೆ ನಡೆಸಿರುವುದು ಕುತೂಹಲ ಕೆರಳಿಸಿದೆ.

ಡೊನಾಲ್ಡ್ ಟ್ರಂಪ್ ಕಳೆದ ಜನವರಿಯಲ್ಲಿ ಎರಡನೇ ಭಾರಿಗೆ ಅಧಿಕಾರ ಸ್ವೀಕರಿಸಿದ ನಂತರ ಭೇಟಿ ಇದಾಗಿದೆ. ಇದಕ್ಕೂ ಮುನ್ನ ಚೀನಾ ಅಧ್ಯಕ್ಷರನ್ನು ಡೊನಾಲ್ಡ್ ಟ್ರಂಪ್ ಅವರು ಮೊದಲ ಅವಧಿಯಲ್ಲಿ ಅಧ್ಯಕ್ಷರಾಗಿದ್ದ ವೇಳೆ 2019ರಲ್ಲಿ ಒಸಾಕದಲ್ಲಿ ಇಬ್ಬರೂ ನಾಯಕರು ಪರಸ್ಪರ ಭೇಟಿ ಮಾಡಿ ಚರ್ಚೆ ನಡೆಸಿದ್ದರು. ಅದು ಅವರ ಕೊನೆಯ ಭೇಟಿಯಾಗಿತ್ತು.

ಆರು ವರ್ಷಗಳಲ್ಲಿ ಮೊದಲ ಬಾರಿಗೆ, ಡೊನಾಲ್ಡ್ ಟ್ರಂಪ್ ಮತ್ತು ಅವರ ಚೀನಾದ ಪ್ರತಿರೂಪ ಕ್ಸಿ ಜಿನ್‌ಪಿಂಗ್ ದಕ್ಷಿಣ ಕೊರಿಯಾದಲ್ಲಿ ನಡೆದ ಎಪಿಇಸಿ ಶೃಂಗಸಭೆಯ ಹೊರತಾಗಿ ಮುಖಾಮುಖಿ ವ್ಯಾಪಾರ ಉದ್ವಿಗ್ನ ಕಡಿಮೆ ಮಾಡುವ ನಿಟ್ಟಿನಲ್ಲಿ ವಿಶ್ವದ ಎರಡು ದೊಡ್ಡ ಆರ್ಥಿಕತೆ ದೇಶಗಳ ನಡುವೆ ಸ್ಥಿರತೆ ಪುನಃಸ್ಥಾಪಿಸುವ ಗುರಿಯೊಂದಿಗೆ ಈ ಸಭೆ ನಡೆದಿದೆ.

ಬುಸಾನ್‌ನ ಗಿಮ್ಹೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಮಾತನಾಡಿದ ಡೊನಾಲ್ಡ್ ಟ್ರಂಪ್ ಅವರು ಪರಸ್ಪರ ಚೆನ್ನಾಗಿ ತಿಳಿದಿದ್ದೇವೆ, ನಮಗೆ ಉತ್ತಮ ಸಂಬಂಧವಿದೆ. ಬಹಳ ಯಶಸ್ವಿ ಸಭೆ ನಡೆಸಿದ್ದೇವೆ ಇಬ್ಬರೂ ನಾಯಕರು ಭೇಟಿಯಾಗಿ ಚರ್ಚೆ ನಡೆಸಿದ್ದೇವೆ. ವ್ಯಾಪಾರ ಒಪ್ಪಂದಕ್ಕೆ ಮುಂದೆ ಸಹಿ ಹಾಕಬಹುದು ಎನ್ನುವ ವಿಶ್ವಾಸ ಹೊರಹಾಕಿದ್ದಾರೆ.

ಈ ವಾರದಲ್ಲಿ ಎರಡೂ ದೇಶಗಳ ಅಧಿಕಾರಿಗಳು ಸುಂಕದ ವಿಚಾರ ಕುರಿತಂತೆ ಮಾತುಕತೆ ನಡೆಸಿ ಯೋಜನೆಯೊಂದನ್ನು ತಯಾರಿಸಿದ್ದಾರೆ. ಇದು ಉತ್ತಮ ಫಲಿತಾಂಶ ತಂದುಕೊಡಲಿದೆ ಎಂದು ಟ್ರಂಪ್ ಆಶಯ ವ್ಯಕ್ತಪಡಿಸಿದ್ದಾರೆ. ಟ್ರಂಪ್ ಹಾಗೂ ಕ್ಸಿ ಜಿನ್ ಪಿಂಗ್ ಜೊತೆ ಅಧಿಕಾರಿಗಳು ಮಾತುಕತೆ ನಡೆಸಿದ್ದಾರೆ ಎಂದು ಮಾಧ್ಯಮಗಳು ವರದಿ ಮಾಡಿವೆ.

ಚೀನಾ ಅಧ್ಯಕ್ಷ ಕ್ಸಿ ಜಿನ್ ಪಿಂಗ್ ಜೊತೆ ಯಾವಾಗಲೂ ಉತ್ತಮ ಸಂಬಂಧವನ್ನು ಹೊಂದಿದ್ದೇವೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ. ಅಮೆರಿಕಾದ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸೆಂಟ್, ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ, ವಾಣಿಜ್ಯ ಕಾರ್ಯದರ್ಶಿ ಹೊವಾರ್ಡ್ ಲುಟ್ನಿಕ್, ಶ್ವೇತಭವನದ ಮುಖ್ಯಸ್ಥ ಸೂಸಿ ವೈಲ್ಸ್ ಮತ್ತು ಅಮೆರಿಕಾ ವ್ಯಾಪಾರ ಪ್ರತಿನಿಧಿ ಜೇಮಿಸನ್ ಗ್ರೀರ್ ಸೇರಿದ್ದಾರೆ.

## ಸ್ಮಾರ್ಟ್ ಲಾಕರ್ ಭ್ರಷ್ಟಾಚಾರ–ಯು.ಟಿ.ಖಾದರ್ ರಾಜೀನಾಮೆ ನೀಡಬೇಕೆಂದು ಶಾಸಕ ಸಿಮೆಂಟ್ ಮಂಜುನಾಥ್ ಆಗ್ರಹ



**ಬೆಂಗಳೂರು:** ಸ್ಪೀಕರ್ ಯು.ಟಿ. ಖಾದರ್ ಅವರ ಮೂಲಕ ನಡೆದ ಸ್ಮಾರ್ಟ್ ಲಾಕ್ ಅಳವಡಿಕೆ ವಿಚಾರದಲ್ಲಿ ಬಹುದೊಡ್ಡ ಭ್ರಷ್ಟಾಚಾರ ಆಗಿದೆ. ಇದನ್ನು ನ್ಯಾಯಾಂಗ ತನಿಖೆಗೆ ಒಳಪಡಿಸಬೇಕು ಮತ್ತು ಯು.ಟಿ. ಖಾದರ್ ಅವರು ಕೂಡಲೇ ರಾಜೀನಾಮೆ ಕೊಡಬೇಕು ಎಂದು ಎಸ್.ಸಿ. ಮೋರ್ಚಾ ರಾಜ್ಯ ಅಧ್ಯಕ್ಷ ಮತ್ತು ಶಾಸಕ ಸಿಮೆಂಟ್ ಮಂಜುನಾಥ್ ಒತ್ತಾಯಿಸಿದ್ದಾರೆ. ನಗರದ ಶಾಸಕರ ಭವನ ಸಂಖ್ಯೆ 3ರ, 3ನೇ ಮಹಡಿಯ ಕೊಠಡಿ ಸಂಖ್ಯೆ 345ರಲ್ಲಿ ಗುರುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸ್ಪೀಕರ್ ಯು.ಟಿ. ಖಾದರ್ ಅವರು ತಮ್ಮ ಕಚೇರಿ ಮೂಲಕ ಶಾಸಕರ ಭವನದ 224 ಕೊಠಡಿಗಳಿಗೆ ಸ್ಮಾರ್ಟ್ ಲಾಕ್ (ಡೋರ್ ಲಾಕ್) ಅಳವಡಿಸಿದ್ದಾರೆ. ಶಾಸಕರು ಇದನ್ನು ಕೇಳಿರದಿದ್ದರೂ ಹಾಕಿದ್ದು, ಲಾಕ್ ವೆಚ್ಚ ಮತ್ತು ಬಿಲ್ ಖರ್ಚಿಗೂ ಅಜಗಜಾಂತರ ವ್ಯತ್ಯಾಸವಿದೆ. ಒಂದು ಬೀಗ ಖರೀದಿ ವೆಚ್ಚದಲ್ಲಿ 3 ಲಾಕ್ ಖರೀದಿಸಬಹುದಾದಷ್ಟು ವೆಚ್ಚವನ್ನು ತೋರಿಸಿದ್ದಾರೆ ಎಂದು ಆರೋಪಿಸಿದರು. ಉತ್ತಮ ಗುಣಮಟ್ಟದ ಸ್ಮಾರ್ಟ್ ಲಾಕ್ ಬೆಲೆ 11,744 ರೂ. ಎಂದು ಅವರು ಮಾರುಕಟ್ಟೆ ದರದ ಕುರಿತ ವಿವರವನ್ನು ಪ್ರದರ್ಶಿಸಿದರು. ಇದಕ್ಕೆ ಇವರು 49,300 ರೂ. ದರ ವಿಧಿಸಿದ್ದಾರೆ. ಟೆಂಡರ್ ಪ್ರಕ್ರಿಯೆ ಸರಿಯಾಗಿ ನಡೆದಿಲ್ಲ. ಉದ್ದೇಶಪೂರ್ವಕವಾಗಿ ತಮ್ಮ ಜಿಲ್ಲೆಯ ಆತ್ಮೀಯರಿಗೆ ಟೆಂಡರ್ ಕೊಡಿಸಿದ್ದು, ಸುಮಾರು 37,500 ರೂ. ಗಳಷ್ಟು ಹೆಚ್ಚು ಬಿಲ್ ಆಗಿದೆ ಎಂದು ದೂರಿದರು. ನಾವು ಕೇಳದಿದ್ದರೂ ಸ್ಮಾರ್ಟ್ ಲಾಕರ್ ಕೊಟ್ಟಿದ್ದು, ಅದರ ಬೆಲೆಯಲ್ಲೂ ಅಜಗಜಾಂತರ ವ್ಯತ್ಯಾಸ ಇದೆ. ಮಾರುಕಟ್ಟೆ ದರ 8,100 ರೂ ಇದ್ದು, 35 ಸಾವಿರ ಬಿಲ್ ಮಾಡಿದ್ದಾರೆ. ಸಾರ್ವಜನಿಕರು ಕಟ್ಟುವ ತೆರಿಗೆ ಹಣವನ್ನು ಅನವಶ್ಯಕವಾಗಿ ದುಂದು ವೆಚ್ಚ ಮಾಡಿ ಅವರ ಕಚೇರಿ ವತಿಯಿಂದ ದೊಡ್ಡ ಭ್ರಷ್ಟಾಚಾರ ನಡೆದಿದೆ ಎಂದು ಅವರು ಆರೋಪಿಸಿದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**